ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೧೫೭**

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

**ಸೋಮವಾರ, ದಿನಾಂಕ : ೦೯ನೇ ಫೆಬ್ರವರಿ, ೨೦೧೫**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಪಾರ್ಕಿಂಗ್‌ಗಳಲ್ಲಿ ಅನಧಿಕೃತವಾಗಿ ಹಣ ವಸೂಲಿ ಮಾಡುತ್ತಿರುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೪ (೫೨೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನದ ಹೊಸ ಬಸ್ ನಿಲ್ದಾಣದ ಪಾರ್ಕಿಂಗ್‌ಗೆ ಟೆಂಡರ್‌ನಲ್ಲಿ ನಿಗದಿಯಾದ ಪಾರ್ಕಿಂಗ್ ಶುಲ್ಕವೆಷ್ಟು ;

(ಆ) ಟೆಂಡರ್‌ನಲ್ಲಿ ನಿಗದಿಯಾದ ಪಾರ್ಕಿಂಗ್ ಶುಲ್ಕಕ್ಕಿಂತ ಹೆಚ್ಚಿಗೆ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅನಧಿಕೃತವಾಗಿ ವಸೂಲಿ ಮಾಡುತ್ತಿರುವ ಪಾರ್ಕಿಂಗ್ ಶುಲ್ಕವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆಯುರ್ವೇದ, ಹೋಮಿಯೋಪತಿ ಪದ್ಧತಿಗಳಿಗೆ ಪ್ರೋತ್ಸಾಹ ನೀಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೫ (೫೨೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆಯುರ್ವೇದ ಮತ್ತು ಹೋಮಿಯೋಪತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ;



(ಆ) ಅಲೋಪತಿ ವೈದ್ಯ ಪದ್ಧತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ರೋಗಿಗಳಿಗೆ ತೊಂದರೆಯಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಆಯುರ್ವೇದ ಮತ್ತು ಹೋಮಿಯೋಪತಿ ಆರೋಗ್ಯ ಕೇಂದ್ರಗಳನ್ನು ಹೆಚ್ಚು ತೆರೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಳೆದ ಆರು ವರ್ಷಗಳಿಂದ ಕೆ.ಪಿ.ಎಸ್.ಸಿ. ಯಿಂದ ಗುತ್ತಿಗೆ ಆಧಾರದ ಮೇಲೆ ಆಯುಷ್ ವಿಭಾಗದಲ್ಲಿ ಎಷ್ಟು ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಈ) ಆಯುರ್ವೇದ ಮತ್ತು ಹೋಮಿಯೋಪತಿ ಪದ್ಧತಿಯನ್ನು ಹೆಚ್ಚು ಪ್ರಚಲಿತ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆಹಾರ ಪ್ರಯೋಗಾಲಯಗಳಲ್ಲಿ ಸಿಬ್ಬಂದಿ ಕೊರತೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೬ (೫೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆ ಸುಪರ್ದಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ರಾಜ್ಯದ ನಾಲ್ಕು ವಿಭಾಗೀಯ ಆಹಾರ ಪ್ರಯೋಗಾಲಯಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಇವುಗಳ ಪೈಕಿ ಖಾಲಿ ಇರುವ ಹುದ್ದೆಗಳು ಎಷ್ಟು ;

(ಆ) ಸದರಿ ಆಹಾರ ಪ್ರಯೋಗಾಲಯಗಳಲ್ಲಿ ಸರ್ಕಾರದ ಯಾವ ಯೋಜನೆಗಳ ಆಹಾರವನ್ನು ಪರೀಕ್ಷೆ ಮಾಡಲಾಗುತ್ತಿದೆ ;

(ಇ) ಆಹಾರ ಸುರಕ್ಷತಾ ಕಾಯ್ದೆ ೨೦೧೧ರ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಆಸ್ಪತ್ರೆಗಳಲ್ಲಿ ರಾಸಾಯನಿಕ ಖರೀದಿಯಲ್ಲಿ ನಡೆದಿರುವ ಅವ್ಯವಹಾರ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೭ (೫೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೧೯ ಜಿಲ್ಲೆಗಳಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ೨೨ ಬಗೆಯ ರಾಸಾಯನಿಕ ಖರೀದಿಯ ಅವ್ಯವಹಾರ ಕುರಿತು ಡಾ॥ ಕೆ.ಎಚ್. ನರಸಿಂಹಮೂರ್ತಿ ಸಲ್ಲಿಸಿದ ತನಿಖಾ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ತನಿಖಾ ವರದಿ ರೀತ್ಯ ಆಗಿರುವ ಅವ್ಯವಹಾರದ ಮೊಬಲಗೆಷ್ಟು ; ಅವ್ಯವಹಾರ ನಡೆಸಿದವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ರಾಸಾಯನಿಕ ಇತರೆ ವಸ್ತುಗಳ ಖರೀದಿಯಲ್ಲಿ ಆಗುವ ಅವ್ಯವಹಾರ ತಡೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿನ ಔಷಧಿಗಳ ಮತ್ತು ರಾಸಾಯನಿಕಗಳ ಗುಣಮಟ್ಟ ಕಾಯ್ದುಕೊಳ್ಳಲು ಅನುಸರಿಸುತ್ತಿರುವ ಕ್ರಮಗಳೇನು ?



## ವಸತಿ ಶಾಲೆ ಮಕ್ಕಳಿಗೆ ಬಟ್ಟೆ ಒದಗಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೮ (೫೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ;

(ಆ) ಈ ವಸತಿ ಶಾಲೆಗಳ ಬಡ ಮಕ್ಕಳಿಗೆ ಸಮವಸ್ತ್ರ ನೀಡಲಾಗಿದೆಯೇ ; ಸಮವಸ್ತ್ರ ನೀಡುವ ಜವಾಬ್ದಾರಿ ಯಾರದು ; ಸಮವಸ್ತ್ರ ನೀಡಲು ಕೈಗೊಂಡಿರುವ ಕ್ರಮಗಳೇನು ;

(ಇ) ವಸತಿ ಶಾಲೆಗಳಿಗೆ ಅತ್ಯಗತ್ಯವಾದ ವಸ್ತುಗಳನ್ನು ಕೊಳ್ಳಲು ಹೆಚ್ಚುವರಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ?

## ಸರ್ಕಾರಿ ಸಿಬ್ಬಂದಿಗಳಿಗೆ ಆಹಾರ ವಿತರಣೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೯ (೫೨೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ಸಮರ್ಪಕವಾಗಿ ಆಹಾರ ಧಾನ್ಯ ವಿತರಣೆ ಮಾಡುತ್ತಿರುವುದು ನಿಜವಲ್ಲವೇ ;

(ಆ) ಹಾಗಿದ್ದಲ್ಲಿ, ರಾಜ್ಯದ ಉಳಿದ ಎಲ್ಲಾ ಇಲಾಖೆಯ ಸರ್ಕಾರಿ ಸಿಬ್ಬಂದಿಗಳಿಗೆ ಆಹಾರ ಧಾನ್ಯ ವಿತರಣೆ ಮಾಡದೆ ಇರುವುದಕ್ಕೆ ಕಾರಣಗಳೇನು ; ಇತರೆ ಇಲಾಖೆಯ ನೌಕರರಿಗೂ ವಿತರಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಇ) ಉಳಿದ ಇಲಾಖೆಗಳ ಸಿಬ್ಬಂದಿಗಳಿಗೂ ವಿತರಿಸುವುದರಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ಹೊರೆ ಬೀಳಲಿದೆ ; (ಮಾಹಿತಿ ನೀಡುವುದು)

(ಈ) ಪೊಲೀಸ್ ಇಲಾಖೆಯ ಆಹಾರ ಧಾನ್ಯ ಪಡೆಯುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಆಯುಷ್ ಆಸ್ಪತ್ರೆಗಳಿಗೆ ಮೂಲ ಸೌಲಭ್ಯ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೦ (೫೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಯುಷ್ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆಯುಷ್ ಇಲಾಖೆಯಲ್ಲಿ ಒಟ್ಟು ಎಷ್ಟು ವೈದ್ಯಾಧಿಕಾರಿ ಮತ್ತು ವೈದ್ಯರು ಯಾವ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; ಹಾಗೆ ಇದರಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಮತ್ತು ಮೂಲಕ ನೇಮಕ ಮಾಡಿಕೊಂಡ ವೈದ್ಯರ ಸಂಖ್ಯೆ ; (ಮಾಹಿತಿ ಒದಗಿಸುವುದು)



(ಇ) ಆಯುಷ್ ಆಸ್ಪತ್ರೆಗಳಲ್ಲಿ ಸರಿಯಾಗಿ ಔಷಧಿಗಳು ಸಿಗದೆ ರೋಗಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳುವುದೇ ;

(ಈ) ರಾಜ್ಯದಲ್ಲಿರುವ ಆಯುಷ್ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಆಸ್ಪತ್ರೆವಾರು ವಿವರ ನೀಡುವುದು)

(ಉ) ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿ ಆಯುಷ್ ಆಸ್ಪತ್ರೆಗಳು ಸ್ಥಾಪಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗಿನಿಂದ ಜಾರಿಗೆ ತರಲಾಗುವುದು ;

(ಊ) ಬೆಂಗಳೂರು ಆಯುಷ್ ಆಸ್ಪತ್ರೆಯಲ್ಲಿ ಎಕರೆ ಎಕ್ಸರೆ ಹಾಗೂ ಮೂಲಭೂತ ಸೌಲಭ್ಯಗಳಿಲ್ಲದೆ ನಾಗರೀಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ತಪ್ಪಿಸಲು ಕೈಗೊಳ್ಳುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಹಾವುಗಳ ಕಡಿತದಿಂದ ಸಾವನ್ನಪ್ಪುತ್ತಿರುವವರು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೧ (೫೩೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಬರುವ ಹಿಂದುಳಿದ ವರ್ಗಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿ ನಿಲಯಗಳಲ್ಲಿ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಈ ಪ್ರಾಂತ್ಯದ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗ, ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿಗಳ ಒಟ್ಟು ಎಷ್ಟು ವಿದ್ಯಾರ್ಥಿ ನಿಲಯಗಳಲ್ಲಿ ಎಷ್ಟು ವಿದ್ಯಾರ್ಥಿಗಳು ಇದ್ದಾರೆ ? (ನಿಲಯವಾರು ಮಾಹಿತಿ ನೀಡುವುದು)

## ಕೊಳವೆ ಬಾವಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೨ (೫೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ನಿಗಮದ ವತಿಯಿಂದ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವರ್ಷವಾರು ಫಲಾನುಭವಿಗಳ ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಹಾಗಿದ್ದಲ್ಲಿ, ಯೋಜನೆಯಲ್ಲಿ ಮಂಜೂರಾದ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಸಲಾಗಿದೆಯೇ ; (ವರ್ಷವಾರು ಫಲಾನುಭವಿಗಳ ವಿವರ ನೀಡುವುದು)

(ಇ) ಸದರಿ ಕೆಲಸ ವಿಳಂಬವಾಗಲು ಕಾರಣಗಳೇನು ಸಂಪೂರ್ಣ ಮಾಹಿತಿ ನೀಡುವುದು ?



## ಬೀದರ ಜಿಲ್ಲೆಯಲ್ಲಿ ಹೊರ ರೋಗಿಗಳ ಪರದಾಟ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೬೩ (೫೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ ಜಿಲ್ಲೆಯಲ್ಲಿ ಮತ್ತು ಬೀದರ ಜಿಲ್ಲಾ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹೊಸ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಯ ಸುಮಾರು ವೈದ್ಯರು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡದೇ ತಮ್ಮ ಖಾಸಗಿ ಆಸ್ಪತ್ರೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿರುವುದನ್ನು ತಡೆಯಲು ಸರ್ಕಾರವು ಅಂತಹ ವೈದ್ಯರ ಮೇಲೆ ಕೈಗೊಳ್ಳುವ ಶಿಸ್ತಿನ ಕ್ರಮಗಳೇನು ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಹಾಜರಾಗದ ವೈದ್ಯರ ಮತ್ತು ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗದ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡುತ್ತಿರುವ ಸೌಲಭ್ಯಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೪ (೫೩೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡುತ್ತಿರುವ ಸೌಲಭ್ಯಗಳು

ಯಾವುವು ; ಮತ್ತು ಅವುಗಳನ್ನು ಅಧಿಕಾರ ವಿಕೇಂದ್ರಿಕರಣದ ಅಡಿಯಲ್ಲಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್‌ಗಳ ಸಹಕಾರದೊಂದಿಗೆ ರಾಜ್ಯ ಯೋಜನೆಗಳನ್ನು ಅನುಷ್ಠಾನಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡುವಂತಹ ಸೌಲಭ್ಯಗಳನ್ನು ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ಗಳ ಸಹಕಾರದೊಂದಿಗೆ ಅನುಷ್ಠಾನಗೊಳಿಸುವುದರಿಂದ ಈ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನವಾಗುವುದೆಂದು ಸರ್ಕಾರ ಭಾವಿಸಿದೆಯೇ ?

## ಉಡುಪಿ ಜಿಲ್ಲೆಯ ಆರೋಗ್ಯ ಇಲಾಖೆಯಲ್ಲಿನ ಗುತ್ತಿಗೆ ಆಧಾರಿತ ನೌಕರರ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೫ (೫೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ತಿಂಗಳುಗಳ ವೇತನ ನೀಡಲು ಬಾಕಿಯಿದೆ ; (ಕಛೇರಿವಾರು, ಹುದ್ದೆವಾರು ವಿವರ ನೀಡುವುದು)



(ಆ) ಉಡುಪಿ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಿಂದಿನ ಸಾಲಿನ ವೇತನ ನೀಡಲು ಇರುವ ಬಾಕಿ ಎಷ್ಟು ; (ವರ್ಷವಾರು, ಹುದ್ದೆವಾರು, ಕಛೇರಿವಾರು ವಿವರ ನೀಡುವುದು) ಈ ಬಾಕಿ ವೇತನವನ್ನು ಪಾವತಿಸುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಉಡುಪಿ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಗುತ್ತಿಗೆ ಆಧಾರದಲ್ಲಿ ಸಿಬ್ಬಂದಿಗಳನ್ನು ಪೂರೈಸಲು ಗುತ್ತಿಗೆ ಪಡೆದ ಸಂಸ್ಥೆ ಗುತ್ತಿಗೆ ಆಧಾರಿತ ಸಿಬ್ಬಂದಿಗಳಿಂದ ಪಡೆದ ಪಿ.ಎಸ್.ಐ. ಸಂಬಂಧಿತ ಇಲಾಖೆಗೆ ಪಾವತಿಸದೇ ಇದ್ದಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದಲ್ಲಿ ಪಡಿತರ ಚೀಟಿ ಆಯ್ಕೆ, ಮುದ್ರಣ ವಿತರಣೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೬ (೫೩೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಡಿತರ ಚೀಟಿ ಫಲಾನುಭವಿಗಳ ಆಯ್ಕೆ, ಪಡಿತರ ಚೀಟಿ ಮುದ್ರಣ ಮತ್ತು ವಿತರಣೆ ಇವುಗಳೆಲ್ಲವು ಬೇರೆ ಬೇರೆ ಕಛೇರಿಗಳ ಮೂಲಕ ನಿರ್ವಹಿಸಲ್ಪಡುತ್ತಿರುವುದರಿಂದ ಹೊಣೆಗಾರಿಕೆಯಿಂದ ನುಣುಚಿಕೊಳ್ಳುವ ಇಲಾಖೆಗಳು ಸರ್ಕಾರವನ್ನು ಮಾತ್ರ ಹೊಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಗ್ರಾಮ ಪಂಚಾಯತ್‌ಗಳಲ್ಲಿ ವಿತರಣೆಯಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖಾ ಕಛೇರಿಗಳಲ್ಲಿ ವಿತರಣೆಯಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯತ್‌ವಾರು, ಆಹಾರ ಮತ್ತು ನಾಗರೀಕ ಸರಬರಾಜು ಕಛೇರಿವಾರು ಪ್ರತ್ಯೇಕ ವಿವರ ನೀಡುವುದು)

(ಇ) ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳನ್ನು ಕತ್ತಲೆಯಲ್ಲಿಟ್ಟು ಹಿಂಬರಹವನ್ನು ನೀಡದೆ ಅತಂತ್ರವಾಗಿ ಇಡುವ ಇಲಾಖಾ ಉದ್ದೇಶವೇನು ; ಮತ್ತು ಇದನ್ನು ಪಾರದರ್ಶಕವಾಗಿ ವ್ಯವಹರಿಸುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಉಡುಪಿ ಜಿಲ್ಲೆಯ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಗಳಲ್ಲಿ ಜಿಲ್ಲಾಧಿಕಾರಿ ಅಥವಾ ತಹಶೀಲ್ದಾರರಿಂದ ನೇಮಕವಾಗದ ಅನಾಮಧೇಯ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಸಿಬ್ಬಂದಿಗಳಿಗೆ ಯಾವ ಲೆಕ್ಕಶೀರ್ಷಿಕೆಯಡಿ ವೇತನ ಪಾವತಿಸಲಾಗುತ್ತಿದೆ ?



## ಉಡುಪಿಯ ಕೆ.ಎಸ್.ಆರ್.ಟಿ.ಸಿ. ಡಿಪೋಗೆ ಬಂದ ಅನುದಾನ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೭ (೫೩೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಕೆ.ಎಸ್.ಆರ್.ಟಿ.ಸಿ. ಡಿಪೋಗೆ ಇಲ್ಲಿಯತನಕ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ವಿನಿಯೋಗಿಸಲ್ಪಟ್ಟ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು) ಈ ಕೆ.ಎಸ್.ಆರ್.ಟಿ.ಸಿ. ಡಿಪೋನ ಒಟ್ಟು ವಿಸ್ತೀರ್ಣವೆಷ್ಟು ; ಸರ್ವೆ ನಂಬರ್ ಯಾವುದು ;

(ಆ) ಉಡುಪಿ ಜಿಲ್ಲೆಯ ಉಡುಪಿಯಲ್ಲಿರುವ ಕೆ.ಎಸ್.ಆರ್.ಟಿ.ಸಿ. ಡಿಪೋವನ್ನು ಯಾವ ಉದ್ದೇಶಗಳಿಗಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಸ್ವಾಧೀನ ಪಡಿಸಿಕೊಳ್ಳಲು ಇಚ್ಛಿಸಿರುತ್ತಾರೆ ;

(ಇ) ಉಡುಪಿಯಲ್ಲಿರುವ ಕೆ.ಎಸ್.ಆರ್.ಟಿ.ಸಿ. ಡಿಪೋವನ್ನು ರಾಷ್ಟ್ರೀಯ ಹೆದ್ದಾರೆ ಪ್ರಾಧಿಕಾರವು ವಶಪಡಿಸಿಕೊಳ್ಳಲು ಹುನ್ನಾರ ನಡೆದಲ್ಲಿ ಸಾರಿಗೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕೆಲವು ಅಧಿಕಾರಿಗಳು ಶಾಮೀಲಾಗಿರುವುದರಿಂದ ಇದನ್ನು ಲೋಕಾಯುಕ್ತ ತನಿಖೆಗೆ ಒಳಪಡಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ರಾಜ್ಯದಲ್ಲಿ ೧೦೮ ಅಂಬ್ಯುಲೆನ್ಸ್ ಸೇವೆ ಕಲ್ಪಿಸಲು ಇರುವ ಮಾನದಂಡ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೮ (೫೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦೮ ಅಂಬ್ಯುಲೆನ್ಸ್ ಸೌಲಭ್ಯವನ್ನು ಕಲ್ಪಿಸಲು ಇರುವ ಮಾನದಂಡ ಮತ್ತು ಮೂಲಭೂತ ಅವಶ್ಯಕತೆಗಳೇನು ; ಇಂತಹ ಮೂಲಭೂತ ಅವಶ್ಯಕತೆಗಳನ್ನು ಕಲ್ಪಿಸಲು ಇಲಾಖೆ ತೆಗೆದುಕೊಂಡ ಕ್ರಮಗಳೇನು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ಕಡೆಗಳಲ್ಲಿ ೧೦೮ ಅಂಬ್ಯುಲೆನ್ಸ್‌ಗಳನ್ನು ಸೇವೆಯಿಂದ ವಾಪಸ್ಸು ಪಡೆಯಲಾಗಿದೆ ; ವಾಪಸ್ಸು ಪಡೆಯಲು ಕಾರಣವೇನು ?

## ಶಾಸಕರ ನಿಧಿಯಿಂದ ಸೋಲಾರ್ ದೀಪ ಅಳವಡಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೯ (೫೪೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಇತ್ತೀಚಿನ ಮಾರ್ಗಸೂಚಿಯಂತೆ, ಶಾಸಕರ ವಿವೇಚನಾ ನಿಧಿಯಿಂದ ಸೋಲಾರ್ ದಾರಿದೀಪ ಅಳವಡಿಕೆಯ ಅವಕಾಶ ಹಿಂಪಡೆದುದ್ದಕ್ಕೆ ಕಾರಣಗಳೇನು ; ಸದರಿ ಮಾರ್ಗಸೂಚಿ ಹಿಂದಿನ ವರ್ಷಕ್ಕೂ ಅನ್ವಯವಾಗುವುದೇ ;



(ಆ) ಕರಾವಳಿ ಜಿಲ್ಲೆಯೂ ಸೇರಿದಂತೆ, ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ದೀಪದ ಸಂಪರ್ಕದ ಕೊರತೆ ಇರುವೆಡೆಯಲ್ಲಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸೋಲಾರ್ ದಾರಿದೀಪ ಅಳವಡಿಕೆ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾನೂನು, ನಿಯಮಗಳನ್ನು ರೂಪಿಸುವ ಶಾಸಕರ ವಿವೇಚನಾ ನಿಧಿ ಬಳಕೆಯಲ್ಲಿ, ಶಾಸಕರ ಗಮನಕ್ಕೆ ತಾರದೇ ಮಾರ್ಗಸೂಚಿ ಹೊರಡಿಸಿರುವ ಅಧಿಕಾರಿಗಳ ಸ್ವೇಚ್ಛಾಚಾರ ಸರಿಯೇ ;

(ಈ) ಪುನರಪಿ, ಸೋಲಾರ್ ದಾರಿದೀಪ ಅಳವಡಿಕೆ ಅವಕಾಶ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಪಡಿತರ ಚೀಟಿಯ ಅರ್ಜಿಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೦ (೫೪೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ವಿಭಾಗವನ್ನು ಸೇರ್ಪಡೆಗೊಳಿಸಲಾಗುವುದೇ ;

(ಆ) ಹಾಗಿದ್ದಲ್ಲಿ, ಈ ಬಗ್ಗೆ ಇದುವರೆಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಈ ಬಗ್ಗೆ ಆರೋಗ್ಯ ಇಲಾಖೆಯಿಂದ ಪ್ರಸ್ತಾವನೆ ಬಂದಿದೆಯೇ ;

(ಈ) ಈ ಸೇರ್ಪಡೆಯ ಬಗ್ಗೆ ಅಂತಿಮ ಆದೇಶವನ್ನು ಯಾವಾಗ ಹೊರಡಿಸಲಾಗುವುದು, ಪ್ರಸ್ತುತ ಇದು ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಉ) ಈ ಬಗ್ಗೆ ಸರ್ಕಾರದ ನಿಲುವೇನು ?

## ವಾಜಪೇಯಿ ಆರೋಗ್ಯಶ್ರೀ ಯೋಜನೆಯನ್ನು ವಿಸ್ತರಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೧ (೫೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ "ವಾಜಪೇಯಿ ಆರೋಗ್ಯಶ್ರೀ" ಸೌಲಭ್ಯ ಲಭ್ಯವಿರುವ ಆಸ್ಪತ್ರೆಗಳಾವುವು ;

(ಆ) ಅತೀ ಕಡಿಮೆ ಆಸ್ಪತ್ರೆಗಳಲ್ಲಿ 'ವಾಜಪೇಯಿ ಆರೋಗ್ಯಶ್ರೀ' ಯೋಜನೆ ಲಭ್ಯವಾಗುವುದರಿಂದ ಹೆಚ್ಚುವರಿಯಾಗಿ ಕನಿಷ್ಠ ೫ ಆಸ್ಪತ್ರೆಗಳನ್ನಾದರೂ ಈ ಯೋಜನೆ ಅಡಿಯಲ್ಲಿ ತರಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಇ) ಅಂತಹ ಹೆಚ್ಚುವರಿ ಆಸ್ಪತ್ರೆಗಳಿಗೆ ಸದರಿ 'ವಾಜಪೇಯಿ ಆರೋಗ್ಯಶ್ರೀ' ಯೋಜನೆಯನ್ನು ವಿಸ್ತರಿಸಲಾಗುವುದು ಯಾವಾಗ ;

(ಈ) ವಿಸ್ತರಿಸಲು ಯೋಜಿಸಿರುವ ಆಸ್ಪತ್ರೆಗಳಾವುವು ? (ಪೂರ್ಣ ವಿವರ ನೀಡುವುದು)



## ಗ್ರೂಪ್ 'ಡಿ' ನೌಕರರಿಗೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭೨ (೫೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಗ್ರೂಪ್ 'ಡಿ' ನೌಕರರಾಗಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ದ್ವಿತೀಯ ದರ್ಜೆ ಸಹಾಯಕರನ್ನಾಗಿ ಪದೋನ್ನತಿ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಸದರಿ ನೌಕರರಿಗೆ ಎಷ್ಟು ವರ್ಷಗಳಿಂದ ಪದೋನ್ನತಿ ನೀಡಲಾಗಿಲ್ಲ ;

(ಇ) ಪದೋನ್ನತಿ ನೀಡಲು ಇಲಾಖೆಯ ಮಾನದಂಡವೇನು ; (ಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, 'ಡಿ' ಗುಂಪಿನ ನೌಕರರಿಗೆ ಯಾವಾಗ ಪದೋನ್ನತಿ ನೀಡಲಾಗುವುದು ? (ಪೂರ್ಣ ವಿವರ ನೀಡುವುದು)

## ವಸತಿ ನಿಲಯಗಳು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೩ (೫೪೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ಹೊಸದಾಗಿ ಹಿಂದುಳಿದ ವರ್ಗಗಳ ವಸತಿ ನಿಲಯವನ್ನು ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಕಾಲಮಿತಿಯಲ್ಲಿ ವಸತಿ ನಿಲಯಗಳಿಗೆ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಮಾಹಿತಿ ಒದಗಿಸುವುದು)

## ಸಾರಿಗೆ ವ್ಯವಸ್ಥೆ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೪ (೫೪೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಬಸ್ ಸೌಕರ್ಯವಿಲ್ಲದ ಗ್ರಾಮಗಳ ಸಂಖ್ಯೆ ಎಷ್ಟು ;

(ಆ) ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಅಂತಹ ಗ್ರಾಮಗಳಿಗೆ ಇನ್ನಾದರೂ ಕಾಲಮಿತಿಯಲ್ಲಿ ಬಸ್ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ರಾಯಚೂರು ಜಿಲ್ಲೆಯಿಂದ ತಾಲ್ಲೂಕು ಕೇಂದ್ರಗಳಿಗೆ ಹೋಗುವ ಬಸ್‌ಗಳಲ್ಲಿ ಎ.ಸಿ. ಅಳವಡಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸೌಲಭ್ಯವನ್ನು ಎಂದಿನಿಂದ ಒದಗಿಸಲಾಗುವುದು ; (ವಿವರ ಒದಗಿಸುವುದು)



(ಈ) ರಾಯಚೂರು ನಗರದ ಬೇರೆ–ಬೇರೆ ಭಾಗಗಳಿಗೆ ಸಂಚರಿಸಲು ನಗರ ಸಾರಿಗೆ ಪ್ರಾರಂಭಿಸಿ ಮಿನಿ ಬಸ್ ಓಡಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು ?

## ನ್ಯಾಯ ಬೆಲೆಯ ಅಂಗಡಿ ಪ್ರಾರಂಭಿಸುವುದು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೫ (೫೪೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನ್ಯಾಯಬೆಲೆಯ ಅಂಗಡಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನಾಗರೀಕರ ಹಿತದೃಷ್ಟಿಯಿಂದ ೪೦೦–೫೦೦ ಕಾರ್ಡು ಹೊಂದಿರುವ ಗ್ರಾಮಗಳಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರ ಒದಗಿಸುವುದು)

## ವಸತಿ ನಿಲಯಗಳ ಮಾಹಿತಿ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೭೬ (೫೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಸಂಖ್ಯೆ ಎಷ್ಟು ಹಾಗೂ ಅಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಮಾನ್ವಿ ತಾಲ್ಲೂಕಿನಲ್ಲಿ ವಸತಿ ನಿಲಯವನ್ನು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಹೊಸದಾಗಿ ವಿದ್ಯಾರ್ಥಿ ನಿಲಯ ಪ್ರಾರಂಭಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; (ವಿವರ ಒದಗಿಸುವುದು)

(ಇ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕೌತಾಳದಲ್ಲಿಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಸತಿ ನಿಲಯದ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ?

## ವಸತಿ ನಿಲಯಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೭ (೫೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ;



(ಆ) ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಇ) ಬಾಡಿಗೆ ಕಟ್ಟಡದಲ್ಲಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿನ ವಸತಿ ನಿಲಯಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೮ (೫೫೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತರ ಮತ್ತು ಹಿಂದುಳಿದ ವರ್ಗಗಳ ಹಾಗೂ ಸಾಮಾನ್ಯ ವರ್ಗದ ವಸತಿ ನಿಲಯಗಳೆಷ್ಟು; ಇವುಗಳಲ್ಲಿ ಸ್ವಂತ ಮತ್ತು ಬಾಡಿಗೆ ಕಟ್ಟಡಗಳ ವಸತಿ ನಿಲಯಗಳೆಷ್ಟು;

(ಆ) ಬಾಡಿಗೆ ವಸತಿ ನಿಲಯಗಳು ಎಷ್ಟು ವರ್ಷದಿಂದ ಇವೆ ; ಇವುಗಳಿಗೆ ಸ್ವಂತ ನಿವೇಶನ ಮಂಜೂರಾಗಿದೆಯೇ ; ಮಂಜೂರಾಗಿದ್ದರೆ, ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ ; (ಮಾಹಿತಿ ಒದಗಿಸುವುದು)

(ಇ) ಮುರಾರ್ಜಿ ವಸತಿ ನಿಲಯಗಳ ಸಂಖ್ಯೆ ಹಾಗೂ ರಾಣಿ ಚೆನ್ನಮ್ಮ ವಸತಿ ನಿಲಯುಗಳ ಸಂಖ್ಯೆಗಳೆಷ್ಟು ; ಯಾವ ಯಾವ ಗ್ರಾಮಗಳಲ್ಲಿವೆ ; ಇವುಗಳಲ್ಲಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಇರುವ ವಸತಿ ನಿಲಯಗಳ ಸಂಖ್ಯೆಗಳೆಷ್ಟು ?

## ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಕೊರೆದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೯ (೫೫೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೦೫–೦೬ ರಿಂದ ವಿವಿಧ ಇಲಾಖೆಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು ; ಇವುಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ಫಲಾನುಭವಿಗಳೆಷ್ಟು ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಯೋಜನೆಯಿಂದ ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ವಿದ್ಯುತ್ ಸಂಪರ್ಕವಾಗದೆ ಇರುವ ಕೊಳವೆ ಬಾವಿಗಳ ಸಂಖ್ಯೆಗಳೆಷ್ಟು ; ಅವುಗಳಿಗೆ ಎಷ್ಟು ದಿನಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)



(ಈ) ಒಂದು ಕೊಳವೆ ಬಾವಿಯ ವಿದ್ಯುತ್ ಸಂಪರ್ಕಕ್ಕೆ ತಗಲುವ ವೆಚ್ಚ ಎಷ್ಟು ?

## ಹಾವೇರಿ ನಗರದ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೦ (೫೫೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಹಾವೇರಿ ನಗರದಲ್ಲಿ ಬಸ್ ನಿಲ್ದಾಣದ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ;

(ಆ) ಪ್ರಾರಂಭವಾಗಿ ಇಷ್ಟು ವರ್ಷಗಳಾದರೂ ಈ ಕಾಮಗಾರಿ ಪೂರ್ಣಗೊಳಿಸದಿರಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಇ) ಇದರಿಂದ ಸಾರ್ವಜನಿಕರಿಗೆ ಹಾಗೂ ವ್ಯಾಪಾರಸ್ಥರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರ ಸದುಪಯೋಗಕ್ಕೆ ಯಾವಾಗ ಒದಗಿಸಲಾಗುವುದು ?

## ಹಾವೇರಿ ಜಿಲ್ಲೆಯ ಬಸ್ ಡಿಪೋ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೧ (೫೫೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಹಾವೇರಿ ಹಾಗೂ ಇತರೆ ತಾಲ್ಲೂಕಿನ ಬಸ್ ಡಿಪೋಗೆ ಸರ್ಕಾರದಿಂದ ಒಟ್ಟು ಎಷ್ಟು ಬಸ್ಸುಗಳನ್ನು ನೀಡಲಾಗಿದೆ ; ಈಗ ಎಷ್ಟು ಬಸ್ಸುಗಳು ಚಾಲ್ತಿಯಲ್ಲಿವೆ ; (ತಾಲ್ಲೂಕುವಾರು ವಿವರವನ್ನು ಒದಗಿಸುವುದು)

(ಆ) ಹಾವೇರಿ ಪಟ್ಟಣದ ಮತ್ತು ಅದರ ವ್ಯಾಪ್ತಿಗೆ ಬರುವ ಕೆಲವೊಂದು ಹಳ್ಳಿಗಳಿಗೆ ಸಮಯಕ್ಕೆ ಸರಿಯಾಗಿ ಬಸ್ಸುಗಳ ಸಂಚಾರವಿಲ್ಲದೆ ಅಲ್ಲಿನ ಜನಸಾಮಾನ್ಯರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಅದನ್ನು ಯಾವಾಗ ಸರಿಪಡಿಸಲಾಗುವುದು ?

## ಗುಲ್ಬರ್ಗಾ ಜಿಲ್ಲೆಯ ರಕ್ತ ನಿಧಿ ಶಾಖೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೨ (೫೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ರಕ್ತ ನಿಧಿ (Blood Bank) ಶಾಖೆಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಬಂದಿದ್ದರೆ, ಎಷ್ಟು ರಕ್ತ ನಿಧಿ ಶಾಖೆಗಳಿವೆ ; ಸಂಪೂರ್ಣ ವಿವರವನ್ನು ನೀಡುವುದು ;

(ಇ) ಇಲ್ಲದಿದ್ದಲ್ಲಿ, ಹೊಸ ರಕ್ತ ನಿಧಿ ಶಾಖೆಗಳು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಹಡಗಲಿಯಲ್ಲಿ ೧೦೦ ಹಾಸಿಗೆಗಳ ಆಸ್ಪತ್ರೆ ಪ್ರಾರಂಭಕ್ಕೆ ವಿಳಂಬ

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೩ (೫೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯ ಹಡಗಲಿಯಲ್ಲಿ ೧೦೦ ಹಾಸಿಗೆಗಳ ಸರ್ಕಾರಿ ಆಸ್ಪತ್ರೆ ನಿರ್ಮಾಣಕ್ಕಾಗಿ ಸರ್ಕಾರ ಮಾಡಿರುವ ವೆಚ್ಚವೆಷ್ಟು ;

(ಆ) ಈ ಆಸ್ಪತ್ರೆಯ ನಿರ್ಮಾಣ ಕಾರ್ಯ ಪ್ರಾರಂಭಗೊಂಡಿದ್ದು ಯಾವಾಗ ; ಈ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ ; ಪೂರ್ಣಗೊಳ್ಳುವುದು ಯಾವಾಗ ; (ವಿವರ ನೀಡುವುದು)

(ಇ) ಸರ್ಕಾರಿ ಆಸ್ಪತ್ರೆಯ ಕಟ್ಟಡವು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ೧೦೦ ಹಾಸಿಗೆಗಳ ಸರ್ಕಾರಿ ಆಸ್ಪತ್ರೆಯು ಯಾವಾಗ ಉದ್ಘಾಟನೆಗೊಂಡು ಸಾರ್ವಜನಿಕ ಸದುಪಯೋಗಕ್ಕೆ ನೀಡಲಾಗುವುದು ?

## ಶಿವಮೊಗ್ಗದಲ್ಲಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಸ್ಥಾಪನೆ

**ಶ್ರೀ ಆರ್.ಕೆ. ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮೪ (೫೫೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೮–೦೯ನೇ ಸಾಲಿನ ಆಯವ್ಯಯದಲ್ಲಿ ತಿಳಿಸಿದಂತೆ ಶಿವಮೊಗ್ಗ ನಗರದಲ್ಲಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪಿಸಲಾಗಿದೆಯೇ ; ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಇಲ್ಲದಿದ್ದಲ್ಲಿ ಕಾರಣಗಳೇನು ; ಸರ್ಕಾರ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಮಹಾವಿದ್ಯಾಲಯವನ್ನು ಯಾವ ಶೈಕ್ಷಣಿಕ ವರ್ಷದಿಂದ ಆರಂಭಿಸಲಾಗುವುದು ? (ವಿವರ ನೀಡುವುದು)

## ಆರ್ಯ ವೈಶ್ಯ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರ್ಪಡೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೫ (೫೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆರ್ಯ ವೈಶ್ಯ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;



(ಆ) ಮೇಲ್ಕಂಡ ಸಮಾಜವು ಅಲ್ಪಸಂಖ್ಯಾತ ಹಾಗೂ ಹಿಂದುಳಿದ ವರ್ಗವಾಗಿರುವುದರಿಂದ ಸದರಿ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸಬೇಕೆಂಬ ಕೋರಿಕೆಗಳು ಬಂದಿರುವುದು ನಿಜವೇ ;

(ಇ) ಇಲ್ಲಿ ಆರ್ಥಿಕ ದುರ್ಬಲರೇ ಹೆಚ್ಚಾಗಿರುವುದರಿಂದ, ಇವರನ್ನು ಹಿಂದುಳಿದ ವರ್ಗದ ವ್ಯಾಪ್ತಿಯಲ್ಲಿ ಸೇರಿಸಲು ಸರ್ಕಾರ ಕೈಗೊಂಡಿರುವ ಅಥವಾ ಕೂಡಲೇ ಕೈಗೊಳ್ಳುವ ಕ್ರಮಗಳೇನು ;

(ಈ) ಈ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಎಷ್ಟು ಕಾಲಾವಧಿಯಲ್ಲಿ ಸೇರಿಸಲಾಗುವುದು ?

## ರಾಜ್ಯದ ಗುತ್ತಿಗೆ ವೈದ್ಯರ ವೇತನ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೬ (೭೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗುತ್ತಿಗೆ ವೈದ್ಯರಿಗೆ ಸರ್ಕಾರವು ನೀಡುತ್ತಿರುವ ವೇತನವೆಷ್ಟು; (ಮಾಹಿತಿ ನೀಡುವುದು)

(ಆ) ಗುತ್ತಿಗೆ ವೈದ್ಯರಿಗೆ ನೀಡಬೇಕಾಗಿದ್ದ ವೇತನಕ್ಕಿಂತ ಹೆಚ್ಚಿಗೆ ಪಾವತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಂಡ ಕ್ರಮಗಳಾವುವು; (ಮಾಹಿತಿ ನೀಡುವುದು)

(ಈ) ಹೆಚ್ಚಿನ ವೇತನ ಪಾವತಿ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು ? (ಮಾಹಿತಿ ನೀಡುವುದು)

## ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗಳಲ್ಲಿ ಹೊರಗುತ್ತಿಗೆ ನೌಕರರಿಗೆ ಕನಿಷ್ಠ ವೇತನ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೭ (೫೫೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ವಿಕ್ಟೋರಿಯಾ, ವಾಣಿವಿಲಾಸ್, ಬೋರಿಂಗ್ ಹಾಗೂ ಇತರೆ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುವ ಹೊರಗುತ್ತಿಗೆ ಕಾರ್ಮಿಕರಿಗೆ ಕನಿಷ್ಠ ವೇತನವನ್ನು ನೀಡದೇ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ;

(ಆ) ಬಂದಿದ್ದಲ್ಲಿ, ಕಾರ್ಮಿಕ ಕಾಯ್ದೆಯು ಪ್ರಕಾರ ದಿನಕ್ಕೆ ರೂ.೨೭೮/– ರಂತೆ ತಿಂಗಳಿಗೆ ರೂ. ೮೫೦೦/–ಗಳ ವೇತನ ನೀಡಬೇಕು. ಆದರೆ ಇಲ್ಲಿ ದಿನಕ್ಕೆ ರೂ.೧೫೦/– ರಂತೆ ತಿಂಗಳಿಗೆ ರೂ.೪.೫೦೦/–ಗಳ ವೇತನ ನೀಡುತ್ತಿರುವುದು ಹಾಗೂ ಭವಿಷ್ಯನಿಧಿ ಪಾವತಿಯಲ್ಲಿ ಕಾರ್ಮಿಕರಿಗೆ ಮೋಸವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳಾವುವು ?



## ಯೋಜನಾ ಆಯೋಗದ ಸಭೆಗಳು

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೮ (೭೧೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ೨೦೧೩–೧೪ ಹಾಗೂ ೨೦೧೪–೧೫ ರಲ್ಲಿ ನಡೆದಿರುವ ಸಭೆಗಳು ಎಷ್ಟು ; (ಸಭೆಯಲ್ಲಿ ಆಹ್ವಾನಿತರು ಆಪೇಕ್ಷಿತರು ಇರಬಹುದಾದ ವಿವರ ನೀಡುವುದು)

(ಆ) ಯೋಜನಾ ಆಯೋಗದ ಉಪಾಧ್ಯಕ್ಷರು ಯಾವಾಗ ನೇಮಿಸಲಾಯಿತು ? (ರಾಜ್ಯದಲ್ಲಿ ಹೊಸ ಸರ್ಕಾರ ಬಂದನಂತರ ಯೋಜನಾ ಆಯೋಗದಲ್ಲಿ ನಡೆದಿರುವ ಸಭೆಗಳಲ್ಲಿ ತೆಗೆದುಕೊಂಡಿರುವ ಯೋಜನೆಗಳ ಬಗ್ಗೆ ಮಾಹಿತಿ ನೀಡುವುದು)

## ವಿಷಪೂರಿತ ಹಾಲು ಸರಬರಾಜು

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೯ (೭೧೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರ ರಾಜ್ಯದಿಂದ ಬೆಂಗಳೂರು ನಗರಕ್ಕೆ ವಿಷಪೂರಿತ ಹಾಲು ಸರಬರಾಜಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯೂರಿಯ, ಕೆಮಿಕಲ್ ಮಿಶ್ರಿತ ಹಾಲು ಸರಬರಾಜು ಪ್ರಕರಣಗಳು ದಾಖಲಾಗಿದ್ದರೆ ಅವರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು; ಎಷ್ಟು ಪ್ರಕರಣಗಳು ದಾಖಲಾಗಿವೆ ? (ವಿವರಣೆ ನೀಡುವುದು)

## ಕಾಳಸಂತೆಯಲ್ಲಿ ಅನ್ನಭಾಗ್ಯ ಯೋಜನೆಯಲ್ಲಿ ಅಕ್ಕಿ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೪೯೦ (೭೧೬) ಮಾನ್ಯ ಆಹಾರ ಮತ್ತ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ನಭಾಗ್ಯ ಯೋಜನೆಯಲ್ಲಿ ಬಿ.ಪಿ.ಎಲ್. ಬಳಕೆದಾರರಿಗೆ ನೀಡುತ್ತಿರುವ ಅಕ್ಕಿಯು ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಳಸಂತೆ ಮಾರಾಟದಲ್ಲಿ ತೊಡಗಿದ್ದವರ ವಿರುದ್ಧ ತೆಗೆದುಕೊಂಡ ಕಾನೂನು ಕ್ರಮವೇನು; ಇವರ ವಿರುದ್ಧ ಮೊಕದ್ದಮೆ ಹೂಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ರಾಜ್ಯದ ಬಿ.ಪಿ.ಎಲ್. ಬಳಕೆದಾರರಿಗೆ ಎಷ್ಟು ಲೀಟರ್ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ ; ಇದರಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು ; ಕೇಂದ್ರ ಸರ್ಕಾರ ಯಾವ ಆಧಾರದ ಮೇಲೆ ಸೀಮೆಎಣ್ಣೆಯನ್ನು ನೀಡುತ್ತಿದೆ ?

## ಬಿ.ಪಿ.ಎಲ್. ಕಾರ್ಡ್ ಆನ್‌ಲೈನ್ ಮುಖಾಂತರ ನವೀಕರಣ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೧ (೫೬೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಪಿ.ಎಲ್. ಕಾರ್ಡ್ ನವೀಕರಿಸಲು ಆನ್‌ಲೈನ್ ವ್ಯವಸ್ಥೆ ಮಾಡಿರುವುದರಿಂದ ಗ್ರಾಮೀಣ ಜನರಿಗೆ ಮಾಹಿತಿ ಕೊರತೆ ಉಂಟಾಗುವುದು ನಿಜವೇ ;



(ಆ) ಗ್ರಾಮೀಣ ಜನರಿಗೆ ಮಾಹಿತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬಿ.ಪಿ.ಎಲ್. ಕಾರ್ಡಿಗೆ ಆನ್‌ಲೈನ್ ಮೂಲಕ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಗ್ರಾಮೀಣ ಪ್ರದೇಶದಿಂದ ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ಗ್ರಾಮೀಣ ಪ್ರದೇಶದ ಅವಿದ್ಯಾವಂತ ಬಡಜನರಿಗೆ ಬಿ.ಪಿ.ಎಲ್. ಕಾರ್ಡ್ ಒದಗಿಸಲು ಅಧಿಕಾರಿಗಳಿಂದ ಅಲೆದಾಟ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಯ ತಾಲ್ಲೂಕುಗಳಲ್ಲಿ ವೈದ್ಯರ ಹುದ್ದೆ ಖಾಲಿ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೨ (೫೬೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸರ್ಕಾರಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ವಿವರ ನೀಡುವುದು)

(ಆ) ಸಾರ್ವಜನಿಕರಿಗೆ ಸರಿಯಾದ ಚಿಕಿತ್ಸೆ ದೊರಕದೆ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಇ) ಡೆಂಗ್ಯೂ ಜ್ವರ ಹಾವಳಿಯಿಂದ ಗ್ರಾಮಾಂತರ ಪ್ರದೇಶದ ಜನರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳಾವುವು ?

## ಜಿಲ್ಲಾ ಪಂಚಾಯತ್ ಗೋದಾಮು ಮತ್ತು ನ್ಯಾಯಬೆಲೆ ಅಂಗಡಿಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೩ (೫೬೧) ಮಾನ್ಯ ಆಹಾರ ಮತ್ತ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಜಿಲ್ಲಾ ಪಂಚಾಯತ್‌ಗಳಲ್ಲಿ ಒಂದೊಂದು ಗೋದಾಮು ಮತ್ತು ನ್ಯಾಯಬೆಲೆ ಅಂಗಡಿ ತೆರೆಯಲು ಸರ್ಕಾರ ನಿರ್ಧರಿಸಿದೆಯೇ ;

(ಆ) ನಕಲಿ ಪಡಿತರ ಚೀಟಿದಾರರನ್ನು ಗುರುತಿಸಲು ಹಾಕಿಕೊಂಡಿರುವ ಕ್ರಿಯಾ ಯೋಜನೆಗಳೇನು ;

(ಇ) ಜಿಲ್ಲಾ ಪಂಚಾಯತ್‌ಗಳಲ್ಲಿ ಗೋದಾಮು ಮತ್ತು ನ್ಯಾಯಬೆಲೆ ಅಂಗಡಿ ತೆರೆಯಲು ವಿದ್ಯಾವಂತ ನಿರುದ್ಯೋಗಿಗಳಿಗೆ ಸರ್ಕಾರ ಅವಕಾಶ ಕಲ್ಪಿಸುವುದೇ ? (ವಿವರ ನೀಡುವುದು)



## ಮೊರಾರ್ಜಿ ವಸತಿ ಶಾಲೆಯ ಶಿಕ್ಷಕರ ಕುಂದುಕೊರತೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೪ (೫೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಮತ್ತು ಪುರುಷ ಶಿಕ್ಷಕರ ಸಂಖ್ಯೆ ಎಷ್ಟು ; (ಶಾಲಾವಾರು, ಜಾತಿವಾರು ಪುರುಷ ಮತ್ತು ಮಹಿಳೆ ಶಿಕ್ಷಕರ ಮತ್ತು ಸಲ್ಲಿಸಿರುವ ಅವಧಿಯ ಪೂರ್ಣ ವಿವರಗಳನ್ನು ನೀಡುವುದು)

(ಆ) ಆ ಪೈಕಿ ಇನ್ನು ಖಾಯಂಗೊಳ್ಳದಿರುವವರು ಎಷ್ಟು ; (ಖಾಯಂಗೊಳ್ಳದಿರುವವರ ಹೆಸರು ಸಮೇತ ವಿವರ ಒದಗಿಸುವುದು)

(ಇ) ಸದರಿ ಶಾಲೆಗಳಲ್ಲಿ ಖಾಲಿ ಇರುವ ಶಾಲಾವಾರು ಶಿಕ್ಷಕರುಗಳ ಸಂಖ್ಯೆ ಎಷ್ಟು ;

(ಈ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಉ) ನೇಮಕಾತಿಯ ಸಂದರ್ಭದಲ್ಲಿ ತಾತ್ಕಾಲಿಕವಾಗಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರುಗಳನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಊ) ಮೇಲ್ಕಂಡ ವಸತಿ ಶಾಲೆಗಳಲ್ಲಿರುವ ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಬೇಡಿಕೆಗಳು ಯಾವುವು ಹಾಗೂ ಅವರ ಬೇಡಿಕೆಗಳನ್ನು ಸರ್ಕಾರ ಯಾವಾಗ ಈಡೇರಿಸುತ್ತದೆ ?

## ಉನ್ನತಾಧಿಕಾರಿ ಸಮಿತಿ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೫ (೫೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನೌಕರರ ನೇಮಕ ಹಾಗೂ ಮುಂಬಡ್ತಿಯಲ್ಲಿ ಅನ್ಯಾಯವಾಗದಂತೆ ರಕ್ಷಣೆ ಮಾಡಲು ಉನ್ನತಾಧಿಕಾರಿಗಳ ಸಮಿತಿ (High Power Committee) ರಚನೆ ಮಾಡಿ ಎಷ್ಟು ವರ್ಷಗಳಾಗಿದೆ ;

(ಆ) ಈ ಬಗ್ಗೆ ಪರಿಶೀಲಿಸಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಇತ್ತೀಚಿನ ೨ ವರ್ಷದಲ್ಲಿ ಎಷ್ಟು ಸಾರಿ ಸಭೆ ಸೇರಿದೆ ;

(ಇ) ಗೃಹ ಇಲಾಖೆ ಹಾಗೂ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನೌಕರರಿಗೆ ಕೊಡುವ ಮುಂಬಡ್ತಿಯಲ್ಲಿ ಅನ್ಯಾಯವಾಗಿರುವುದು ಉನ್ನತಾಧಿಕಾರಿಗಳ ಸಮಿತಿಯ (High Power Committee) ಗಮನಕ್ಕೆ ಬಂದಿದೆಯೇ;

(ಈ) ಮಾನಿಟರ್ ಸೆಲ್ ಈ ಬಗ್ಗೆ ಏಕೆ ಗಮನಹರಿಸುತ್ತಿಲ್ಲ ?

## ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಾಲ ಮತ್ತು ಬಡ್ಡಿ ಮನ್ನಾ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೬ (೫೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳು ಪಡೆದಿದ್ದ ಸಾಲ ಮತ್ತು ಬಡ್ಡಿಯನ್ನು ಏಕಕಾಲದಲ್ಲಿ ಮನ್ನಾ ಮಾಡಲಾಗಿದೆ ; ಮನ್ನಾ ಮಾಡಿದ ಹಣವನ್ನು ಸರ್ಕಾರ ಪ್ರತ್ಯೇಕವಾಗಿ ನೀಡಿದೆಯೇ ;



(ಆ) ಅಥವಾ ಆ ಹಣಕಾಸು ವರ್ಷದಲ್ಲಿ ನಿಗಮಕ್ಕೆ ನೀಡಿದ ಒಟ್ಟು ಹಣದಲ್ಲಿ ಮನ್ನಾ ಮಾಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ನಿಗಮಕ್ಕೆ ನೀಡಿದ ಹಣದಲ್ಲಿ ಮನ್ನಾ ಹಣ ಬಳಕೆ ಮಾಡಿದ್ದರೆ ಈ ವರ್ಷದ ಫಲಾನುಭವಿಗಳಿಗೆ ತೊಂದರೆಯಾಗುವುದಿಲ್ಲವೇ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರ ಸೃಜನೆ ಮತ್ತು ದುರುಪಯೋಗ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೭ (೫೬೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗಪಡಿಸಿಕೊಂಡಿರುವ ಪ್ರಕರಣಗಳು ಎಷ್ಟು ಮತ್ತು ಯಾವುವು ; (ಜಿಲ್ಲಾವಾರು, ಪ್ರಕರಣವಾರು, ವರ್ಷವಾರು ವಿವರ ನೀಡುವುದು)

(ಆ) ಮೇಲಿನ ಪ್ರಕರಣಗಳಲ್ಲಿ ಶಿಕ್ಷೆಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಪ್ರಸ್ತುತ ವಿಚಾರಣೆ ನಡೆಯುತ್ತಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಪ್ರಸ್ತುತ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪ್ರಕರಣವಾರು, ವರ್ಷವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗಪಡಿಸಿಕೊಂಡ ವ್ಯಕ್ತಿಗಳು ಹಾಗೂ ದುರುಪಯೋಗಪಡಿಸಿಕೊಳ್ಳುವ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ತುರ್ತು ಕಾನೂನು ಕ್ರಮಗಳೇನು ? (ವಿವರ ನೀಡುವುದು)

## ಎಸ್.ಸಿ./ಎಸ್.ಟಿ.ರವರಿಗೆ ಶೇ. ೨೨.೭೫ರ ಯೋಜನೆಯ ಅಡಿ ಮೀಸಲಿಟ್ಟಿರುವ ಹಣ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೮ (೫೬೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಶೇ. ೨೨.೭೫ರ ಯೋಜನೆಯ ಅಡಿಯಲ್ಲಿ ಬರುವ ಒಟ್ಟು ಇಲಾಖೆಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ೨೦೦೮ ರಿಂದ ೨೦೧೪ ರವರೆಗೆ ಪ್ರತಿ ಇಲಾಖೆಗಳಿಗೆ ಪ್ರತ್ಯೇಕವಾಗಿ ಮೀಸಲಿಟ್ಟಿರುವ ಹಣ ಹಾಗೂ ಖರ್ಚಾದ ಹಣ ಮತ್ತು ಉಳಿಕೆ ಹಣ ಎಷ್ಟು ;

(ಇ) ಉಳಿಕೆ ಹಣವನ್ನು ಏನು ಮಾಡಲಾಗುವುದು ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?



## ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ರಾಜ್ಯದ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೯೯ (೭೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡುವ ಯೋಜನೆಯನ್ನು ಯಾವಾಗಿನಿಂದ ಆರಂಭಿಸಲಾಯಿತು ;

(ಆ) ಈ ಯೋಜನೆಯಡಿ ಪ್ರತಿ ವರ್ಷ ಯಾವ ಯಾವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ ;

(ಇ) ಇಲ್ಲಿಯವರೆಗೆ ಎಷ್ಟು ಅಭ್ಯರ್ಥಿಗಳು ತರಬೇತಿ ಪಡೆದಿದ್ದಾರೆ ; (ವರ್ಷವಾರು ಹಾಗೂ ಪರೀಕ್ಷಾವಾರು ಮಾಹಿತಿ ನೀಡುವುದು)

(ಈ) ತರಬೇತಿ ಪಡೆದಿರುವವರಲ್ಲಿ ಎಷ್ಟು ಜನರು ನೇಮಕಾತಿ ಹೊಂದುವಲ್ಲಿ ಯಶಸ್ವಿಯಾಗಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಉ) ಈ ತರಬೇತಿಗಳಿಗೆ ಪ್ರತಿ ವರ್ಷ ಒದಗಿಸಲಾದ ಅನುದಾನ ಎಷ್ಟು ?

## ಗಂಗಾ ಕಲ್ಯಾಣ ಯೋಜನೆಯಡಿ ನಿಗದಿಪಡಿಸಿದ ಯುನಿಟ್ ಕಾಸ್ಟ್ (Unit Cost)

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೦೦ (೭೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಗಳಿಗೆ ಪ್ರತಿ ಯುನಿಟ್ (Unit Cost) ಗೆ ನಿಗದಿಪಡಿಸಿರುವ ಮೊತ್ತ ಎಷ್ಟು ; (ವೈಯಕ್ತಿಕ, ಸಾಮೂಹಿಕ ಹಾಗೂ ಏತ ನೀರಾವರಿ ಬೇರೆ ಬೇರೆ ಮಾಹಿತಿ ಕೊಡುವುದು)

(ಆ) ಸರ್ಕಾರ ನಿಗದಿಪಡಿಸಿರುವ ಯುನಿಟ್ ಕಾಸ್ಟ್ (Unit Cost) ಗಂಗಾ ಕಲ್ಯಾಣ ಯೋಜನೆಯ ವೈಯಕ್ತಿಕ ಫಲಾನುಭವಿಗಳ ಯೋಜನೆಗಳಿಗೆ ಸಾಕಾಗುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಯುನಿಟ್ ಕಾಸ್ಟ್ (Unit Cost) ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆಯೇ; ಹಾಗಿದ್ದಲ್ಲಿ, ಸರ್ಕಾರ ಆದೇಶ ಹೊರಡಿಸಲಾಗುವುದು ಯಾವಾಗ ?



## ರಾಜ್ಯದ ಸಚಿವಾಲಯ ಹಾಗೂ ಇಲಾಖೆಗಳಲ್ಲಿ ಇ–ಆಡಳಿತ ಜಾರಿಗೊಳಿಸುವುದು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೦೧ (೭೪೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಸಚಿವಾಲಯಗಳು ಹಾಗೂ ಇಲಾಖೆಗಳು ಸ್ವಂತ ವೆಬ್‌ಸೈಟ್‌ನ್ನು ಹೊಂದಿವೆಯೇ ;

(ಆ) ಹೊಂದಿದ್ದಲ್ಲಿ, ವೆಬ್‌ಸೈಟ್‌ಗಳ ವಿಳಾಸಗಳೇನು ; ಈ ವಿಳಾಸಗಳನ್ನು ಸಾರ್ವಜನಿಕರ ಗಮನಕ್ಕೆ ತರಲಾಗಿದೆಯೇ ;

(ಇ) ವೆಬ್‌ಸೈಟ್ ಹೊಂದಿದ ಸಚಿವಾಲಯ ಹಾಗೂ ಇಲಾಖೆಗಳು ಅದರಲ್ಲಿನ ಮಾಹಿತಿಗಳು ಸಾರ್ವಜನಿಕರಿಗೆ ಮರುದಿನ ಸಿಗುವ ಹಾಗೆ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸುತ್ತೋಲೆ ಹಾಗೂ ಆದೇಶಗಳನ್ನು ಸಾರ್ವಜನಿಕರಿಗೆ ಮಾಹಿತಿ ಸಕಾಲದಲ್ಲಿ ಸಿಗಲು ಏನು ಕ್ರಮ ಕೈಗೊಳ್ಳಲಾಗುವುದು ;

(ಉ) ವೆಬ್‌ಸೈಟ್ ಹೊಂದಿರದ ಸಚಿವಾಲಯಗಳೂ ಸ್ವಂತ ವೆಬ್‌ಸೈಟ್ ಪ್ರಾರಂಭಿಸಿ ಸರ್ಕಾರಿ ಆದೇಶ ಸಾರ್ವಜನಿಕರಿಗೆ ದೊರೆಯುವಂತೆ ವ್ಯವಸ್ಥೆ ಮಾಡಲು ಹಾಕಿಕೊಂಡ ಕಾಲಮಿತಿ ಯಾವುದು ;

(ಊ) ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಸೇರಿದಂತೆ ಶಿಕ್ಷಣಕ್ಕೆ ಸಂಬಂಧಿಸಿದ ಸಚಿವಾಲಯದ ವೆಬ್‌ಸೈಟ್‌ಗಳ ವಿಳಾಸಗಳೇನು ?

## ಹೊಸ ನ್ಯಾಯಬೆಲೆ ಅಂಗಡಿಗಳನ್ನು ಪ್ರಾರಂಭಿಸಲು ಅನುಮತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೦೨ (೭೪೧) ಮಾನ್ಯ ಆಹಾರ ಮತ್ತ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಈ ನ್ಯಾಯಬೆಲೆ ಅಂಗಡಿಗಳಿಗೆ ಕೊಡುತ್ತಿರುವ ಕಮಿಷನ್ ಎಷ್ಟು;

(ಇ) ಸರ್ಕಾರ ಈಗ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡಲಾಗುತ್ತಿದೆಯೇ ;

(ಈ) ಮಾಡುತ್ತಿದ್ದಲ್ಲಿ, ಹೊಸ ನ್ಯಾಯಬೆಲೆ ಅಂಗಡಿಗಳ ಮಂಜೂರಾತಿಗಾಗಿ ಸರ್ಕಾರ ವಿಧಿಸಿರುವ ಮಾನದಂಡಗಳೇನು ?

## ಅನುಕಂಪದ ಆಧಾರದ ಮೇಲೆ ನೇಮಕಾತಿ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೫೦೩ (೫೬೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಸಾರಿಗೆ (ಬಿ.ಟಿ.ಎಸ್.) ಯಲ್ಲಿ ಕಳೆದ ೧೦ ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವಾಗ ನಿಧನ ಹೊಂದಿದ ನಿರ್ವಾಹಕ (ಕಂಡಕ್ಟರ್) ಸಿಬ್ಬಂದಿ ಸಂಖ್ಯೆ ಎಷ್ಟು ; ಅವರ ಬಿಲ್ಲೆ (ಬ್ಯಾಡ್ಜ್) ಸಂಖ್ಯೆ, ನಿಧನ ಹೊಂದಿದ ದಿನಾಂಕಗಳ ವಿವರ ನೀಡುವುದು ;



(ಆ) ನಿಧನ ಹೊಂದಿದ ಯಾವ್ಯಾವ ಸಿಬ್ಬಂದಿಯ ಕುಟುಂಬದ ಅವಲಂಬಿತರಲ್ಲಿ ಯಾರ್‍ಯಾರು ಅನುಕಂಪದ ಆಧಾರದ ಮೇಲೆ ಉದ್ಯೋಗಕ್ಕೆ ಅರ್ಜಿ ಸಲ್ಲಿಸಿದ್ದು, ಇವರಲ್ಲಿ ಯಾರ್‍ಯಾರಿಗೆ ಯಾವ್ಯಾವ ಹುದ್ದೆಗಳನ್ನು ನೀಡಲಾಗಿದೆ ; (ಹೆಸರು ಮತ್ತು ಹುದ್ದೆ ಹಾಗೂ ನೇಮಕವಾದ ದಿನಾಂಕವಾರು ಮಾಹಿತಿ ನೀಡುವುದು)

(ಇ) ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುವಲ್ಲಿ ಜೇಷ್ಠತೆ ನಿರ್ವಹಣೆಯಾಗಿದೆಯೇ ; ಸಿಬ್ಬಂದಿಯಾಗಿದ್ದ ತಂದೆ ಅಥವಾ ತಾಯಿ ನಿಧನ ಹೊಂದಿದಾಗ ವಿವಾಹವಾದ ಅವರ ಮಗ ಅಥವಾ ಮಗಳಿಗೆ ಉದ್ಯೋಗ ನೀಡಲು ಅವಕಾಶವಿದೆಯೇ ;

(ಈ) ಸಿಬ್ಬಂದಿಯಾಗಿದ್ದ ತಂದೆ ನಿಧನರಾದಾಗ ಆತನ ಹೆಂಡತಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ಅವಕಾಶವಿದೆಯೇ; ಒಂದು ಪಕ್ಷ ತಾಯಿ ಉದ್ಯೋಗವನ್ನು ವಿವಾಹವಾದ ಮಗಳಿಗೆ ಕೊಡಬೇಕೆಂದು ಅಪೇಕ್ಷೆಪಟ್ಟರೆ ಮಗಳಿಗೆ ಉದ್ಯೋಗ ನೀಡಲು ಅವಕಾಶವಿದೆಯೇ ; ವಿವಾಹವಾಗಿದ್ದ ಮಗಳು ವಿಧವೆಯಾಗಿದ್ದಲ್ಲಿ ಮಗಳಿಗೆ ಉದ್ಯೋಗ ನೀಡಲು ಅವಕಾಶವಿದೆಯೆ; (ಸಂಪೂರ್ಣ ವಿವರ ನೀಡುವುದು)

(ಉ) ನಿಯಮ ಉಲ್ಲಂಘಿಸಿ ವಿವಾಹವಾದ ಮಗಳಿಗೆ ಉದ್ಯೋಗ ನೀಡಿದ ಉದಾಹರಣೆ ಇದೆಯೇ ; ಇದ್ದಲ್ಲಿ ವಿವರ ನೀಡುವುದು; ಈ ರೀತಿ ಉದ್ಯೋಗ ನೀಡಲು ಕಾರಣವೇನು ಮತ್ತು ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ ;

(ಊ) ವಿವಾಹವಾಗಿ ವಿಧವೆಯಾಗಿದ್ದ ಮಗಳ ಪತಿಯು ಕೇಂದ್ರ ಅಥವಾ ರಾಜ್ಯ ಸರ್ಕಾರಿ ನೌಕರರಾಗಿದ್ದರೆ ಮಗಳು ತಂದೆ ಅಥವಾ ಪತಿಯ ಉದ್ಯೋಗವನ್ನು ಅನುಕಂಪದ ಆಧಾರದ ಮೇಲೆ ಪಡೆಯಬಹುದೇ; (ವಿವರ ನೀಡುವುದು)

(ಋ) ಈ ರೀತಿ ನಿಯಮ ಉಲ್ಲಂಘಿಸಿ ಅನುಕಂಪದ ಆಧಾರದ ಮೇಲೆ ಉದ್ಯೋಗ ಪಡೆದವರ ಹೆಸರು ಮತ್ತು ಹುದ್ದೆವಾರು ವಿವರ ಹಾಗೂ ಅವರ ವಿರುದ್ಧ ಕೈಗೊಳ್ಳಲಾಗುವ ಕ್ರಮಗಳನ್ನು ತಿಳಿಸುವುದು?

## ರಾಜ್ಯದಲ್ಲಿರುವ ಐ.ಟಿ.ಬಿ.ಟಿ. ಕಂಪನಿಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೫೦೪ (೫೭೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಐ.ಟಿ.ಬಿ.ಟಿ. ಕಂಪನಿಗಳ ಸಂಖ್ಯೆ ಎಷ್ಟು ; ಅವು ಯಾವುವು ; ಎಲ್ಲೆಲ್ಲಿ ಇವೆ ; ಯಾವ ಯಾವ ಐ.ಟಿ.ಬಿ.ಟಿ. ಕಂಪನಿಗಳಲ್ಲಿ ಎಷ್ಟೆಷ್ಟು ಜನ ನೌಕರರಿದ್ದಾರೆ; ಯಾವ ಯಾವ ಕಂಪನಿಗಳು ಕನ್ನಡ ಮತ್ತು ಕನ್ನಡೇತರ ನೌಕರರನ್ನು ನೇಮಿಸಿಕೊಂಡಿರುತ್ತಾರೆ ; (ಕಂಪನಿವಾರು ವಿವರ ನೀಡುವುದು)

(ಆ) ಈ ಐ.ಟಿ.ಬಿ.ಟಿ. ಕಂಪನಿಗಳಿಗೆ ರಾಜ್ಯ ಸರ್ಕಾರ ನೀಡಿರುವ ಸೌಲಭ್ಯಗಳು ಯಾವುವು ; (ಕಂಪನಿವಾರು ವಿವರಗಳನ್ನು ನೀಡುವುದು)

(ಇ) ಐ.ಟಿ.ಬಿ.ಟಿ. ಕಂಪನಿಗಳಿಂದ ಲಭ್ಯವಾಗುತ್ತಿರುವ ತೆರಿಗೆ ಮುಂತಾದವುಗಳು ಎಷ್ಟು ? (ಕಂಪನಿವಾರು ವಿವರ ನೀಡುವುದು)



## ಉತ್ತರ ಕರ್ನಾಟಕದ ಗ್ರಾಮಸ್ಥರಿಗೆ ಆರೋಗ್ಯ ಸೇವೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೦೫ (೫೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಗ್ರಾಮೀಣ ಭಾಗದ ಜನರು ಆರೋಗ್ಯ ಸೇವಾ ಸೌಲಭ್ಯಗಳಿಂದ ತೀವ್ರವಾಗಿ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಡಾ॥ ನಂಜುಂಡಪ್ಪರವರ ವರದಿ ಹಿನ್ನೆಲೆಯಲ್ಲಿ ಈ ಭಾಗದ ಜನರಿಗೆ ಹೆಚ್ಚಿನ ಆರೋಗ್ಯ ಸೇವಾ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಪರಿಣಾಮಕಾರಿಯಾದ "ಆಯುಷ್" ಆರೋಗ್ಯ ಸೇವೆಯನ್ನು ಉತ್ತರ ಕರ್ನಾಟಕ ಗ್ರಾಮಸ್ಥರಿಗೆ ಒದಗಿಸಲು ತ್ವರಿತ ಕ್ರಮಗಳನ್ನು ಕೈಗೊಳ್ಳಲಾಗುವುದೇ;

(ಈ) ನಿರಂತರವಾಗಿ ಹೆಚ್ಚಾಗುತ್ತಿರುವ ಮಧುಮೇಹ, ಹೃದ್ರೋಗ ಮತ್ತು ಮೂತ್ರರೋಗಗಳಿಗೆ ಸಂಬಂಧಿಸಿದಂತೆ ಗ್ರಾಮಸ್ಥರಿಗೆ ಸೂಕ್ತ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ?

## ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ತರಬೇತಿ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೦೬ (೬೧೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂದಿನ ಮಾಹಿತಿ ತಂತ್ರಜ್ಞಾನ ಯುಗದಲ್ಲಿ ಯುವಕರಿಗಾಗಿ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಉತ್ತಮ ತರಬೇತಿ ನೀಡುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಯುವಕರಿಗಾಗಿ ವಿಶೇಷ ತರಬೇತಿ ನೀಡಲಾಗುತ್ತಿದೆಯೇ ;

(ಇ) ಅದರಂತೆ, ಗ್ರಾಮೀಣ ವಿದ್ಯಾರ್ಥಿಗಳಿಗಾಗಿ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ?

## ವಿಕಲಚೇತನರಿಗೆ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ತರಬೇತಿ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೦೭ (೫೭೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಗ್ರಾಮೀಣ ಯುವಕರು ಆಧುನಿಕ ತಂತ್ರಜ್ಞಾನ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ಮಾಹಿತಿ ತಂತ್ರಜ್ಞಾನ ಸೌಲಭ್ಯಗಳಿಂದ ವಂಚಿತರಾದ ಉತ್ತರ ಕರ್ನಾಟಕದ ಗ್ರಾಮೀಣ ಯುವಕರಿಗೆ ಸೂಕ್ತ ತರಬೇತಿ ಮತ್ತು ಉದ್ಯೋಗಾವಕಾಶ ಒದಗಿಸಲು ಸರ್ಕಾರವು ಸೂಕ್ತ ಕ್ರಮಗಳನ್ನು ಕೈಗೊಳ್ಳುವುದೆ ;

(ಇ) ಅದೇ ರೀತಿ, ವಿಕಲಚೇತನರಿಗೆ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಅಗತ್ಯ ತರಬೇತಿ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ?

## ಪರಿಶಿಷ್ಟರ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೦೮ (೬೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗ ಜಿಲ್ಲೆಯಲ್ಲಿನ ಪರಿಶಿಷ್ಟ ಜಾತಿಯ ಜನರು ಅಗತ್ಯ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗದಗ ಜಿಲ್ಲೆಯಲ್ಲಿನ ಪರಿಶಿಷ್ಟರ ಕಾಲೋನಿಯಲ್ಲಿ ಸಿಮೆಂಟ್ ರಸ್ತೆ, ಚರಂಡಿ ನಿರ್ಮಾಣ ಮುಂತಾದ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಗದಗ ಜಿಲ್ಲೆಯಲ್ಲಿ ಪರಿಶಿಷ್ಟರ ಕಾಲೋನಿಯಲ್ಲಿ ಎಷ್ಟು ಸಮುದಾಯ ಭವನಗಳನ್ನು ನಿರ್ಮಿಸಲಾಗಿದೆ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜನರಿಗೆ ಜನ್–ಧನ್ ಯೋಜನೆಯ ಸೌಲಭ್ಯದ ಬಗ್ಗೆ

**ಶ್ರೀ ಸಿ.ಎಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೯ (೬೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಇತ್ತೀಚಿನ ಜನ್–ಧನ್ ಯೋಜನೆಯಡಿಯಲ್ಲಿ ಸದರಿ ಯೋಜನೆಯ ಅನುಕೂಲತೆ ಪಡೆಯಲು ಈವರೆಗೆ ಖಾತೆ ತೆರೆದ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಕುಟುಂಬಗಳ ಸಂಖ್ಯೆ ಎಷ್ಟು;

(ಆ) ಮುಂದಿನ ದಿನಗಳಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಈ ವರ್ಗಗಳಿಗೆ ಲಭ್ಯವಾಗುತ್ತಿರುವ ಆರ್ಥಿಕ ಅನುಕೂಲತೆಗಳು ಮತ್ತು ಇತರೆ ಯೋಜನೆಗಳ ಮೂಲಕ ಲಭ್ಯವಾಗಬಲ್ಲ ಹಣಕಾಸಿನ ನೆರವನ್ನು ನೇರವಾಗಿ ಸಂಬಂಧಿಸಿದ ಫಲಾನುಭವಿಗಳ ಖಾತೆಗೆ ವರ್ಗಾಯಿಸಲು ಕ್ರಮ ಜರುಗಿಸಲಾಗುವುದೇ ? (ವಿವರಗಳನ್ನು ನೀಡುವುದು)



## ಗಂಗಾಕಲ್ಯಾಣ ಯೋಜನೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಸೌಲಭ್ಯ

**ಶ್ರೀ ಸಿ.ಎಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೦ (೫೭೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂಮಾಲಿಕತ್ವ ಹೊಂದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ಭೂ ಮಾಲಿಕತ್ವ ಹೊಂದಿರುವ ಈ ರೀತಿಯ ರೈತರಲ್ಲಿ ಗಂಗಾ ಕಲ್ಯಾಣ ಹಾಗೂ ಇತರೆ ಮೂಲಗಳಿಂದ ನೀರಾವರಿ ಅನುಕೂಲತೆ ಹೊಂದಿರುವ ರೈತರ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ತಮ್ಮ ಜಮೀನಿಗೆ ಬೇರೆ ಬೇರೆ ಮೂಲಗಳಿಂದ ನೀರಾವರಿ ಅನುಕೂಲತೆ ಹೊಂದಿರುವ ಕುಟುಂಬಗಳನ್ನು ಹೊರತುಪಡಿಸಿ ಉಳಿದ ಕೃಷಿಕ ಕುಟುಂಬಗಳ ಭೂಮಿಗೆ ಗಂಗಾಕಲ್ಯಾಣದ (ಅರ್ಹ ಫಲಾನುಭವಿಗಳೆಂದು ಪರಿಗಣಿಸಬಹುದಾದ) ಅನುಕೂಲತೆಯ ಸೌಲಭ್ಯ ಒದಗಿಸಬಹುದಾದಲ್ಲಿ, ಆ ರೀತಿಯ ಸೌಲಭ್ಯ ಹೊಂದಲು ಲಭ್ಯವಾಗಬಹುದಾದ ಅರ್ಹ ಕುಟುಂಬಗಳ ಸಂಖ್ಯೆ ಎಷ್ಟು; ಹಾಗೂ ಅದಕ್ಕೆ ಬೇಕಾಗಬಹುದಾದ ಒಟ್ಟು ಅನುದಾನದ ವಿವರಗಳನ್ನು ಒದಗಿಸುವುದು ;

(ಈ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಫಲಾನುಭವಿಯಾಗಿ ಆಯ್ಕೆ ಪ್ರಕ್ರಿಯೆಗೆ ಒಳಪಟ್ಟು ಒಟ್ಟು ಕೃಷಿಕರ ಸಂಖ್ಯೆ ಎಷ್ಟು; ಈ ಯೋಜನೆಯ ಪೂರ್ಣ ಅನುಕೂಲತೆಯ ಹೊಂದಿರುವ ರೈತ ಕುಟುಂಬದ ವಿವರವನ್ನು ಒದಗಿಸುವುದು; ಯೋಜನೆ ಅಪೂರ್ಣಗೊಂಡಿದ್ದಲ್ಲಿ ಅದಕ್ಕೆ ಕಾರಣಗಳು ಮತ್ತು ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು ? (ವಿವರಗಳನ್ನು ಒದಗಿಸುವುದು)

## ಭಿಕ್ಷುಕರ ಪುನರ್ವಸತಿ ಕೇಂದ್ರಗಳು

**ಶ್ರೀ ಸಿ.ಎಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೧ (೫೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಭಿಕ್ಷುಕರ ಪುನರ್ವಸತಿ ಕೇಂದ್ರಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಬೆಂಗಳೂರು ಮತ್ತು ಮೈಸೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಭಿಕ್ಷುಕರ ಪುನರ್ವಸತಿ ಕೇಂದ್ರಗಳನ್ನು ಉನ್ನತೀಕರಣಗೊಳಿಸಲು ಕ್ರಮ ವಹಿಸಲಾಗುವುದೇ ;

(ಇ) ಸದರಿ ಪುನರ್ವಸತಿ ಕೇಂದ್ರಗಳ ಸೇವಾ ಸೌಲಭ್ಯಗಳನ್ನು ಬೇಡಿಕೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ರಾಜ್ಯದಲ್ಲಿರುವ ಪ್ರತಿ ಜಿಲ್ಲಾ ಕೇಂದ್ರ ಸ್ಥಾನಗಳಿಗೂ ವಿಸ್ತರಿಸುವ ಚಿಂತನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಮುಂದಿನ ಯೋಜನೆಗಳ ವಿವರಗಳನ್ನು ನೀಡುವುದು ;



(ಈ) ಪುನರ್ವಸತಿ ಕೇಂದ್ರಗಳಲ್ಲಿ ಭಿಕ್ಷುಕರಾಗಿ ಹಾಗೂ ಬಂಧಿಯಾಗಿ ಬಂದು ಆಶ್ರಯ ಪಡೆಯುವ ಜನರ ಆರ್ಥಿಕ ಹಾಗೂ ಸಾಮಾಜಿಕ ವ್ಯವಸ್ಥೆಯ ಸುಧಾರಣೆ, ಅದಲ್ಲದೇ ಅವರ ನೈತಿಕ ಬಲ ಹೆಚ್ಚಿಸಿ ಮುಂದಿನ ದಿನಗಳಲ್ಲಿ ಅವರೂ ಕೂಡ ಇತರರಂತೆ ಸ್ವತಂತ್ರವಾಗಿ ಹಾಗೂ ಸ್ವಾವಲಂಬಿಯಾಗಿ ಜೀವಿಸುವ ಹಿನ್ನಲೆಯಲ್ಲಿ ಈಗಿರುವ ಪುನರ್ವಸತಿ ಕೇಂದ್ರಗಳಲ್ಲಿ ಈ ರೀತಿಯ ತರಬೇತಿಯ ಮತ್ತು ಮಾಹಿತಿ ಅನುಕೂಲತೆಗಳನ್ನು ಕಲ್ಪಿಸಲು ಸರ್ಕಾರ ಈವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಉ) ಪುನರ್ವಸತಿ ಕೇಂದ್ರಗಳಲ್ಲಿನ ಆಡಳಿತ ಸುಧಾರಣೆ, ಸಿಬ್ಬಂದಿಗಳ ಕೊರತೆ ನೀಗಿಸುವುದು, ಅದಲ್ಲದೇ ಈಗಿರುವ ಅನುಕೂಲತೆಗಳ ಹೆಚ್ಚಳ ಅವಶ್ಯವಿರುವ ಸೌಲಭ್ಯಗಳನ್ನು ಸಕಾಲದಲ್ಲಿ ಇಲಾಖೆಯಿಂದ ಒದಗಿಸಲು ಸದ್ಯ ಆಗುತ್ತಿರುವ ಅನಗತ್ಯ ವಿಳಂಬವನ್ನು ತಪ್ಪಿಸಲು ತೆಗೆದುಕೊಳ್ಳಬಹುದಾದ ಕ್ರಮಗಳೇನು ? (ವಿವರ ನೀಡುವುದು)

## ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಫಲಾನುಭವಿಗಳ ವಿವರ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೨ (೫೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ೨೦೧೪–೧೫ನೇ ಸಾಲಿನಲ್ಲಿ

ಇಲ್ಲಿಯವರೆಗೆ ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಯಾವ ಯೋಜನೆಗಳಡಿ ಆಯ್ಕೆ ಪ್ರಕ್ರಿಂಯೆ ಪೂರ್ಣಗೊಳಿಸಲಾಗುತ್ತದೆ; ಫಲಾನುಭವಿಗಳನ್ನು ಆಯ್ಕೆ ಮಾಡಿ ಅನುಷ್ಠಾನಗೊಳಿಸಲಾಗಿದೆ ;

(ಆ) ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸದೆ ಬಾಕಿ ಇರುವ ವಿಧಾನ ಸಭಾ ಕ್ಷೇತ್ರಗಳು ಯಾವುವು ; ಬಾಕಿ ಇರುವ ಕ್ಷೇತ್ರಗಳಲ್ಲಿ ಆಯ್ಕೆ ಪ್ರಕ್ರಿಯೆಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಇ) ಪ್ರಸ್ತುತ ಕಾರ್ಯಕ್ರಮಗಳನ್ನು ಯಾವಾಗ ಅನುಷ್ಠಾನ ಮಾಡಲಾಗುವುದು ? (ವಿವರ ನೀಡುವುದು)

## ನಗರ ಸಾರಿಗೆ ಬಸ್ಸುಗಳಲ್ಲಿ ಐ.ಟಿ.ಎಸ್. ಅಳವಡಿಸಿರುವ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೩ (೫೮೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಪ್ರದೇಶಗಳಲ್ಲಿ ಸಂಚರಿಸುವ ನಗರ ಸಾರಿಗೆ ಬಸ್ಸುಗಳಲ್ಲಿ ಪ್ರಯಾಣಿಕರಿಗೆ ಮಾಹಿತಿ ಸೌಲಭ್ಯ ಒದಗಿಸುವ ಉದ್ದೇಶದಿಂದ ಐ.ಟಿ.ಎಸ್. (Intelligent Transport System) ಅಳವಡಿಸಿರುವುದು ನಿಜವೇ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಆ) ಈ ಯೋಜನೆಗಾಗಿ ಒದಗಿಸಲಾದ ಅನುದಾನ ಎಷ್ಟು ; ಯಾವ ರೀತಿಯ ಮಾಹಿತಿ ಸೌಲಭ್ಯವನ್ನು ಪ್ರಯಾಣಿಕರಿಗೆ ನೀಡಲಾಗುತ್ತಿದೆ; (ವಿವರ ಒದಗಿಸುವುದು)



(ಇ) ಪ್ರಸ್ತುತ ಈ ಯೋಜನೆಯು ಹಲವಾರು ಕಾರಣಗಳಿಂದ ಸ್ಥಗಿತಗೊಳ್ಳುವ ಹಂತಕ್ಕೆ ತಲುಪಿರುವುದು ನಿಜವೇ; ಹಾಗಿದ್ದಲ್ಲಿ, ಇದಕ್ಕೆ ಕಾರಣವಾದ ಅಂಶಗಳು ಹಾಗೂ ಈ ನಿಟ್ಟಿನಲ್ಲಿ ಕೈಗೊಂಡ ಪರಿಹಾರ ಕ್ರಮಗಳು ಏನು ? (ಮಾಹಿತಿ ಒದಗಿಸುವುದು)

## ಬಿ.ಎಂ.ಟಿ.ಸಿ.ಗೆ ಜೆನರ್ಮ್ ಯೋಜನೆಯಲ್ಲಿ ನೀಡುತ್ತಿರುವ ಅನುದಾನದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೪ (೫೮೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಕಳೆದ ಎಷ್ಟು ವರ್ಷಗಳಿಂದ ಜೆನರ್ಮ್ (ಜವಹರಲಾಲ್ ನೆಹರೂ ರಾಷ್ಟ್ರೀಯ ನಗರ ಅಭಿವೃದ್ಧಿ ಯೋಜನೆ) ಯೋಜನೆಯಡಿ ವಿವಿಧ ರೂಪದ ಅಭಿವೃದ್ಧಿ ಯೋಜನೆಗಳು, ಖರೀದಿ, ವಿಸ್ತರಣೆ, ನಿರ್ಮಾಣವೂ ಸೇರಿದಂತೆ ಯಾವ ಯಾವ ಉದ್ದೇಶಗಳಿಗಾಗಿ ಕೇಂದ್ರ ಸರ್ಕಾರದ ಅನುದಾನವನ್ನು ಬಳಸಿಕೊಂಡಿದೆ ಹಾಗೆಯೇ ರಾಜ್ಯ ಸರ್ಕಾರ ಮತ್ತು ಬಿ.ಎಂ.ಟಿ.ಸಿ.ಯು ಯಾವ ಅನುಪಾತದೊಂದಿಗೆ ಅನುದಾನವನ್ನು ಒದಗಿಸಿದೆ ; (ವರ್ಷಾವಾರು ಪೂರ್ಣ ವಿವರಗಳೊಂದಿಗೆ ವಿವರ ಒದಗಿಸುವುದು)

(ಆ) ಈ ಯೋಜನೆಯಡಿ ಒದಗಿಸಲಾದ ಅನುದಾನದಿಂದ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕೈಗೊಂಡ ಯೋಜನೆಗಳು ಯಾವುವು; (ವರ್ಷಾವಾರು ಉದ್ದೇಶಗಳೊಂದಿಗೆ ಬಳಸಿದ ಅನುದಾನ ಕುರಿತಾದ ಮಾಹಿತಿ ನೀಡುವುದು)

(ಇ) ಪ್ರಯಾಣಿಕರಿಗೆ ಉತ್ತಮ ಸೇವೆ ಮತ್ತು ಸಂಸ್ಥೆಯನ್ನು ಲಾಭದಾಯಕವಾಗಿಸುವ ನಿಟ್ಟಿನಲ್ಲಿ ನಗರದ ಯಾವ ಯಾವ ಭಾಗಗಳಲ್ಲಿ ಟಿ.ಟಿ.ಎಂ.ಸಿ. ಗಳನ್ನು/ವಾಣಿಜ್ಯ ದೃಷ್ಟಿಯಿಂದ (ಸಂಸ್ಥೆಗೆ ಲಾಭ ತರುವ ಉದ್ದೇಶದಿಂದ) ನಿರ್ಮಿಸಲಾದ ಕಟ್ಟಡಗಳು ಯಾವುವು; ಇವುಗಳಿಗೆ ವಿನಿಯೋಗವಾದ ಹಣವೆಷ್ಟು ; (ಪ್ರತ್ಯೇಕವಾಗಿ ಇವುಗಳ ಮಾಹಿತಿ ನೀಡುವುದು)

(ಈ) ನಿರ್ಮಿಸಲಾದ ಈ ಟಿ.ಟಿ.ಎಂ.ಸಿ. ಗಳಲ್ಲಿ ಬಾಡಿಗೆಗೆ ನೀಡಲಾದ ಚದರ ವಿಸ್ತೀರ್ಣವೆಷ್ಟು ; (ಕೊಠಡಿಗಳ ಸಂಖ್ಯೆಯೊಂದಿಗೆ ಬಾಡಿಗೆಗೆ ನೀಡಲಾದ ವ್ಯಕ್ತಿ, ಸಂಸ್ಥೆಗಳ ವಿವರ ನೀಡುವುದು) ಸರ್ಕಾರಿ ಕಟ್ಟಡಗಳೂ ಸೇರಿದಂತೆ ಇವುಗಳಿಗೆ ವಿಧಿಸಲಾದ ಬಾಡಿಗೆ ಮೊತ್ತ ಎಷ್ಟು ಬಾಡಿಗೆಗೆ ನೀಡುವಲ್ಲಿ ಅನುಸರಿಸಿದ ಮಾನದಂಡಗಳೇನು;

(ಉ) ಬಾಡಿಗೆ ನೀಡಿಕೆಯ ಮೊತ್ತದಲ್ಲಿ ವ್ಯತ್ಯಾಸವಿರುವ ದೂರುಗಳು ನಿಜವೇ; ಹಾಗಿದ್ದಲ್ಲಿ ಅಂತಹ ದೂರುಗಳ ಕುರಿತಾಗಿ ಕೈಗೊಂಡ ಕ್ರಮಗಳು ಏನು ; (ವಿವರ ನೀಡುವುದು)

(ಊ) ನೀಡಲಾಗಿರುವ ಬಾಡಿಗೆ ಕಟ್ಟಡಗಳಿಂದ ಇದುವರೆವಿಗೂ ವಸೂಲಾದ ಬಾಡಿಗೆ ಪ್ರಮಾಣ ಎಷ್ಟು ; (ಬಾಡಿಗೆದಾರರ ವಿವರ, ಬಾಡಿಗೆಗೆ ಪಡೆಯಲಾದ ಜಾಗದಲ್ಲಿ ನಡೆಸಲಾಗುತ್ತಿರುವ ಚಟುವಟಿಕೆಯ ಸ್ವರೂಪ, ಖಾಲಿ ಕೊಠಡಿಗಳ ಸಂಖ್ಯೆ, ಸಾರ್ವಜನಿಕರು ಮತ್ತು ಪ್ರಯಾಣಿಕರಿಗೆ ಇದರಿಂದ ಸಿಗುತ್ತಿರುವ ಸೌಲಭ್ಯದ ಕುರಿತಾಗಿ ಮಾಹಿತಿ ಒದಗಿಸುವುದು)

(ಋ) ಪ್ರಸ್ತುತ ಬಿ.ಎಂ.ಟಿ.ಸಿ. ಯ ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸಲು ಮತ್ತು ಸಂಸ್ಥೆಯನ್ನು ಲಾಭದೆಡೆಗೆ ಕೊಂಡೊಯ್ಯುವಲ್ಲಿ



ಹಾಕಿಕೊಂಡಿರಬಹುದಾದ ನೂತನ ಯೋಜನೆಗಳು ಯಾವುವು? ಯಾವ ಕಾಲಮಿತಿಯಲ್ಲಿ, ಎಷ್ಟು ಯೋಜನಾ ವೆಚ್ಚದೊಂದಿಗೆ ಜಾರಿಗೆ ತರುವ ನಿಟ್ಟಿನಲ್ಲಿ ಆಲೋಚಿಸಲಾಗಿದೆ?

## ಸಂಜಯಗಾಂಧಿ ಟ್ರೌಮಾ ಮತ್ತು ಅಸ್ತಿ ಚಿಕಿತ್ಸಾ ಸಂಸ್ಥೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೧೫ (೭೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂಜಯಗಾಂಧಿ ಟ್ರೌಮಾ ಮತ್ತು ಅಸ್ತಿ ಚಿಕಿತ್ಸಾ ಸಂಸ್ಥೆ ಬೆಂಗಳೂರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಡ್ಹಾಕ್ ತಾತ್ಕಾಲಿಕ ನೌಕರರ ಸಂಖ್ಯೆ ಎಷ್ಟು ;

(ಆ) ಯಾವ ಯಾವ ಹುದ್ದೆಗಳಲ್ಲಿ ಈ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ಮತ್ತು ಎಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ ಎಷ್ಟು ವೇತನ ನೀಡಲಾಗುತ್ತಿದೆ;

(ಇ) ಹೀಗೆ ಕೆಲಸ ಮಾಡುತ್ತಿದ್ದ ಅಡ್ಹಾಕ್ ತಾತ್ಕಾಲಿಕ ನೌಕರರನ್ನು ಈ ಹಿಂದೆ ಸಂಸ್ಥೆಯಲ್ಲಿ ಖಾಯಂಗೊಳಿಸಲಾಗಿದೆಯೇ; ಯಾವಾಗ ಈ ನೌಕರರನ್ನು ಆಡಳಿತ ಪರಿಷತ್ ನಿಯಮದಂತೆ ಖಾಯಂಗೊಳಿಸಲಾಗಿದೆ;

(ಈ) ಈ ಹಿಂದೆ ಡಾಕ್ಟರ್‌ಗಳಿಗೆ ಖಾಯಂ ಮಾಡಿದಂತೆ ಪ್ರಸ್ತುತ ಕೆಲಸ ಮಾಡುತ್ತಿರುವ ಅಡ್ಹಾಕ್/ತಾತ್ಕಾಲಿಕ ನೌಕರರ ಸೇವೆಯನ್ನು ಖಾಯಂ ಮಾಡಲು ಇರುವ ಅಡ್ಡಿ ಆತಂಕಗಳೇನು;

(ಉ) ಈ ನೌಕರರ ಸೇವಾ ಭದ್ರತಾ, ಸೇವಾ ಹಿರಿತನವನ್ನು ಸಂಸ್ಥೆಯು ನೇಮಕ ಮಾಡಲು ಹೊರಟಿರುವ ಪ್ರಕ್ರಿಯೆಯಲ್ಲಿ

ಪರಿಗಣಿಸಲಾಗುವುದೇ; ಪರಿಗಣಿಸದಿದ್ದಲ್ಲಿ ಅನೇಕ ವರ್ಷಗಳಿಂದ ಕೆಲಸ ಮಾಡುತ್ತಿರುವ ಅಡ್ಹಾಕ್/ತಾತ್ಕಾಲಿಕ ನೌಕರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ; ಈ ಅನ್ಯಾಯವನ್ನು ಸರಿಪಡಿಸಲು ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ತಿದ್ದುಪಡಿ ತರಲಾಗುವುದೇ?

## ಸಮಾಜ ಕಲ್ಯಾಣ ಇಲಾಖೆಗೆ ಸರ್ಕಾರದ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೧೬ (೫೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರ ನೀಡಿರುವ ಅನುದಾನದ ಮೊತ್ತವೆಷ್ಟು ;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣವನ್ನು ನಿಗಧಿಪಡಿಸಲಾಗಿದೆ ;

(ಇ) ಈ ಮೊತ್ತದಲ್ಲಿ ಖರ್ಚಾಗಿರುವ ಹಾಗೂ ಖರ್ಚಾಗದೇ ಉಳಿದಿರುವ ಮೊತ್ತವೆಷ್ಟು ಖರ್ಚಾಗದೇ ಬಾಕಿ ಉಳಿದಿರುವುದಕ್ಕೆ ಕಾರಣವೇನು ?

## ಧಾರ್ಮಿಕ ಹಾಗೂ ಶೈಕ್ಷಣಿಕ ಸಂಸ್ಥೆಗಳಿಗೆ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೧೭ (೫೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಂಗಡ ಪತ್ರದಲ್ಲಿ ಪ.ಜಾತಿ/ಪ.ವರ್ಗಗಳ ಶೈಕ್ಷಣಿಕ ಮತ್ತು ಧಾರ್ಮಿಕ ಸಂಸ್ಥೆಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನವನ್ನು ಘೋಷಿಸಲಾಗಿದೆಯೇ ;



(ಆ) ಇದು ಯಾವ ಸಾಲಿನಿಂದ ಜಾರಿಗೆ ಬಂದಿದೆ ; ಒದಗಿಸಲಾಗಿರುವ ಹಣ ಎಷ್ಟು ಈ ಯೋಜನೆ ಜಾರಿಗೆ ಬಂದಾಗಿನಿಂದ ಎಷ್ಟು ಹಣ ಖರ್ಚಾಗಿದೆ ; ಖರ್ಚಾಗದೆ ಉಳಿದಿರುವ ಹಣವೆಷ್ಟು ;

(ಇ) ಈ ಹಣವನ್ನು ಯಾವ ಯಾವ ಸಂಸ್ಥೆಗಳಿಗೆ ಯಾವ ಬಾಬ್ತಿಗೆ ಎಷ್ಟೆಷ್ಟು ಹಣ ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಯ ಸೌಲಭ್ಯ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೮ (೫೮೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಎಂಬ ಪಡಿತರ ಚೀಟಿ ವ್ಯವಸ್ಥೆ ಚಾಲ್ತಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳಿಗೆ ಸಿಗುವ ಸೌಲಭ್ಯಗಳೇನು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಇ) ಎ.ಪಿ.ಎಲ್. ಚೀಟಿದಾರರಿಗೆ ಪಡಿತರ ವ್ಯವಸ್ಥೆಯನ್ನು ಕಲ್ಪಿಸುವುದು ಯಾವಾಗ ?

## ಮಡಿಕೇರಿಯ ಮೆಡಿಕಲ್ ಕಾಲೇಜಿನ ಕಾಮಗಾರಿ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೯ (೫೮೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಮೆಡಿಕಲ್ ಕಾಲೇಜಿನ ಕಾಮಗಾರಿಯು ಈಗ ಯಾವ ಹಂತದಲ್ಲಿದೆ ;

(ಆ) ಸದರಿ ಕಾಮಗಾರಿಯು ಪೂರ್ಣಗೊಳ್ಳುವುದು ಯಾವಾಗ ;

(ಇ) ಸಾರ್ವಜನಿಕ ಉಪಯೋಗಕ್ಕಾಗಿ ಪ್ರಾರಂಭಗೊಳ್ಳುವುದು ಯಾವಾಗ ;

(ಈ) ಸದರಿ ಸಂಸ್ಥೆಗೆ ಸಿಬ್ಬಂದಿ ನೇಮಕಾತಿ ಯಾವ ಏಜೆನ್ಸಿ ಮುಖಾಂತರ ನಡೆಸಲಾಗುವುದು ; ಯಾವ ರೀತಿ ಈ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ರಾಜ್ಯದ ಪಡಿತರ ಕಾರ್ಡ್‌ಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೨೦ (೭೫೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಇರುವ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಾಹಿತಿ ಒದಗಿಸುವ ಕಾರಣದಿಂದಾಗಿ ಎಷ್ಟು ಕಾರ್ಡ್‌ಗಳನ್ನು ತಿರಸ್ಕರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಾಲಿ ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಕಾರ್ಡ್‌ನ್ನು ವಿತರಿಸಲು ಇರುವ ನಿಯಮಗಳೇನು ? (ವಿವರ ನೀಡುವುದು)

## ತ್ರಿಚಕ್ರ ಆಟೋಗಳ ಬಾಡಿಗೆ



**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೨೧ (೭೫೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ವಿವಿಧ ನಗರಗಳಲ್ಲಿ ಈ ಹಿಂದೆ ಯಾವಾಗ ಆಟೋ (೩ ಚಕ್ರ) ಬಾಡಿಗೆಯ ದರಗಳನ್ನು ಪರಿಷ್ಕರಿಸಲಾಯಿತು ; ಆಗ ನಿಗದಿಪಡಿಸಿದ ದರ ಎಷ್ಟು ; (ವಿವರ ನೀಡುವುದು)

(ಆ) ಆ ಸಮಯದಲ್ಲಿ ಆಟೋ ಗ್ಯಾಸ್ ದರ ಎಷ್ಟಿತ್ತು ;

(ಇ) ಹಾಲಿ ಮಾರುಕಟ್ಟೆಯ ಆಟೋ ಗ್ಯಾಸ್ ದರ ಎಷ್ಟು ; ಈಗ ಎಷ್ಟು ಕಡಿಮೆ ಆಗಿದೆ ; ಕಡಿಮೆಯಾಗಿದಲ್ಲಿ ಆಟೋ ಬಾಡಿಗೆ ದರಗಳನ್ನು ಕಡಿಮೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೨೨ (೫೮೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈವರೆವಿಗೂ ಕರ್ನಾಟಕ ರಾಜ್ಯದಲ್ಲಿ ಎಷ್ಟು ಸರ್ಕಾರಿ ವೈದ್ಯಕೀಯ

ಕಾಲೇಜುಗಳ ಸ್ಥಾಪನೆಗೆ ರಾಜ್ಯ ಸರ್ಕಾರ ಅಧಿಕೃತವಾಗಿ ಆದೇಶ ನೀಡಿದೆ ; ಇವುಗಳಲ್ಲಿ ಪ್ರಾರಂಭವಾಗಿರುವ ಹಾಗೂ ಪ್ರಾರಂಭಿಸದಿರುವ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಪ್ರತಿಯೊಂದು ಕಾಲೇಜಿನಲ್ಲಿ ಎಷ್ಟು ಬೋಧಕ ಹುದ್ದೆಗಳು ಖಾಲಿ ಇವೆ ; (ಕಾಲೇಜುವಾರು, ವಿಷಯವಾರು ವಿವರ ನೀಡುವುದು)

(ಇ) ಇನ್ನೂ ಪ್ರಾರಂಭವಾಗದೇ ಇರುವ ಕಾಲೇಜುಗಳಲ್ಲಿ ನಿರ್ದೇಶಕರು, ಬೋಧಕ ವರ್ಗದವರಿಗೆ ಸಂಬಳ, ಸಾರಿಗೆ, ಇತರೆ ಭತ್ಯೆ ಮತ್ತು ಸವಲತ್ತುಗಳನ್ನು ನೀಡಲಾಗುತ್ತಿದೆಯೇ ; (ಕಾಲೇಜುವಾರು, ಹುದ್ದೆವಾರು ಹಾಗೂ ವಿಷಯವಾರು ವಿವರ ನೀಡುವುದು)

(ಈ) ಇಂತಹ ವೈದ್ಯರನ್ನು ತಾತ್ಕಾಲಿಕವಾಗಿಯಾದರೂ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ನಿಯೋಜಿಸಲಾಗಿದೆಯೇ ; ಹಾಗಿದ್ದಲ್ಲಿ, ನಿಯೋಜಿಲ್ಪಟ್ಟ ವೈದ್ಯರ ವಿವರ ನೀಡುವುದು ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳ ನಿರ್ದೇಶಕರ ನೇಮಕಾತಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೨೩ (೫೮೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಕೀಯ ಕಾಲೇಜುಗಳ ನಿರ್ದೇಶಕರನ್ನು ಭಾರತೀಯ ವೈದ್ಯಕೀಯ ಮಂಡಳಿಯ



ಮಾರ್ಗಸೂಚಿಯಡಿಯಲ್ಲಿ ನೇಮಕ ಮಾಡಿಕೊಳ್ಳಲಾಗಿದೆಯೇ ;

(ಆ) ನಿರ್ದೇಶಕರ ನೇಮಕಾತಿಗಾಗಿ ಭಾರತೀಯ ವೈದ್ಯಕೀಯ ಮಂಡಳಿಯು ನೀಡಿರುವ ಮಾರ್ಗಸೂಚಿಗಳೇನು ; (ವಿವರ ನೀಡುವುದು)

(ಇ) ಈ ಮಾರ್ಗಸೂಚಿಯಂತೆ ಪ್ರತಿಯೊಬ್ಬ ನಿರ್ದೇಶಕರು ಪಡೆದಿರುವ ಅರ್ಹತೆಗಳೇನು ; (ಪ್ರತ್ಯೇಕವಾರು ವಿವರ ನೀಡುವುದು)

(ಈ) ಈ ಮಾರ್ಗಸೂಚಿಯಿಂದ ಯಾವ ಯಾವ ನಿರ್ದೇಶಕರಿಗೆ ವಿನಾಯ್ತಿ ನೀಡಲಾಗಿದೆ ; ಈ ರೀತಿಯ ರಿಯಾಯಿತಿಗೆ ಕಾರಣಗಳೇನು ? (ವಿವರ ನೀಡುವುದು)

## ತೀರ್ಥಹಳ್ಳಿಯ ಸರ್ಕಾರಿ ಆಸ್ಪತ್ರೆಗೆ ವಿಷ ನಿರೋಧಕ ಔಷಧಿ

**ಪ್ರೋ ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :–**

೫೨೪ (೫೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೀರ್ಥಹಳ್ಳಿಯ ಸರ್ಕಾರಿ ಆಸ್ಪತ್ರೆಯಲ್ಲಿ ಹಾವಿನ ಕಡಿತದಿಂದ ಪೀಡಿತರಾದ ರೋಗಿಗಳಿಗೆ ಚಿಕಿತ್ಸೆ ನೀಡಲು ಅಗತ್ಯವಾದ ವಿಷ ನಿರೋಧಕ ಔಷಧಿ ಲಭ್ಯವಿದೆಯೇ ; ಇಲ್ಲದಿದ್ದಲ್ಲಿ, ಎಷ್ಟು ವರ್ಷಗಳಿಂದ ಔಷಧಿಯನ್ನು ಪೂರೈಸಲಾಗಿಲ್ಲ ;

(ಆ) ಅಲ್ಲಿಗೆ ಅಗತ್ಯವಾದ ಔಷಧಿಯನ್ನು ತುರ್ತಾಗಿ ಪೂರೈಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಲಭ್ಯವಿದ್ದಲ್ಲಿ, ಅವಶ್ಯಕತೆಯ ಪ್ರಮಾಣಕ್ಕೆ ಅನುಗುಣವಾಗಿ ಪೂರೈಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹಾಗೂ ಸಿಬ್ಬಂದಿಗಳ ಕುರಿತು

**ಪ್ರೋ ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :–**

೫೨೫ (೫೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಮತ್ತು ಇತರೆ ಸಿಬ್ಬಂದಿಯ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ವೈದ್ಯರು ಮತ್ತು ಇತರ ಸಹಾಯಕ ಸಿಬ್ಬಂದಿಯ ಕೊರತೆಯಿಂದಾಗಿ ರೋಗಿಗಳಿಗೆ ಅಗತ್ಯ ವೈದ್ಯಕೀಯ ಸೇವೆಗಳು ಲಭ್ಯವಾಗುತ್ತಿಲ್ಲ ಎನ್ನುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಎಷ್ಟು ದಿನಗಳೊಳಗೆ ಅಗತ್ಯವಾದ ಸಿಬ್ಬಂದಿಯನ್ನು ನೇಮಕ ಮಾಡಲಾಗುವುದು ?

## ಪ್ರಧಾನ ಮಂತ್ರಿ ಸ್ವಚ್ಛಭಾರತ ಅಭಿಯಾನವನ್ನು ನಮ್ಮ ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೬ (೬೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದಲ್ಲಿ ಜಾರಿಯಿರುವ ಪ್ರಧಾನ ಮಂತ್ರಿ ಸ್ವಚ್ಛ ಭಾರತ ಅಭಿಯಾನವನ್ನು ನಮ್ಮ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ;



(ಆ) ಹಾಗಿದ್ದಲ್ಲಿ, ಸದರಿ ಅಭಿಯಾನವನ್ನು ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ನಮ್ಮ ರಾಜ್ಯ ಸರ್ಕಾರವು ಸರ್ಕಾರಿ ಅಧಿಕಾರಿಗಳನ್ನು ಜನ ಪ್ರತಿನಿಧಿನಗಳನ್ನು ಸಂಘ ಸಂಸ್ಥೆಗಳನ್ನು ಹಾಗೂ ಸಾರ್ವಜನಿಕರನ್ನು ಭಾಗವಹಿಸುವಂತೆ ಪ್ರೇರೆಪಿಸಿದೆಯೇ ;

(ಈ) ಹಾಗಿದ್ದಲ್ಲಿ, ಇದರ ರೂಪರೇಷೆಗಳೇನು ?

## ಎ.ಪಿ.ಎಲ್. ಕುಟುಂಬಗಳಿಗಾಗಿ ನೀಡುವ ರಾಜೀವ ಆರೋಗ್ಯ ಭಾಗ್ಯ ಯೋಜನೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೭ (೬೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಲ್. ಕುಟುಂಬಗಳಿಗೆ ರಾಜೀವ ಆರೋಗ್ಯ ಭಾಗ್ಯ ಯೋಜನೆಯಡಿ ಯಾವ ಯಾವ ರೋಗಗಳಿಗೆ ಚಿಕಿತ್ಸೆ ಒದಗಿಸಲಾಗುತ್ತದೆ ; ಅದಕ್ಕೆ ಇರುವ ಮಾನದಂಡಗಳೇನು ;

(ಆ) ಬೆಳಗಾವಿ ಜಿಲ್ಲೆಯ ಯಾವ ಯಾವ ಆಸ್ಪತ್ರೆಗಳಲ್ಲಿ ಈ ಯೋಜನೆಯ ಪ್ರಯೋಜನವನ್ನು ರೋಗಿಗಳಿಗೆ ಒದಗಿಸುವ ವ್ಯವಸ್ಥೆ ಕಲ್ಪಿಸಲಾಗಿದೆ ;

(ಇ) ೨೦೧೪–೧೫ನೇ ಸಾಲಿನಲ್ಲಿ ಈ ಯೋಜನೆಗೆ ಕಾಯ್ದಿರಿಸಿರುವ ಅನುದಾನದ ಮೊತ್ತ ಎಷ್ಟು ?

## ಬೆಳಗಾವಿ ಮಹಾನಗರದಲ್ಲಿ ಟ್ರಾಫಿಕ್ ಜಾಮ್ ಸಾರ್ವಜನಿಕರಿಗೆ ತೊಂದರೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೮ (೫೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎರಡನೇ ರಾಜಧಾನಿ ಎಂದು ಕರೆಯಿಸಿಕೊಳ್ಳುವ ಬೆಳಗಾವಿ ಮಹಾನಗರದಲ್ಲಿ ವಾಹನಗಳ ದಟ್ಟಣೆಯಿಂದ ಟ್ರಾಫಿಕ್ ಜಾಮ್ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಬೆಳಗಾವಿ ಮಹಾನಗರದಲ್ಲಿ ಟ್ರಾಫಿಕ್ ಜಾಮ್ ಸಮಸ್ಯೆ ಬಗೆಹರಿಸಲು ಕೈಗೊಂಡ ಕ್ರಮಗಳೇನು ;

(ಇ) ಬೆಳಗಾವಿ ಮಹಾನಗರದಲ್ಲಿ ಸಂಚರಿಸುತ್ತಿರುವ ಒಟ್ಟು ದ್ವಿಚಕ್ರ ವಾಹನಗಳು, ತ್ರಿಚಕ್ರ ವಾಹನಗಳು ಮತ್ತು ನಾಲ್ಕು ಚಕ್ರಗಳ ವಾಹನಗಳ ಸಂಖ್ಯೆ ಎಷ್ಟು ;

(ಈ) ಈ ಸಮಸ್ಯೆಯನ್ನು ಬಗೆಹರಿಸಲು ಬೆಂಗಳೂರು, ಮೈಸೂರು ಮತ್ತು ಮಂಗಳೂರು ಮಹಾನಗರಗಳಲ್ಲಿ ಜಾರಿಯಲ್ಲಿರುವಂತೆ ಟ್ರ್ಯಾಕ್ ಯೋಜನೆ ಜಾರಿಗೆ ತರುವ ವಿಚಾರ ಸರ್ಕಾರದ ಮುಂದೆ ಇದೆಯೇ ; ಅದಕ್ಕೆ ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ ;

(ಉ) ಅದಕ್ಕೆ ತಗಲುವ ವೆಚ್ಚ ಎಷ್ಟು ; ಯಾವ ಕಾಲಮಿತಿಯಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ?

## ಪ.ಜಾ/ಪ.ಪಂ. ದವರ ಅಭಿವೃದ್ಧಿಗಾಗಿ ಮೀಸಲಿರುವ ಅನುದಾನ ಬಳಕೆ



**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೯ (೫೯೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಮೀಸಲಿರಿಸಿದ ಅನುದಾನವು ಸರಿಯಾಗಿ ನಿಗದಿತ ಕಾಲಮಿತಿಯಲ್ಲಿ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪ.ಜಾ/ಪ.ಪಂ. ದವರ ಅಭಿವೃದ್ಧಿಗೋಸ್ಕರ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಳೆದ ೫ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಇನ್ನುಳಿದ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭಿವೃದ್ಧಿಗೋಸ್ಕರ ಮೀಸಲಿರಿಸಿದ ಅನುದಾನವೆಷ್ಟು ; ಅದರಲ್ಲಿ ಮಂಜೂರಾದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಬಳಕೆಯಾಗದೇ ಇರುವ ಅನುದಾನವೆಷ್ಟು ; (ವರ್ಷವಾರು, ಇಲಾಖೆವಾರು ಹಾಗೂ ಯೋಜನಾವಾರು ಮಾಹಿತಿ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದ ಅನುದಾನವೆಷ್ಟು ; (ಯೋಜನಾವಾರು, ಇಲಾಖೆವಾರು ಮಾಹಿತಿ ನೀಡುವುದು)

(ಉ) ಬಳಕೆಯಾಗದೇ ಅನುದಾನವು ಬಕಿ ಇರಲು ಕಾರಣಗಳೇನು ?

## ಹೆಚ್.ಕೆ.ಆರ್.ಡಿ.ಬಿ.ಯ ಕ್ರಿಯಾ ಯೋಜನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೩೦ (೫೯೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೩೭೧(ಜೆ) ಅಡಿಯಲ್ಲಿ ಹೆಚ್.ಕೆ.ಆರ್.ಡಿ.ಬಿ. ಯು ಅಸ್ತಿತ್ವಕ್ಕೆ ಬಂದಿದ್ದು ಯಾವಾಗ ; ಇದಕ್ಕೆ ಸರ್ಕಾರವು ಘೋಷಣೆ ಮಾಡಿದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಆ) ೩೭೧(ಜೆ) ಅಡಿಯಲ್ಲಿ ರಚನೆಯಾದ ಮಂಡಳಿಗೆ ಘೋಷಣೆ ಮಾಡಿದ ಅನುದಾನದ ಪೈಕಿ ಬಿಡುಗಡೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನದ ಪೈಕಿ ಕಾಮಗಾರಿಗಳಿಗಾಗಿ ಮಂಡಳಿಯಿಂದ ಅನುಷ್ಠಾನಾಧಿಕಾರಿಗಳಿಗೆ ಬಿಡುಗಡೆ ಮಾಡಿದ ಮತ್ತು ಅನುಷ್ಠಾನಾಧಿಕಾರಿಗಳಿಂದ ಕಾಮಗಾರಿಗಳಿಗಾಗಿ ಖರ್ಚಾದ ಮೊತ್ತ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೩೭೧ (ಜೆ) ಅಡಿಯಲ್ಲಿ ಸ್ಥಾಪನೆಯಾದ ಹೆಚ್.ಕೆ.ಆರ್.ಡಿ.ಬಿ.ಯ ನಿಯಮದ ಅಡಿಯಲ್ಲಿ ಮಂಡಳಿಯ ಸಭೆ (Board Meeting) ಗಳನ್ನು ಹಾಗೂ ಸಲಹಾ ಸಮಿತಿಯ (Advisory Committee) ಎಷ್ಟು ಸಭೆಗಳನ್ನು ಜರುಗಿಸಬೇಕಿತ್ತು ; ಈವರೆವಿಗೂ ನಡೆಸಿರುವ ಸಭೆಗಳು ಎಷ್ಟು ;

(ಈ) ಹೆಚ್.ಕೆ.ಆರ್.ಡಿ.ಬಿ. ಯ ಕ್ರಿಯಾ ಯೋಜನೆ ತಯಾರಿಸಲು ಇರುವ ಮಾನದಂಡಗಳೇನು ಹಾಗೂ ಈಗಾಗಲೇ ತಯಾರಿಸಿದ ಕ್ರಿಯಾ ಯೋಜನೆಯನ್ನು ಯಾವ ಮಾನದಂಡ ಆಧಾರದ ಮೇಲೆ ತಯಾರಿಸಲಾಗಿದೆ ? (ಮಾಹಿತಿ ನೀಡುವುದು)



## ಸಾಮಾನ್ಯ ಯೋಜನೆ ಅಡಿಯಲ್ಲಿ ಬಿಡುಗಡೆಯಾದ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೩೧ (೫೯೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಡಿ.ಎಮ್. ನಂಜುಂಡಪ್ಪ ವರದಿ ಆಧರಿಸಿ ಹಿಂದುಳಿದ ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಿಗೆ ಆರು ಜಿಲ್ಲೆಗಳಿಗೆ ವಿಶೇಷ ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಅಡಿಯಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಆ ಪೈಕಿ ಈವರೆವಿಗೂ ಖರ್ಚಾದ ಹಣ ಎಷ್ಟು ; (ವರ್ಷವಾರು, ಇಲಾಖೆವಾರು, ಯೋಜನೆವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಸಾಮಾನ್ಯ ಯೋಜನೆ ಅಡಿಯಲ್ಲಿ ೨೦೦೯ ರಿಂದ ೨೦೧೫ ರವರೆಗೆ ಹಿಂದುಳಿದ ಹೈದ್ರಾಬಾದ್ ಕರ್ನಾಟಕ ಪ್ರದೇಶಗಳಿಗೆ ಆರು ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಆ ಪೈಕಿ ಖರ್ಚಾಗಿರುವ ಹಣ ಎಷ್ಟು ? (ವರ್ಷವಾರು, ಜಿಲ್ಲಾವಾರು, ಇಲಾಖೆವಾರು, ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೩೨ (೫೯೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಲಾಖೆಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ;

(ಇ) ಸರ್ಕಾರದ ಯೋಜನೆಗಳು ಹಿಂದುಳಿದ ಸಮುದಾಯದವರಿಗೆ ಅತೀ ವೇಗದಲ್ಲಿ ತಲುಪಬೇಕಾಗಿರುವುದರಿಂದ ಈ ಇಲಾಖೆಯಲ್ಲಿ ಖಾಲಿ ಇರುವ ಎಲ್ಲ ಹುದ್ದೆಗಳನ್ನು ಅತೀ ತುರ್ತಾಗಿ ತುಂಬಲು ಸರ್ಕಾರ ಗಮನ ಹರಿಸುವುದೇ ; ಎಷ್ಟು ದಿನದಲ್ಲಿ ಖಾಲಿ ಇರುವ ಎಲ್ಲ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಹೆಣ್ಣು ಭ್ರೂಣ ಹತ್ಯೆ ತಡೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೫೩೩ (೫೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಜನನ ಪ್ರಮಾಣ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾಸಗಿ ಆಸ್ಪತ್ರೆಗಳಲ್ಲಿ, ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಮತ್ತು ಮೊಬೈಲ್ ಸ್ಕ್ಯಾನ್ ಮೂಲಕ ಭ್ರೂಣಗಳನ್ನು ಪತ್ತೆ ಹಚ್ಚಿ, ಹೆಣ್ಣಿನ ಜನನವನ್ನೇ ತಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ೧೯೯೪ರ ಹೆಣ್ಣು ಭ್ರೂಣ ಹತ್ಯೆ ನಿಷೇಧ ತಡೆ ಕಾಯಿದೆ ಪರಿಣಾಮಕಾರಿಯಾಗಿ ಜಾರಿ ಮಾಡಲು ಸರ್ಕಾರಕ್ಕೆ ಸಮಸ್ಯೆಗಳೇನಾದರೂ ಇವೆಯೇ ;

(ಈ) ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆಯನ್ನು ಪರಿಣಾಮಕಾರಿಯಾಗಿ ತಡೆಯಲು ಮತ್ತು ಹೆಣ್ಣಿನ ಜನನವನ್ನು ಹೆಚ್ಚು ಮಾಡಲು ಸರ್ಕಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆಯೇ ? (ವಿವರ ನೀಡುವುದು)

## ದುಬಾರಿ ವೈದ್ಯಕೀಯ ದರಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೫೩೪ (೫೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಆಸ್ಪತ್ರೆಗಳು/ವೈದ್ಯಕೀಯ ಸಂಸ್ಥೆಗಳು ವಿಧಿಸುವ ದುಬಾರಿ ಸೇವಾ ಶುಲ್ಕ/ದರಗಳನ್ನು ನಿಯಂತ್ರಿಸಲು/ಕಡಿಮೆಗೊಳಿಸಲು, ೨೦೦೭ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯಿದೆಯಲ್ಲಿ, ಅವಕಾಶಗಳಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಆ) ಖಾಸಗಿ ಸಂಸ್ಥೆಗಳು ವಿಧಿಸುವ ಸೇವಾ ಶುಲ್ಕ/ದರಗಳನ್ನು ಶ್ರೀಸಾಮಾನ್ಯರೂ ಭರಿಸುವಂತಹ ದರಗಳಲ್ಲಿ ನಿಗದಿಪಡಿಸಲು ಕಾನೂನಿಗೆ ಸೂಕ್ತ ತಿದ್ದುಪಡಿಗಳನ್ನು ತರಲು ಚಿಂತಿಸುವುದೇ ?

## ಬೆಂಗಳೂರು ಹೊರಗಡೆ ಸಾಫ್ಟ್‌ವೇರ್, ತಂತ್ರಜ್ಞಾನ ಉದ್ದಿಮೆ ವಿಸ್ತರಣೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೫೩೫ (೬೦೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಹೊರಗಡೆ ಪ್ರದೇಶಗಳಲ್ಲಿ ಸಾಫ್ಟ್‌ವೇರ್ ಅಭಿವೃದ್ಧಿ ಉದ್ದಿಮೆ ವಿಸ್ತರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಇಲ್ಲಿಯವರೆಗೆ ಬೆಂಗಳೂರಿನ ಹೊರಗಡೆ ಎಷ್ಟು ಸಾಫ್ಟ್‌ವೇರ್ ಉದ್ದಿಮೆಗಳು ಪ್ರಾರಂಭವಾಗಿವೆ ;

(ಇ) ಈ ಉದ್ದಿಮೆಗಳಲ್ಲಿ ಉದ್ಯೋಗ ಪಡೆದಿರುವವರ ಸಂಖ್ಯೆ ಎಷ್ಟು ;

(ಈ) ಬೆಂಗಳೂರಿನ ಹೊರಗಡೆಯ ಕಂಪನಿಗಳಿಂದ ಈವರೆವಿಗೆ ಎಷ್ಟು ಮೊತ್ತದ ವ್ಯವಹಾರ ನಡೆದಿದೆ ; ಈ ಕಂಪನಿಗಳಿಂದ ಸರ್ಕಾರದ ಬೊಕ್ಕಸಕ್ಕೆ ಬಂದ ಆದಾಯವೆಷ್ಟು ?

## ಕಿಮ್ಸ್ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹುಬ್ಬಳ್ಳಿ ಇಲ್ಲಿನ ನಿರ್ದೇಶಕರ ಹುದ್ದೆಯ ನೇಮಕಾತಿ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೫೩೬ (೬೦೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ (ಕಿಮ್ಸ್) ಹುಬ್ಬಳ್ಳಿ ಇಲ್ಲಿ ಖಾಲಿ ಇರುವ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡಲು ಅರ್ಜಿಯನ್ನು ಆಹ್ವಾನಿಸಿದಾಗ ಯಾವ ಮಾನದಂಡವನ್ನು ವಿಧಿಸಲಾಗಿತ್ತು ;



(ಆ) ಸದರಿ ಹುದ್ದೆಗೆ ನೇಮಕಾತಿ ಕೋರಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ; (ಅರ್ಜಿದರರ ಹೆಸರು, ವಿದ್ಯಾರ್ಹತೆ ಹಾಗೂ ಸೇವಾ ಅನುಭವದ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ನಿರ್ದೇಶಕರ ಹುದ್ದೆಗೆ ವೈದ್ಯಕೀಯ ಅಧೀಕ್ಷಕರಾಗಿ ಆಡಳಿತಾತ್ಮಕ ಅನುಭವ ಅಥವಾ ೧೦ ವರ್ಷ ಬೋಧನಾ ಅನುಭವ ಇಲ್ಲದೇ ಪ್ರಾಧ್ಯಾಪಕರಾಗಿ ಕನಿಷ್ಠ ೫ ವರ್ಷದ ಅನುಭವವುಳ್ಳವರು ಮಾತ್ರ ಅರ್ಹರಿರುವುದು ನಿಜವೇ ;

(ಈ) ಅರ್ಹತೆ ಇಲ್ಲದವರನ್ನು ಸದರಿ ಸಂಸ್ಥೆಗೆ ನಿರ್ದೇಶಕರನ್ನಾಗಿ ನೇಮಕ ಮಾಡಿದ್ದು ನಿಜವೇ ; ನಿಜವಿದ್ದಲ್ಲಿ, ಅವರು ಅರ್ಹರೇ ; ಇಲ್ಲದಿದ್ದಲ್ಲಿ ನೇಮಕ ಮಾಡಿದ್ದು ಸರಿಯೇ ; ಇದರಲ್ಲಿ ಸರ್ಕಾರ ನಿಯಮವನ್ನು ಉಲ್ಲಂಘಿಸಿರುವುದು ನಿಜವೇ ?

## ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲಾಗಿರುವ ವೈದ್ಯಕೀಯ ಕಾಲೇಜುಗಳ ಸ್ಥಿತಿಗತಿ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೫೩೭ (೬೦೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ೬ ವೈದ್ಯಕೀಯ ಕಾಲೇಜುಗಳನ್ನು ಎಲ್ಲಿ ಎಲ್ಲಿ ಪ್ರಾರಂಭಿಸಲಾಗಿದೆ ; ಅವು ಈಗ ಯಾವ ರೀತಿ ಕೆಲಸ ನಿರ್ವಹಿಸುತ್ತಿವೆ ;

(ಆ) ಎಮ್.ಸಿ.ಆಯ್. ನಿಯಮದಂತೆ ಮೂಲಭೂತ ಸೌಲಭ್ಯಗಳಾದ ಆಸ್ಪತ್ರೆ, ಕಟ್ಟಡ, ಪೀಠೋಪಕರಣ ಇತ್ಯಾದಿಗಳನ್ನು ಅಳವಡಿಸಲಾಗಿದೆಯೇ ;

(ಇ) ಎಮ್.ಸಿ.ಆಯ್.ದವರು ರಾಜ್ಯಕ್ಕೆ ಭೇಟಿ ಕೊಟ್ಟು ಸದರಿ ಕಾಲೇಜುಗಳಿಗೆ ಅನುಮತಿಯನ್ನು ನೀಡಿದ್ದಾರೆಯೇ ; ನೀಡದಿದ್ದರೆ ಕಾರಣಗಳೇನು ;

(ಈ) ಕಾಲೇಜುಗಳು ಪ್ರಾರಂಭವಾಗುವುದಕ್ಕಿಂತ ಪೂರ್ವದಲ್ಲಿಯೇ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಂಡಿದ್ದು ನಿಜವೇ ; ನಿಜವಿದ್ದಲ್ಲಿ, ಸದರಿ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ಎಷ್ಟು ಸಂಬಳ ಸಂದಾಯ ಮಾಡಲಾಗುತ್ತಿದೆ ; ಹಾಗೂ ಅವರ ಕೆಲಸಗಳೇನು ;

(ಉ) ಸಾಕಷ್ಟು ಜನಸಂಖ್ಯೆಯನ್ನು ಹೊಂದಿದ್ದು, ದೊಡ್ಡ ಜಿಲ್ಲೆಯಾಗಿರುವ ಹಾವೇರಿಗೆ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡದಿರಲು ಕಾರಣಗಳೇನು ಹಾಗೂ ಈ ಜಿಲ್ಲೆಗೆ ವೈದ್ಯಕೀಯ ಕಾಲೇಜನ್ನು ಯಾವಾಗ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯ ವಿದ್ಯಾರ್ಥಿನಿಲಯದ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೮ (೭೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; ಈ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ



ಸೌಕರ್ಯ ಇಲ್ಲದೇ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ಕಳೆದ ಮೂರು ವರ್ಷಗಳಿಂದ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಬಾಕಿ ಉಳಿದಿರುವ ಮೊತ್ತವೆಷ್ಟು ;

(ಇ) ಈ ಜಿಲ್ಲೆಗಳಿಗೆ ಹೊಸದಾಗಿ ವಿದ್ಯಾರ್ಥಿನಿಲಯಗಳ ಕಟ್ಟಡ ಕಾಮಗಾರಿಗಳಿಗೆ ಕಳೆದ ೩ ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಉಪಯೋಗಿಸಿದ ಅನುದಾನ ಎಷ್ಟು ?

## ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯ ಸಾರಿಗೆ ಸೌಲಭ್ಯದ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೯ (೭೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯ ಹಲವಾರು ಹಳ್ಳಿಗಳ ಜನರು ಸಾರಿಗೆ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ವಂಚಿತವಾಗಿರುವ ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆಯ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೦ (೭೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಅವಶ್ಯಕತೆಯಿರುವ ಔಷಧಿಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಅವಶ್ಯಕತೆಯಿರುವ ಔಷಧಿಗಳನ್ನು ನೀಡದೇ ಈ ಔಷಧಿಗಳನ್ನು ಖಾಸಗಿ ಔಷಧಾಲಯಗಳಲ್ಲಿ ಕೊಂಡುಕೊಳ್ಳಲು ವೈದ್ಯರು ಸಲಹಾ ಪತ್ರಗಳನ್ನು ನೀಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಹಾಗಿದ್ದಲ್ಲಿ, ಸಾರ್ವಜನಿಕ ರೋಗಿಗಳು ಪ್ರತಿನಿತ್ಯ ಎದುರಿಸುತ್ತಿರುವ ತೊಂದರೆಯನ್ನು ಗಮನದಲ್ಲಿಟ್ಟುಕೊಂಡು ಪರಿಹರಿಸುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ರಾಜ್ಯ ಸರ್ಕಾರದ ವೈದ್ಯಾಧಿಕಾರಿಗಳು ಸರ್ಕಾರದ ಆದೇಶವನ್ನು ಉಲ್ಲಂಘಿಸುತ್ತಿರುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೧ (೬೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಎಲ್ಲಾ ಅನುಕೂಲತೆಗಳನ್ನು ಪಡೆದುಕೊಂಡು, ವ್ಯಾಸಂಗ ಮಾಡಿ ವೈದ್ಯಾಧಿಕಾರಿಗಳಾಗಿ ಗ್ರಾಮೀಣ ಪ್ರದೇಶದಲ್ಲಿ ಕಡ್ಡಾಯವಾಗಿ ಸೇವೆ ಸಲ್ಲಿಸಲು ಸರ್ಕಾರಿ ಆದೇಶಗಳಿದ್ದರೂ ಸಹ ಈ ಆದೇಶಗಳು ಸಮರ್ಪಕವಾಗಿ ಜಾರಿಯಾಗದೇ ಇರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ವೈದ್ಯಾಧಿಕಾರಿಗಳು ಸರ್ಕಾರದ ಕಾನೂನನ್ನು ಪಾಲಿಸದೇ ಇರುವುದರಿಂದ ಸ್ಥಳೀಯ ರೋಗಿಗಳಿಗೆ ಸರಿಯಾದ ಚಿಕಿತ್ಸೆಯು ದೊರಕದೇ ಸರ್ಕಾರದ ಸವಲತ್ತುಗಳಿಂದ ವಂಚಿತರಾಗುತ್ತಿರುವುದರಿಂದ ಉದಾಸೀನ ತೋರುತ್ತಿರುವ ವೈದ್ಯರ



ವಿರುದ್ಧ ನಿಯಂತ್ರಣ ಸಾಧಿಸಲು ಸರ್ಕಾರವು ಯಾವ ಕಠಿಣ ಕ್ರಮ ಕೈಗೊಂಡಿದೆ ;

(ಇ) ಸರ್ಕಾರದ ಆದೇಶದ ಪ್ರಕಾರ ಕಳೆ 03 ವರ್ಷಗಳಿಂದ ಸರ್ಕಾರಿ ಸೀಟ್ ಪಡೆದು ವ್ಯಾಸಂಗವನ್ನು ಪೂರೈಸಿದವರ ಸಂಖ್ಯೆ ಎಷ್ಟು ; ಹೀಗೆ ವ್ಯಾಸಂಗ ಪೂರೈಸಿ ಸೇವೆಗೆ ಸೇರದೇ ಸರ್ಕಾರದ ಆದೇಶವನ್ನು ಪಾಲಿಸದೇ ಇರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; ಇವರ ವಿರುದ್ಧ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ;

(ಈ) ಗ್ರಾಮೀಣ ಪ್ರದೇಶದ ಸಾರ್ವಜನಿಕರ ಹಿತದೃಷ್ಟಿಯಿಂದ ವೈದ್ಯರ ಸಮಸ್ಯೆಯನ್ನು ನೀಗಿಸುವಲ್ಲಿ ಸರ್ಕಾರ ಶೀಘ್ರವಾಗಿ ಕ್ರಮ ಕೈಗೊಳ್ಳುವುದೇ ?

## ಗಂಗಾ ಕಲ್ಯಾಣ ಯೋಜನೆಯಡಿಯ ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೨ (೬೨೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ವಾರ್ಷಿಕ ಎಷ್ಟು ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಸೌಲಭ್ಯವನ್ನು ನೀಡಲಾಗುತ್ತಿದೆ ;

(ಆ) ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಈ ಯೋಜನೆಯನ್ನು ಪಡೆಯಲು ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಾಗಿದ್ದು, ಕಡಿಮೆ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಆಯ್ಕೆಗೊಂಡ ಫಲಾನುಭವಿಗಳಿಗೆ

ಯೋಜನೆಯ ಸೌಲಭ್ಯವನ್ನು ನೀಡಲು ಕಾಲಮಿತಿಯನ್ನು ನಿಗಮವು ನೀಡಿದೆಯೇ ;

(ಇ) ಈ ಯೋಜನೆಗಳ ಜಾರಿಯಲ್ಲಿ ಸೌಲಭ್ಯವನ್ನು ಪಡೆಯಲು ನಿಗಮದ ಅಧಿಕಾರಿಗಳಿಂದ ಭ್ರಷ್ಟಾಚಾರವಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ೦೫ ವರ್ಷಗಳಿಂದ ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆದ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ; ನೀರು ದೊರೆತಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ; ಪಂಪ್ ಅಳವಡಿಸಿರುವ ಸಂಖ್ಯೆ ಎಷ್ಟು ; ಹಾಗೂ ವಿದ್ಯುತ್ ಅಳವಡಿಸಿರುವ ಸಂಖ್ಯೆ ಎಷ್ಟು ; ಇದಕ್ಕೆ ತಗುಲಿದ ಒಟ್ಟು ವೆಚ್ಚವೆಷ್ಟು ? (ಜಿಲ್ಲಾವಾರು ಹಾಗೂ ಬೆಂಗಳೂರು ನಗರ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳನ್ನು ಕಲ್ಪಿಸಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ಚುನಾಯಿತರಾದವರು) :–**



೫೪೩ (೬೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ರ ಸಾಲಿನಲ್ಲಿ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವೈಯಕ್ತಿಕ ಮತ್ತು ಸಾಮೂಹಿಕವಾಗಿ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ೦೩ ವರ್ಷಗಳಿಂದ ಮೇಲಿನ ಜಿಲ್ಲೆಗಳಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆದು ಪಂಪ್‌ಸೆಟ್‌ಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಇ) ಮಂಜೂರಾದ ಕೊಳವೆ ಬಾವಿಗಳನ್ನು ನಿಗದಿತ ಸಮಯದಲ್ಲಿ ಕೊರೆಯಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕೊಳವೆ ಬಾವಿಗಳನ್ನು ಕೊರೆಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳುತ್ತದೆ ?

## ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ ಇರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೪ (೬೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ;

(ಈ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಸಿಬ್ಬಂದಿಗಳ ಕೊರತೆಯುನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ನೀಡಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೫ (೬೨೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಕಳೆದ ೦೩ ವರ್ಷಗಳಿಂದ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮೂಹಕ್ಕಾಗಿ ನಿಗದಿಪಡಿಸಿದ ಅನುದಾನ ಮತ್ತು ಮಾಡಲಾದ ವೆಚ್ಚದ ವರ್ಷವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು ;

(ಆ) ಈ ಮೇಲಿನಂತೆ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಸಮೂಹ ಮತ್ತು ವೈಯಕ್ತಿಕ ಫಲಾನುಭವಿಗಳಿಗೆ ನೀಡಿದ ಸೌಲಭ್ಯಗಳ ಸಂಖ್ಯೆ ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಹೀಗೆ ನೀಡಿರುವ ಸಾಲದಲ್ಲಿ ಎಷ್ಟು ಹಣವನ್ನು ವಸೂಲು ಮಾಡಲಾಗಿದೆ ಹಾಗೂ ಎಷ್ಟು ಸಾಲವನ್ನು ಮನ್ನಾ ಮಾಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಖಾಸಗಿ ಚಿಕಿತ್ಸಾಲಯ ತೆರೆದಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೭ (೬೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಸಾರ್ವಜನಿಕ ವೈದ್ಯಕೀಯ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಮತ್ತು ವೈದ್ಯಕೀಯ ಬೋಧಕರ

ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸರ್ಕಾರದಿಂದ ನೇಮಕಗೊಂಡ ವೈದ್ಯರುಗಳು ಖಾಸಗಿಯಾಗಿ ಚಿಕಿತ್ಸಾ ಕೇಂದ್ರಗಳನ್ನು ತೆರೆಯಲು ಸರ್ಕಾರಿ ನಿಯಮಗಳಲ್ಲಿ ಅವಕಾಶವಿದೆಯೇ ;

(ಇ) ಇಲ್ಲದಿದ್ದಲ್ಲಿ, ಖಾಸಗಿಯಾಗಿ ಚಿಕಿತ್ಸಾ ಕೇಂದ್ರಗಳನ್ನು ಹೊಂದಿರುವ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ವೈದ್ಯರುಗಳ ಮೇಲೆ ಸರ್ಕಾರವು ಕಠಿಣ ಕ್ರಮ ಕೈಗೊಂಡಿದೆ ?

## ಮುರಾರ್ಜಿ ದೇಸಾಯಿ ವಸತಿ ಶಾಲೆಗಳ ವಿವರ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೭ (೬೯೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮುರಾರ್ಜಿ ದೇಸಾಯಿ ವಸತಿ ಶಾಲೆ/ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಸದರಿ ವಿದ್ಯಾರ್ಥಿಗಳಿಗೆ ೨೦೧೪–೧೫ನೇ ಸಾಲಿನ ಸಮವಸ್ತ್ರಗಳನ್ನು ಪೂರೈಕೆ ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಲ್ಲವಾದಲ್ಲಿ, ವಿಳಂಬಕ್ಕೆ ಕಾರಣಗಳೇನು ; ಸಮವಸ್ತ್ರಗಳ ವಿತರಣೆಯನ್ನು ಯಾವ ಏಜೆನ್ಸಿಗೆ ನೀಡಲಾಗಿದೆ ; ಸದರಿ



ಏಜೆನ್ಸಿಯವರಿಗೆ ಸರ್ಕಾರದಿಂದ ಅನುದಾನವನ್ನು ನೀಡಲಾಗಿದೆಯೇ ?

## ಕೊಳವೆ ಬಾವಿ ಯೋಜನೆಯಲ್ಲಿ ಆಯ್ಕೆಯಾದ ಫಲಾನುಭವಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೮ (೬೯೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

(ಅ) ಕೊಪ್ಪಳ ಜಿಲ್ಲೆಯಲ್ಲಿನ ದಿ: ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ, ಡಾ॥ ಬಿ.ಆರ್. ಅಂಬೇಡ್ಕರ್, ಮಹರ್ಷಿ ವಾಲ್ಮೀಕಿ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳಲ್ಲಿ ೨೦೧೨–೧೩ ರಿಂದ ಪ್ರಸಕ್ತ ಸಾಲಿನವರೆಗೂ ಕೊಳವೆ ಬಾವಿ ಯೋಜನೆಯಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಕೊಳವೆ ಬಾವಿ ಕೊರೆಸಿದ ಮತ್ತು ಕೊರೆಸದೇ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಕೊಳವೆ ಬಾವಿ ಕೊರೆಸುವಲ್ಲಿ ವಿಳಂಬಕ್ಕೆ ಕಾರಣಗಳೇನು ;

(ಈ) ಕೊಳವೆ ಬಾವಿಯನ್ನು ಕೊರೆಯಿಸಿ, ಸಲಕರಣೆಗಳನ್ನು ಇನ್ನೂ ವಿತರಿಸದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಾರ್ಷಿಕ, ತಾಲ್ಲೂಕುವಾರು ಪ್ರತ್ಯೇಕ ವಿವರಗಳನ್ನು ನೀಡುವುದು)

(ಉ) ಸಲಕರಣೆಗಳನ್ನು ಪೂರೈಸಿದಾಗ್ಯೂ ವಿದ್ಯುತ್ ಸಂಪರ್ಕ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ?

## ಪ್ರತಿ ತಾಲ್ಲೂಕಿಗೊಂದು ಹಿಂದುಳಿದ ವರ್ಗಗಳ ಕಛೇರಿಯ ಸ್ಥಾಪನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೯ (೭೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗಾಗಿ ೨೦೧೩ರ ಆಯವ್ಯಯದಲ್ಲಿ ಮಂಡಿಸಿದಂತೆ, ಪ್ರತಿ ತಾಲ್ಲೂಕಿಗೂ ಹಿಂದುಳಿದ ವರ್ಗಗಳ ಇಲಾಖೆಯ ಕಛೇರಿಯನ್ನು ಸ್ಥಾಪಿಸುವ ಕಾರ್ಯ ಯಾವ ಹಂತದಲ್ಲಿದೆ ; ಸದರಿ ಕಾರ್ಯಾಲಯಗಳಲ್ಲಿ ಸೃಷ್ಟಿಯಾದ ಹುದ್ದೆಗಳ ಪೂರ್ಣ ತಾಲ್ಲೂಕುವಾರು ವಿವರಗಳನ್ನು ನೀಡುವುದು ;

(ಆ) ಪ್ರಸ್ತುತ ಈ ಕಾರ್ಯಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ೨೦೧೪–೧೫ನೇ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಸ್ವೀಕೃತವಾದ ಸಾಲದ ಅರ್ಜಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೦ (೯೭೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿನ ದಿ: ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ, ಡಾ॥ ಬಿ.ಆರ್. ಅಂಬೇಡ್ಕರ್, ಮಹರ್ಷಿ ವಾಲ್ಮೀಕಿ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳಲ್ಲಿ ೨೦೧೪–೧೫ನೇ ಸಾಲಿನಲ್ಲಿ ಕೊಳವೆ ಬಾವಿ ಯೋಜನೆ ಹಾಗೂ ಸಾಲ ಸೌಲಭ್ಯಕ್ಕಾಗಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ;



(ಆ) ಸದರಿ ಅರ್ಜಿಗಳಲ್ಲಿ ಮಂಜೂರು ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರದಿಂದ ಪ್ರತಿ ನಿಗಮಕ್ಕೂ ನೀಡಲಾದ ಗುರಿ ಎಷ್ಟು ;

(ಈ) ೨೦೧೪–೧೫ನೇ ಸಾಲಿನ ಫಲಾನುಭವಿಗಳ ಆಯ್ಕೆಯನ್ನು ಯಾವ ಆಧಾರದ ಮೇಲೆ ಕೈಗೊಳ್ಳಲಾಗಿದೆ ;

(ಉ) ಶಾಸಕರ ಅಧ್ಯಕ್ಷತೆಯಲ್ಲಿ ಸಭೆಗಳನ್ನು ಜರುಗಿಸಿ ಫಲಾನುಭವಿಗಳ ಆಯ್ಕೆ ಮಾಡಿದ್ದಲ್ಲಿ ಸಭೆಯ ನಡವಳಿಯ ಪ್ರತಿಯನ್ನು ನೀಡುವುದು ?

## ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿನ ವೈದ್ಯ ಹುದ್ದೆಗಳ ಮಾಹಿತಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೧ (೯೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ–ರಾಯಚೂರು ಜಿಲ್ಲೆಗಳಲ್ಲಿ ಸದ್ಯ ಕಾರ್ಯನಿರ್ವಹಿಸುತ್ತಿರುವ ಒಟ್ಟು ವೈದ್ಯರ ಸಂಖ್ಯೆ ಎಷ್ಟು; ಖಾಲಿಯಿರುವ ವೈದ್ಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕ ವಿವರಗಳನ್ನು ನೀಡುವುದು)

(ಆ) ಎರಡು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಲ್ಯಾಬ್ ಟೆಕ್ನಿಶಿಯನ್ ಮತ್ತು ಎ.ಎನ್.ಎಂ.ಗಳ ಸಂಖ್ಯೆ ಎಷ್ಟು ;

(ಇ) ಎ.ಎನ್.ಎಂ.ಗಳ ನೇಮಕವನ್ನು ಯಾವ ಆಧಾರದ ಮೇಲೆ ಕೈಗೊಳ್ಳಲಾಗುತ್ತಿದೆ ;

(ಈ) ಇದಕ್ಕೆ ಇರುವ ಮಾನದಂಡಗಳೇನು; ಸದ್ಯ ಎರಡು ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಖಾಲಿಯಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ಗ್ರಾಮೀಣ ವಿಜ್ಞಾನ ಕೇಂದ್ರಗಳ ಕಾರ್ಯನಿರ್ವಹಣೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೫೨ (೭೨೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಗ್ರಾಮೀಣ ವಿಜ್ಞಾನ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಗ್ರಾಮೀಣ ವಿಜ್ಞಾನ ಕೇಂದ್ರಗಳಿಗೆ ಕಾರ್ಯಕ್ರಮ ಏರ್ಪಡಿಸಲು ಪ್ರತಿ ವರ್ಷ ಅನುದಾನ ನೀಡಲಾಗುತ್ತಿದೆಯೇ; ನೀಡಲಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಒದಗಿಸಲಾಗಿರುವ ಅನುದಾನದ ಮೊತ್ತ ಎಷ್ಟು ; (ವಿವರ ನೀಡುವುದು)



(ಇ) ಬರುವ ಆರ್ಥಿಕ ವರ್ಷದಲ್ಲಿ ಹೊಸದಾಗಿ ಗ್ರಾಮೀಣ ಶಾಲಾ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸುವ ಯೋಜನೆ ಇದೆಯೇ ?

## ರಾಜ್ಯದಲ್ಲಿನ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೫೩ (೭೦೧) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದ್ಯ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವೈದ್ಯಕೀಯ ಮಹಾ ವಿದ್ಯಾಲಯಗಳಲ್ಲಿ ಎಂ.ಸಿ.ಐ.ನಿಯಮದಡಿ ಬೋಧನೆ ಮಾಡಲು ಪ್ರಾಧ್ಯಾಪಕರ ಮತ್ತು ಆಸ್ಪತ್ರೆ ನೋಡಿಕೊಳ್ಳಲು ವೈದ್ಯರ ಕೊರತೆ ಇದೆಯೇ ; (ಕಾಲೇಜುವಾರು ವಿವರ ನೀಡುವುದು)

(ಇ) ವೈದ್ಯರ ಕೊರತೆ ಇದ್ದಲ್ಲಿ (ಬರುವ ಶೈಕ್ಷಣಿಕ ವರ್ಷ) ೨೦೧೫–೧೬ರಲ್ಲಿ ಎಷ್ಟು ಪ್ರಾಧ್ಯಾಪಕ ಹಾಗೂ ವೈದ್ಯರನ್ನು ನೇಮಕ ಮಾಡಿಕೊಳ್ಳುವ ಯೋಜನೆ ಹೊಂದಲಾಗಿದೆ ? (ಕಾಲೇಜುವಾರು ಪ್ರತ್ಯೇಕ ವಿವರ ನೀಡುವುದು)

## ರಾಜ್ಯದಲ್ಲಿ ವಿಜ್ಞಾನ ಪಾರ್ಕ್‌ನ್ನು ಪ್ರಾರಂಭಿಸಿರುವ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೫೪ (೭೦೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ

ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಜ್ಞಾನ ಪಾರ್ಕನ್ನು ಎಲ್ಲಿ ಪ್ರಾರಂಭಿಸಲು ನಿರ್ಧರಿಸಲಾಗಿದೆ; ಇದರ ಪ್ರಗತಿ ಯಾವ ಹಂತದಲ್ಲಿದೆ ;

(ಆ) ರಾಜ್ಯದಲ್ಲಿ ಎಷ್ಟು ಪ್ರಾದೇಶಿಕ, ಉಪ ಪ್ರಾದೇಶಿಕ ಹಾಗೂ ಜಿಲ್ಲಾ ವಿಜ್ಞಾನ ಕೇಂದ್ರಗಳು ಇವೆ ; (ವಿಭಾಗವಾರು ಹಾಗೂ ಜಿಲ್ಲಾವಾರು ಪಟ್ಟಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಹೊಸದಾಗಿ ಪ್ರಾದೇಶಿಕ, ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಪ್ರಾರಂಭಿಸುವ ಯೋಜನೆ ಇದೆಯೇ; ಇದ್ದಲ್ಲಿ, ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು ;

(ಈ) ಈಗಾಗಲೇ ರೂ. ೧ ಕೋಟಿ ಹಣ ಬಿಡುಗಡೆ ಮಾಡಿರುವ ಹಾವೇರಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಕಟ್ಟಡದ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಉ) ಗದಗ ಜಿಲ್ಲೆ, ಗದಗದಲ್ಲಿ ಮುಂದಿನ ಆರ್ಥಿಕ ವರ್ಷದಲ್ಲಿ ಉಪ ಪ್ರಾದೇಶಿಕ/ಜಿಲ್ಲಾ ವಿಜ್ಞಾನ ಕೇಂದ್ರ ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ವೈದ್ಯಕೀಯ ಮಹಾವಿದ್ಯಾಲಯಗಳ ಪ್ರಾರಂಭ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೫೫ (೭೦೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ವೈದ್ಯಕೀಯ ಮಹಾ ವಿದ್ಯಾಲಯಗಳನ್ನು ೨೦೧೫–೧೬ರ ಶೈಕ್ಷಣಿಕ ವರ್ಷದಿಂದ ಯಾವ ಯಾವ ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗುವುದು ;

(ಆ) ಹೊಸದಾಗಿ ಪ್ರಾರಂಭವಾಗಲಿರುವ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಕಾಲೇಜು ಕಟ್ಟಡ, ಆಸ್ಪತ್ರೆ, ವಸತಿ ನಿಲಯ ಮುಂತಾದ ಮೂಲಭೂತ ಸೌಲಭ್ಯಗಳನ್ನು ನಿರ್ಮಿಸುವ ಕಾರ್ಯ ಪೂರ್ಣಗೊಂಡಿದೆಯೇ ;

(ಇ) ಎಂ.ಸಿ.ಐ. ನವರು (Medical council of India) ಎಷ್ಟು ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಲು ಅನುಮತಿ ನೀಡಿರುತ್ತಾರೆ ? (ವಿವರ ನೀಡುವುದು)

## ಜಿಲ್ಲಾ ಆಸ್ಪತ್ರೆ ತಾಲ್ಲೂಕು ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೫೬ (೭೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಹಾಗೂ ಗ್ರಾಮೀಣ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಣೆ ನೀಡುವುದು)

(ಆ) ಈ ಎಲ್ಲಾ ಆಸ್ಪತ್ರೆಗಳಲ್ಲಿ ನಿಯಮಾನುಸಾರ ಇರಬೇಕಾದ ವೈದ್ಯರ ಮತ್ತು ಪರಿಣಿತ ವೈದ್ಯರ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆಯೇ ; (ವಿವರ

ನೀಡುವುದು)

(ಇ) ೨೦೧೫–೧೬ನೇ ಸಾಲಿನ ಆರ್ಥಿಕ ವರ್ಷದಲ್ಲಿ ವೈದ್ಯರುಗಳನ್ನು ನೇಮಕ ಮಾಡಿಕೊಳ್ಳುವ ಯೋಜನೆ ಇದೆಯೇ ?

## ಮಂಗಳೂರು ವೆನ್‌ಲಕ್ ಆವರಣದಲ್ಲಿ ಅಪಘಾತಗಳಿಗೆ ಸಂಬಂಧಪಟ್ಟ ಚಿಕಿತ್ಸೆ ಕೇಂದ್ರ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೫೭ (೭೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಆವರಣದಲ್ಲಿ ಅಪಘಾತಗಳಿಗೆ ಸಂಬಂಧಪಟ್ಟ ಪ್ರತ್ಯೇಕ ಟ್ರೋಮಸೆಂಟರ್ ಮತ್ತು ತುರ್ತು ಚಿಕಿತ್ಸೆ ಕೇಂದ್ರ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಪ್ರಸ್ತುತ ವೆನ್‌ಲಾಕ್ ಆಸ್ಪತ್ರೆಗೆ ದಿನವೊಂದಕ್ಕೆ ಎಷ್ಟು ಜನ ಅಪಘಾತಗೊಳಗಾದ ರೋಗಿಗಳು ದಾಖಲಾಗುತ್ತಿದ್ದಾರೆ ;

(ಇ) ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನರ್ಸಿಂಗ್ ಕಾಲೇಜಿನಲ್ಲಿ ಪ್ರಾಂಶುಪಾಲರು ಸಹಿತ ಬೋಧಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬೋಧಕರು ಇಲ್ಲದೇ ಮಾನ್ಯತೆಯನ್ನು ರದ್ದುಗೊಳಿಸಲು ನರ್ಸಿಂಗ್ ಕೌನ್ಸಿಲ್ ಆದೇಶ ನೀಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಈ) ನರ್ಸಿಂಗ್ ಕಾಲೇಜಿಗೆ ಪ್ರತ್ಯೇಕ ಕಟ್ಟಡವನ್ನು ದೊರಕಿಸದೇ ಇರಲು ಕಾರಣಗಳೇನಾದರೂ ಇದೆಯೇ ; (ವಿವರ ನೀಡುವುದು)



(ಉ) ಪ್ರಸ್ತುತ ಕಟ್ಟಡ ತೀರ ಹಳೆಯದಾಗಿದ್ದು ತರಗತಿಗಳನ್ನು ನಡೆಸಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## "ಡ್ರಗ್ಸ್ ಮತ್ತು ಲಾಜಿಸ್ಟಿಕ್ ಸಂಸ್ಥೆ"ಯ ಟೆಂಡರ್ ಪ್ರಕ್ರಿಯೆ

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೫೮ (೭೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ "ಡ್ರಗ್ಸ್ ಮತ್ತು ಲಾಜಿಸ್ಟಿಕ್ ಸಂಸ್ಥೆ"ಯಲ್ಲಿ ನಡೆದ ಟೆಂಡರ್ ಪ್ರಕ್ರಿಯೆ ಪಾರದರ್ಶಕವಾಗಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಡ್ರಗ್ಸ್ ಮತ್ತು ಲಾಜಿಸ್ಟಿಕ್ ಸಂಸ್ಥೆಯು ಟೆಂಡರ್ ಕರೆಯುವ ಸಂದರ್ಭದಲ್ಲಿ ಔಷಧಿ ವಿತರಣಾ ಕಂಪನಿಗಳ ಒತ್ತಾಯಕ್ಕೆ ಮಣಿದು ಅನಗತ್ಯ ಔಷಧಿಗಳ ಟೆಂಡರ್‌ಗಳನ್ನು ಮಾತ್ರ ಕರೆಯಲಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಎಷ್ಟು "ಡ್ರಗ್ಸ್ ಕಂಪನಿಗಳು" ನೋಂದಾಯಿಸಿ ಕೊಳ್ಳಲಾಗಿದೆ ? (ವಿವರ ನೀಡುವುದು)

## ಸರ್ಕಾರದ ವತಿಯಿಂದ ರಿಯಾಯಿತಿ ದರದಲ್ಲಿ ಸಾರ್ವಜನಿಕರಿಗೆ "ಕ್ಯಾಂಟೀನ್ ವ್ಯವಸ್ಥೆ"

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೪೯ (೨೦೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ವತಿಯಿಂದ ರಿಯಾಯಿತಿ ದರದಲ್ಲಿ ಸಾರ್ವಜನಿಕರಿಗೆ ಊಟ, ತಿಂಡಿಗಳನ್ನು "ಕ್ಯಾಂಟೀನ್ ವ್ಯವಸ್ಥೆ"ಯ ಮೂಲಕ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಕ್ಯಾಂಟೀನ್ ವ್ಯವಸ್ಥೆಯ ಮೂಲಕ ಜನರಿಗೆ ರಿಯಾಯಿತಿ ದರದಲ್ಲಿ ಊಟ ಉಪಚಾರದ ವ್ಯವಸ್ಥೆ ಮಾಡಿದಲ್ಲಿ ಎಷ್ಟು ಹೆಚ್ಚುವರಿ ಹೊರೆ ಬೀಳಲಿದೆ ;

(ಆ) ನೆರೆ ರಾಜ್ಯವಾದ ತಮಿಳುನಾಡಿನಲ್ಲಿ ರೂ.೧–ಕ್ಕೆ ಇಡ್ಲಿ, ರೂ. ೫/–ಕ್ಕೆ ಅನ್ನ ಸಾಂಬಾರು, ರೂ.೩/–ಕ್ಕೆ ಮೊಸರನ್ನ , ಪೊಂಗಲ್ ನೀಡುವ ಮೂಲಕ ಜನ ಸಾಮಾನ್ಯರಿಗೆ ತಿಂಡಿ ಉಪಹಾರ ಒದಗಿಸುತ್ತಿದ್ದು, ಈ ಜನಪರ ಯೋಜನೆಯನ್ನು ಸರ್ಕಾರ ಪ್ರಾರಂಭಿಸಿದಲ್ಲಿ ಸಾರ್ವಜನಿಕರಿಗೆ ಸಹಾಯಕಾರಿ ಆಗುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಇ) ಎ.ಪಿ.ಎಲ್ ಕಾರ್ಡ್‌ದಾರರಿಗೆ ಕೆ.ಜಿ.ಯೊಂದಕ್ಕೆ ರೂ.೧೦/–ರಂತೆ ೧೦ ಕೆ.ಜಿ. ಅಕ್ಕಿಯನ್ನು ರಿಯಾಯಿತಿ ದರದಲ್ಲಿ ನೀಡಿದರೆ ಸರ್ಕಾರಕ್ಕೆ ಎಷ್ಟು ಹೆಚ್ಚುವರಿ ಹೊರೆ ಬೀಳಲಿದೆ :

(ಈ) ರಾಜ್ಯದಲ್ಲಿ ಒಟ್ಟು ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ದಾರರ ಸಂಖ್ಯೆ ಎಷ್ಟು ;

(ಉ) ಪ್ರಸ್ತುತ ಕೆ.ಜಿ.ಗೆ ರೂ. ೧/– ರಂತೆ ೩೦ ಕೆ.ಜಿ. ಅಕ್ಕಿಯನ್ನು



ಬಿ.ಪಿ.ಎಲ್ ಕಾರ್ಡುದಾರರಿಗೆ ನೀಡುತ್ತಿದ್ದು, ಇದನ್ನು ಉಚಿತವಾಗಿ ನೀಡಿದರೆ ಸರ್ಕಾರಕ್ಕೆ ಎಷ್ಟು ಹೆಚ್ಚುವರಿ ಹೊರೆ ಬೀಳಲಿದೆ; ಉಚಿತವಾಗಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಪ್ರತಿ ಕೆ.ಜಿ.ಅಕ್ಕಿಗೆ ಕೇಂದ್ರ ಸರ್ಕಾರ ನೀಡುತ್ತಿರುವ ಸಬ್ಸಿಡಿ ದರ ಎಷ್ಟು ?

## ಸರ್ಕಾರಿ ವಾಹನಗಳ ಮೇಲೆ ಕೆಂಪು ಲೈಟ್ ಅಳವಡಿಕೆಯ ನಿಯಮಗಳು

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೬೦ (೨೦೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ವಾಹನಗಳ ಮೇಲೆ ಕೆಂಪು ಲೈಟ್ ಅಳವಡಿಸಲು ಯಾವ ಯಾವ ಹುದ್ದೆಗಳಿಗೆ ಅರ್ಹತೆ ಇದೆ; ಕಾನೂನು ಮೀರಿ ಇಂತಹ ಲೈಟ್ ಅಳವಡಿಸಿಕೊಂಡವರ ಮೇಲೆ ಕೈಗೊಳ್ಳುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಹಸಿರು ಮತ್ತು ನೀಲಿ ಲೈಟ್ ಅಳವಡಿಸಲು ಕಾನೂನಿನಲ್ಲಿ ಅವಕಾಶ ಇದೆಯೇ; ಯಾರು ಯಾರು ಹಸಿರು ಮತ್ತು ನೀಲಿ ಲೈಟ್ ಬಳಸಿಕೊಳ್ಳಬಹುದು ;

(ಇ) ಪೊಲೀಸ್ ಇಲಾಖೆಯ ಅಧಿಕಾರಿಗಳ ವಾಹನದ ಮೇಲೆ ನೀಲಿ ಲೈಟ್ ಅಳವಡಿಸುತ್ತಿರುವುದರ ಔಚಿತ್ಯ ಏನು; ಏತಕ್ಕಾಗಿ ಅಳವಡಿಸಲಾಗಿದೆ; ಇದು ಕಾನೂನು ಬದ್ಧವೇ; ಅಲ್ಲದಿದ್ದಲ್ಲಿ, ಕೂಡಲೇ ತೆಗೆದು ಹಾಕಲು ಇಲಾಖೆ ಕ್ರಮಕೈಗೊಳ್ಳುವುದೇ ? (ವಿವರ ನೀಡುವುದು)

## ಸೈಬರ್ ಸೆಂಟರ್‌ಗಳ ಲೈಸನ್ಸ್

**ಶ್ರೀ ಐವಾನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೬೧ (೭೦೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸೈಬರ್ ಸೆಂಟರ್‌ಗಳೆಷ್ಟು; ಒಟ್ಟು ಎಷ್ಟು ಸೈಬರ್ ಸೆಂಟರ್‌ಗಳಿಗೆ ಲೈಸನ್ಸ್ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಅಪ್ರಾಪ್ತ ಹುಡುಗ–ಹುಡುಗಿಯರು ಸೈಬರ್ ಸೆಂಟರ್‌ಗಳಿಗೆ ಭೇಟಿ ನೀಡಿ, ಸೈಬರ್‌ಗಳ ಕ್ಯಾಬಿನ್ ಮುಚ್ಚಿ ವೀಕ್ಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಸೈಬರ್ ಸೆಂಟರ್‌ಗಳಿಗೆ ಪರವಾನಿಗೆಯನ್ನು ನೀಡುವಾಗ ಅನುಸರಿಸಲಾಗುತ್ತಿರುವ ಮಾನದಂಡಗಳಾವುವು ;

(ಈ) ಸೈಬರ್ ಸೆಂಟರ್‌ಗಳು ನಿಯಮ ಉಲ್ಲಂಘಿಸಿದರ ಬಗ್ಗೆ ಪೊಲೀಸ್ ಇಲಾಖೆಗಳಲ್ಲಿ ಕೇಸು ದಾಖಲಾಗಿದೆಯೇ; ಆಗಿದ್ದರೆ, ಯಾವ ಯಾವ ಠಾಣೆಯಲ್ಲಿ ಆಗಿದೆ; ಯಾವ ಉದ್ದೇಶಕ್ಕಾಗಿ ? (ಸಂಪೂರ್ಣ ವಿವರ ನೀಡುವುದು)

## ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಅವ್ಯವಹಾರ

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೨ (೭೦೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಅಕ್ರಮ ನೇಮಕಾತಿ ಮತ್ತು ಔಷಧಿ ಖರೀದಿಯಲ್ಲಿ ನಡೆಯುವ ಅವ್ಯವಹಾರಗಳ ಬಗ್ಗೆ ಕಳೆದ ೩ ವರ್ಷಗಳಲ್ಲಿ ದೂರು ದಾಖಲಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸರ್ಕಾರದ ನಿಯಮ ಉಲ್ಲಂಘಿಸಿ ಅಕ್ರಮವಾಗಿ ನೇಮಕಾತಿ ಹೊಂದಿರುವ ಮತ್ತು ಬಡ್ತಿ ಹೊಂದಿರುವ ನೌಕರರುಗಳ ವೃಂದವಾರು ಮಾಹಿತಿ ಒದಗಿಸುವುದು ;

(ಇ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಹಾಲಿ ನಿರ್ದೇಶಕರು ಸುಳ್ಳು ದಾಖಲೆಗಳನ್ನು ನೀಡಿ ನಿರ್ದೇಶಕರಾಗಿ ನೇಮಕಗೊಂಡಿರುವ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಇಲ್ಲಿಯವರೆಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು ? (ವಿವರಗಳನ್ನು ಒದಗಿಸುವುದು)

## ಮೈಸೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕಾರಿಡಾರ್‌ನ ಅಭಿವೃದ್ಧಿ

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೩ (೭೧೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ

ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಮೈಸೂರಿನಲ್ಲಿ ಮಾಹಿತಿ ತಂತ್ರಜ್ಞಾನದ ಕಾರಿಡಾರನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ; (ವಿವರಗಳನ್ನು ಒದಗಿಸುವುದು)

(ಆ) ಹಾಗಿದ್ದಲ್ಲಿ, ಮೈಸೂರಿನಲ್ಲಿ ಈಗ ಇರುವ ಸಾಫ್ಟ್‌ವೇರ್ ಕಂಪನಿಗಳ ಸಂಖ್ಯೆ ಎಷ್ಟು; ಅವು ಯಾವುವು; ಈ ಕಂಪನಿಗಳು ಎಷ್ಟು ಜನರಿಗೆ ಉದ್ಯೋಗಾವಕಾಶವನ್ನು ಕಲ್ಪಿಸಿವೆ ; (ವಿವರಗಳನ್ನು ಒದಗಿಸುವುದು)

(ಇ) ಮೈಸೂರಿನಲ್ಲಿ ಸ್ಥಾಪಿತವಾಗುವ ಮಾಹಿತಿ ತಂತ್ರಜ್ಞಾನ ಕಂಪನಿಗಳಿಗೆ ಸರ್ಕಾರ ನೀಡಿರುವ ವಿಶೇಷ ಸೌಲಭ್ಯಗಳೇನು; ಆದರೂ ಕೂಡಾ ಮೈಸೂರಿನಲ್ಲಿ ಮಾಹಿತಿ ತಂತ್ರಜ್ಞಾನ ಕಂಪನಿಗಳು ಹೆಚ್ಚಾಗಿ ಬರದಿರಲು ಕಾರಣಗಳೇನು ;

(ಈ) ಮಂಡ್ಯ ಮತ್ತು ಮೈಸೂರು ನಡುವೆ ಹೊಸದಾಗಿ ಬಂದ ಮಾಹಿತಿ ತಂತ್ರಜ್ಞಾನ ಮತ್ತು ಈ ಕ್ಷೇತ್ರಕ್ಕೆ, ಪೂರಕವಾದ ಅನ್ಸಿಲರಿ ಯೂನಿಟ್‌ಗಳಿಂದ ಕೂಡಿರುವ ಟೆಕ್ನಾಲಜಿ ಪಾರ್ಕ್ ಸ್ಥಾಪನೆಗೆ ಇರುವ ಅವಕಾಶ ಬಗ್ಗೆ ಪರಿಶೀಲನೆ ನಡೆಸಿ ಅವುಗಳನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ ?

## ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಮಂಜೂರಾಗಿರುವ ಹುದ್ದೆಗಳು



**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೪ (೭೧೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಮಂಜೂರಾಗಿರುವ ಬೋಧಕ/ಬೋಧಕೇತರ ಸಿಬ್ಬಂದಿಯ ಸಂಖ್ಯೆ ಎಷ್ಟು ; (ಹಾಲಿ ಸೇವೆ ಸಲ್ಲಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಒದಗಿಸುವುದು)

(ಆ) ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಇ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವೈದ್ಯಕೀಯ ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೊಮಾ ಅಧ್ಯಯನಕ್ಕೆ ಅವಕಾಶ ಕಲ್ಪಿಸಿಕೊಡಲಾಗುವುದೇ ; (ಮಾಹಿತಿ ನೀಡುವುದು)

(ಈ) ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಅಭ್ಯಾಸ ಮಾಡುತ್ತಿರುವ ವೈದ್ಯಕೀಯ ಪದವಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಬೋಧಕ ಸಿಬ್ಬಂದಿಯು ಕೊರತೆಯು ಸಮಸ್ಯೆಯಿಂದ ಇವರಿಗೆ ಅನಾನುಕುಲವಾಗಿರುವುದು ನಿಜವೇ; ಇದನ್ನು ಪರಿಹರಿಸಲು ಕೈಗೊಂಡಿರುವ ಕ್ರಮಗಳೇನು ?

## ಮಂಡ್ಯ ವಿಭಾಗದ ಕೆ.ಎಸ್.ಆರ್.ಟಿ.ಸಿ ಬಸ್‌ಗಳ ಸೌಲಭ್ಯ

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೫ (೭೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಮಂಡ್ಯ ವಿಭಾಗದಲ್ಲಿರುವ, ಬಸ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಹಳೆಯದಾದ ಚಾಲನೆಗೆ ಅನರ್ಹವಾದ ಬಸ್‌ಗಳ ಸಂಖ್ಯೆ ಎಷ್ಟು; ಸದರಿ ವಿಭಾಗದಲ್ಲಿರುವ ಹಳೆಯ ಬಸ್‌ಗಳನ್ನು ಬದಲಾಯಿಸಿ ಪ್ರಸಕ್ತ ವರ್ಷದಲ್ಲಿ ಹೊಸ ಎಷ್ಟು ಬಸ್‌ಗಳನ್ನು ಒದಗಿಸಲಾಗುವುದು ;

(ಆ) ಮಂಡ್ಯ ವಿಭಾಗದ ಗ್ರಾಮೀಣ ಸಾರಿಗೆ ಮಾರ್ಗಗಳು, ಅವುಗಳ ಸುತ್ತುವಳಿಗಳ ಬಗ್ಗೆ ವಿವರ ಒದಗಿಸುವುದು; ಈ ಸುತ್ತುವಳಿಗಳನ್ನು ಹೆಚ್ಚಿಸಲು ಮತ್ತು ಹೊಸ ಗ್ರಾಮೀಣ ಮಾರ್ಗಗಳಲ್ಲಿ ಜನರ ಬೇಡಿಕೆಗೆ ತಕ್ಕಂತೆ ಬಸ್‌ಗಳನ್ನು ಒದಗಿಸಲು ಸರ್ಕಾರ ಕ್ರಮ ಜರುಗಿಸಲಾಗುವುದೇ ;

(ಇ) ಮಂಡ್ಯದಲ್ಲಿ ಪ್ರತ್ಯೇಕ ನಗರ ಸಾರಿಗೆ ನಿಗಮ ಸ್ಥಾಪನೆಗೆ ಕ್ರಮ ತೆಗೆದುಕೊಳ್ಳಲಾಗುವುದೇ; ಮಂಡ್ಯ ನಗರ ಹಾಗೂ ಮಂಡ್ಯಕ್ಕೆ ಹೊಂದಿಕೊಂಡಿರುವ ಸುಮಾರು ೧೦ ಕಿ.ಮೀ ವ್ಯಾಪ್ತಿಯ ಒಳಗೆ ಬರುವ ಗ್ರಾಮಾಂತರ ಪ್ರದೇಶದ ಗ್ರಾಮಗಳಿಗೆ ನಗರ ಸಾರಿಗೆ ಬಸ್ ಸೌಲಭ್ಯವನ್ನು ಹೆಚ್ಚಾಗಿ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ;

(ಈ) ಮದ್ದೂರಿನಿಂದ ಕೊಪ್ಪ ಕೌಡ್ಲೆ ದೇವಲಾಪುರದ ಮೂಲಕ ನಾಗಮಂಗಲಕ್ಕೆ ನೇರ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಆಹಾರ ಸುರಕ್ಷತಾ ಕಾಯ್ದೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೬೬ (೭೨೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು



ದಯವಿಟ್ಟು ತಿಳಿಸುವರೆ :–

(ಅ) ಆಹಾರ ಸುರಕ್ಷತಾ ಕಾಯ್ದೆ ಎಂದಿನಿಂದ ಜಾರಿಯಲ್ಲಿದೆ ;

(ಆ) ಆಹಾರ ಸುರಕ್ಷತಾ ಕಾಯ್ದೆಯ ರೂಪುರೇಷೆಗಳೇನು ;

(ಇ) ಆಹಾರ ಸುರಕ್ಷತಾ ಕಾಯ್ದೆಯ ಜವಾಬ್ದಾರಿಗಳೇನು :

(ಈ) ಕೇಂದ್ರ ಸರ್ಕಾರ ಆಹಾರ ಸುರಕ್ಷತಾ ಕಾಯ್ದೆ ಜಾರಿಯಲ್ಲಿದ್ದರೂ ರಾಜ್ಯದಲ್ಲಿ ಈ ಕಾಯ್ದೆಯನ್ನು ಅನುಷ್ಠಾನಗೊಳಿಸುವಲ್ಲಿ ಆಗಿರುವ ವಿಳಂಬ ಹಾಗೂ ವಿಫಲತೆ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿಜ್ಞಾನ ಕೇಂದ್ರಗಳ ವಿವರ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೬೭ (೭೧೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ೨೦೧೪–೧೫ನೇ ಸಾಲಿನ ಆಯವ್ಯದಲ್ಲಿ ಮೀಸಲಿಟ್ಟ ಹಣದ ಪ್ರಮಾಣ ಎಷ್ಟು ; (ಈ ಇಲಾಖೆಯ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ವಿಜ್ಞಾನ ಕೇಂದ್ರಗಳು ಇರುವ ಜಿಲ್ಲೆಗಳು ಎಷ್ಟು ಹಾಗೂ ಇಲ್ಲದೇ ಇರುವ ಜಿಲ್ಲೆಗಳ ಸಂಖ್ಯೆ ಎಷ್ಟು ; (ಸಂಖ್ಯೆ ಹಾಗೂ ವಿವರ ನೀಡುವುದು) ;

(ಇ) ವಿಜ್ಞಾನ ಕೇಂದ್ರಗಳು ಇಲ್ಲದೇ ಇರುವ ಜಿಲ್ಲೆಗಳಲ್ಲಿ ಈ ಕೇಂದ್ರಗಳನ್ನು

ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಹಾಸ್ಟೆಲ್ ನಿರ್ವಹಣಾ ಪ್ರಾಧಿಕಾರ ರಚನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೬೮ (೭೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ;

(ಆ) ಒಂದನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ವಿವರ ನೀಡುವುದು)

(ಇ) ವಿದ್ಯಾರ್ಥಿನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯುನ್ನು ೨೦೧೨–೧೩ ರಿಂದ ಇಲ್ಲಿಯುವರೆಗೂ ನೀಡುವುದು ;

(ಈ) ಈ ವಿದ್ಯಾರ್ಥಿನಿಲಯಗಳನ್ನು ಸಮರ್ಥವಾಗಿ ನಿರ್ವಹಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ವಿದ್ಯಾರ್ಥಿನಿಲಯಗಳನ್ನು ಗುಣಾತ್ಮಕ/ಸ್ವಾಭಿಮಾನಿ



ಶಿಕ್ಷಣ ನೀಡುವುದಕ್ಕಾಗಿ ಎಲ್ಲಾ ವಿದ್ಯಾರ್ಥಿ ನಿಲಯಗಳನ್ನು ಒಳಗೊಂಡ "ಹಾಸ್ಟೆಲ್ ನಿರ್ವಹಣಾ ಪ್ರಾಧಿಕಾರ" ರಚಿಸಲು ಸರ್ಕಾರ ಚಿಂತಿಸಿದೆಯೇ ?

## ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೫೬೯ (೭೨೨) ಮಾನ್ಯ ವೈದ್ಯಕೀಯ ರಾಜ್ಯ  ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹೊಸದಾಗಿ ವೈದ್ಯಕೀಯು ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಈ ವೈದ್ಯಕೀಯ ಕಾಲೇಜುಗಳನ್ನು ಯಾವ ವರ್ಷದಿಂದ ಪ್ರಾರಂಭಗೊಳಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ ;

(ಇ) ಸದರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಯಾವ ಸ್ಥಳವನ್ನು ಗುರುತಿಸಲಾಗಿದೆ ? (ವಿವರಗಳನ್ನು ನೀಡುವುದು)

## ಅಡಿಗೆ ಅನಿಲ ಸಿಲೆಂಡರ್‌ಗಳ ವಿತರಣೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೦ (೭೨೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು

ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಡಿಗೆ ಅನಿಲ ಗ್ರಾಹಕರ ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ಬೆಂಗಳೂರು ನಗರದಲ್ಲಿ ಗ್ಯಾಸ್ ಸಂಪರ್ಕವನ್ನು ಹೊಂದಿರುವ ಗ್ರಾಹಕರ ಸಂಖ್ಯೆ ಎಷ್ಟು; ಸಿಲೆಂಡರ್‌ಗಳನ್ನು ಗ್ರಾಹಕರಿಗೆ ವಿತರಣೆ ಮಾಡುತ್ತಿರುವ ವಿತರಕರ ಸಂಖ್ಯೆ ಎಷ್ಟು ಅವು ಯಾವುವು ;

(ಇ) ಅಡುಗೆ ಬಳಕೆಗೆ ಪಡೆಯುವ ಸಿಲೆಂಡರ್‌ಗೆ ಆಧಾರ್ ಕಾರ್ಡ್ ಸಂಖ್ಯೆ ನೀಡುವುದು ಸರ್ಕಾರ ಕಡ್ಡಾಯ ಮಾಡಿದೆಯೇ ;

(ಈ) ಕಡ್ಡಾಯ ಮಾಡದಿದ್ದಲ್ಲಿ, ಹಲವು ಕಡೆಗಳಲ್ಲಿ ಗ್ಯಾಸ್ ವಿತರಕರು ಆಧಾರ್ ಕಾರ್ಡ್ ಸಂಖ್ಯೆ ಕಡ್ಡಾಯ ಎಂಬ ನೆಪ ಹೇಳಿ ಗ್ರಾಹಕರಿಗೆ ಸಿಲೆಂಡರ್ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಸರ್ಕಾರ ನಾಗರೀಕರಿಗೆ ಗ್ಯಾಸ್ ಸಿಲೆಂಡರ್‌ಗಳನ್ನು ಸಮರ್ಪಕವಾಗಿ ವಿತರಿಸಲು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಊ) ಅಡಿಗೆ ಬಳಕೆಯ ಪ್ರತಿ ಸಿಲೆಂಡರ್‌ನ ಬೆಲೆ ಎಷ್ಟು; ವಿತರಕರು ಸಿಲೆಂಡರ್ ಬೆಲೆಗಿಂತ ಹೆಚ್ಚಾಗಿ ಪಡೆಯುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಋ) ಹಾಗಿದ್ದಲ್ಲಿ, ಇಂತಹ ಏಜೆನ್ಸಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಆಯುಷ್ ಕೇಂದ್ರಗಳು ಮೇಲ್ದರ್ಜೆಗೆ



**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೧ (೭೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯ ಅಧೀನದಲ್ಲಿರುವ ಆಯುಷ್ ವಿಭಾಗವನ್ನು ಉತ್ತೇಜಿಸಲು ಸರ್ಕಾರ ಕಳೆದ ಎರಡು ವರ್ಷಗಳಿಂದ ವೆಚ್ಚ ಮಾಡಿರುವ ಮೊತ್ತವೆಷ್ಟು ;

(ಆ) ಆಯುಷ್ ವಿಭಾಗವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಯೋಜನೆ ರೂಪಿಸಿರುವುದು ನಿಜವೇ ;

(ಇ) ಗ್ರಾಮೀಣ ಭಾಗದಲ್ಲಿ ಆಯುಷ್ ಆರೋಗ್ಯ ಸೇವೆ ದೊರೆಕಿಸಿಕೊಡಲು ಸರ್ಕಾರ ನಿರ್ಧರಿಸಿದೆಯೇ ; (ವಿವರ ನೀಡುವುದು)

(ಈ) ಔಷಧಿ ಸಸ್ಯಗಳ ರಕ್ಷಣೆಯಲ್ಲಿ ನಮ್ಮ ರಾಜ್ಯಕ್ಕೆ ರಾಷ್ಟ್ರದಲ್ಲೇ ಶೋಚನೀಯ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಔಷಧಿ ಸಸ್ಯಗಳ ಸಂರಕ್ಷಣೆಗೆಂದು ಸರ್ಕಾರ ಇದುವರೆವಿಗೂ ವ್ಯಯ ಮಾಡಿರುವ ಮೊತ್ತ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಊ) ರೈತರು ಬೆಳೆಯುವ ಔಷಧೀಯ ಸಸ್ಯಗಳ ಮಾರಾಟಕ್ಕೆ ಗ್ರಾಮ ಮತ್ತು ಜಿಲ್ಲಾ ಮಟ್ಟದಲ್ಲಿ ಔಷಧೀಯ ಮೂಲಿಕೆಗಳ ಖರೀದಿ ಕೇಂದ್ರಗಳನ್ನು ಸರ್ಕಾರ ಸ್ಥಾಪಿಸಲು ಮುಂದಾಗುವುದೇ ? (ಸಂಪೂರ್ಣ ವಿವರ ನೀಡುವುದು)

## ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಕಳಪೆ ಮಟ್ಟದ ಆಹಾರ ವಿತರಣೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೨ (೭೨೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಒಟ್ಟು ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸರ್ಕಾರ ಪ್ರತಿ ತಿಂಗಳು ಖರ್ಚು ಮಾಡುತ್ತಿರುವ ಮೊತ್ತವೆಷ್ಟು; ಅವರುಗಳಿಗೆ ನೀಡುತ್ತಿರವ ಸೌಲಭ್ಯಗಳಾವುವು ;

(ಇ) ಹಾಸ್ಟೆಲ್‌ಗಳಲ್ಲಿ ತಂಗಿರುವ ವಿದ್ಯಾರ್ಥಿಗಳಿಗೆ ಸರಿಯಾದ ಮೂಲ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರತಿಯೊಬ್ಬ ವಿದ್ಯಾರ್ಥಿಗೂ ಪ್ರತಿ ತಿಂಗಳಿಗೆ ಊಟ ತಿಂಡಿಗೆಂದು ನೀಡುತ್ತಿರುವ ಮೊತ್ತ ಎಷ್ಟು ;

(ಉ) ಸದರಿ ಹಣವನ್ನು ಕೆಲವರು ದುರುಪಯೋಗ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸರಿಯಾಗಿ ಊಟ ಕೊಡದಿರುವುದು ಸರ್ಕಾರ ಗಮನಿಸಿದೆಯೇ ;



(ಊ) ಹಾಗಿದ್ದಲ್ಲಿ, ತಪ್ಪಿತಸ್ಥರು ಯಾರು; ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬಸ್ ಪ್ರಯಾಣ ದರ ಕಡಿತಗೊಳಿಸುವಿಕೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೩ (೭೨೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಕಳೆದ ಎರಡು ವರ್ಷಗಳಿಂದ ಬಂದಿರುವ ಆದಾಯ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಡೀಸೆಲ್ ದರ ಕಡಿಮೆಯಾದರೂ ಬಸ್ ಪ್ರಯಾಣ ದರದಲ್ಲಿ ಕಡಿಮೆ ಮಾಡದಿರಲು ಕಾರಣಗಳೇನು ;

(ಇ) ಈಗಿರುವ ಪ್ರಯಾಣ ದರದಿಂದ ನಾಗರೀಕರಿಗೆ ಹೊರೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಪ್ರಯಾಣ ದರವನ್ನು ಕಡಿಮೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅನ್ನಭಾಗ್ಯ ಯೋಜನೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೪ (೭೨೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು

ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಅನ್ನಭಾಗ್ಯ ಯೋಜನೆಯಡಿ ಸರ್ಕಾರ ಖರ್ಚು ಮಾಡಿರುವ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅರ್ಹ ಫಲಾನುಭವಿಗಳಿಗೆ ಈ ಯೋಜನೆ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಕಡುಬಡವ ಕುಟುಂಬಗಳು ಈ ಯೋಜನೆಯಿಂದ ದೂರ ಉಳಿದಿವೆ ;

(ಈ) ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರ ಜಾರಿ ಮಾಡಿರುವ ಜನಪರ ಭಾಗ್ಯ ಯೋಜನೆಗಳ ವಿವರ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೫ (೭೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದ ಇದುವರೆವಿಗೂ ಜಾರಿ ಮಾಡಿರುವ "ಭಾಗ್ಯ" ಯೋಜನೆಗಳ ಪೂರ್ಣ ವಿವರ ಒದಗಿಸುವುದು ;

(ಆ) ಅಂತಹ ಯೋಜನೆಗಳಿಗೆ ಸರ್ಕಾರ ವೆಚ್ಚ ಮಾಡಿರುವ ಹಣದ ಮೊತ್ತವೇನು; ಫಲಾನುಭವಿಗಳ ಸಂಖ್ಯೆ ಎಷ್ಟು ? (ಯೋಜನಾವಾರು ಫಲಾನುಭವಿಗಳ ವಿವರ ಒದಗಿಸುವುದು)

## ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ನಡೆಯುತ್ತಿರುವ ಲೈಂಗಿಕ ದೌರ್ಜನ್ಯ



**ಶ್ರೀ ಗಣೇಶ್ ಕಾರ್ಣಿಕ್ ( ಶಿಕ್ಷಕರ ಕ್ಷೇತ್ರ ) :–**

೫೭೬ (೭೩೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯುವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ನಡೆಯುತ್ತಿರುವ ಲೈಂಗಿಕ ದೌರ್ಜನ್ಯದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೩ ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ನಡೆದಿವೆ ; (ವಿವರ ನೀಡುವುದು) ;

(ಇ) ಇಂತಹ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಹೊರ ಗುತ್ತಿಗೆ ಮೇಲೆ ನೇಮಕವಾಗಿರುವ ಸಿಬ್ಬಂದಿಗಳ ವೇತನ

**ಶ್ರೀ ಗಣೇಶ್ ಕಾರ್ಣಿಕ್ ( ಶಿಕ್ಷಕರ ಕ್ಷೇತ್ರ ) :–**

೫೭೭ (೭೩೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯುವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಿವಿಧ ವಿದ್ಯಾರ್ಥಿನಿಲಯುಗಳಲ್ಲಿ ಹೊರಗುತ್ತಿಗೆ ಏಜೆನ್ಸಿಗಳಿಂದ ನಿಯೋಜಿಸಿಕೊಂಡಿರುವ ಸಿಬ್ಬಂದಿಗಳಿಗೆ, ಏಜೆನ್ಸಿಯವರು ಸಿಬ್ಬಂದಿಗಳ ಬ್ಯಾಂಕ್ ಖಾತೆಗಳಿಗೆ ವೇತನ ಜಮಾ ಮಾಡದೇ ಸರ್ಕಾರದಿಂದ ನೀಡುವ ಮೊತ್ತದಲ್ಲಿ ಕಡಿತಗೊಳಿಸಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೆಲವು ಜಿಲ್ಲೆಗಳಲ್ಲಿ ಸುಮಾರು ೫–೬ ವರ್ಷಗಳಿಂದ ಒಂದೇ ಸಂಸ್ಥೆಗೆ ಹೊರ ಗುತ್ತಿಗೆ ಟೆಂಡರ್ ನೀಡಲಾಗುತ್ತಿದ್ದು, ಪಾರದರ್ಶಕ ನಿಯಮ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆ ಕಾಪಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮ

**ಶ್ರೀ ಗಣೇಶ್ ಕಾರ್ಣಿಕ್ ( ಶಿಕ್ಷಕರ ಕ್ಷೇತ್ರ ) :–**

೫೭೮ (೭೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆ ಕಾಪಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ;

(ಆ) ಆಸ್ಪತ್ರೆಗಳ ಸ್ವಚ್ಛತೆಗಾಗಿ ನೇಮಕ ಮಾಡಿರುವ ಹೊರ ಸಂಪನ್ಮೂಲ ಏಜೆನ್ಸಿಗಳು ಸರಿಯಾಗಿ ಕರ್ತವ್ಯ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಗಳೂರು ಕೋಣಾಜೆಯಲ್ಲಿರುವ ಮಾಹಿತಿ ತಂತ್ರಜ್ಞಾನ

**ಶ್ರೀ ಗಣೇಶ್ ಕಾರ್ಣಿಕ್ ( ಶಿಕ್ಷಕರ ಕ್ಷೇತ್ರ ) :–**



೫೭೯ (೭೩೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಕೋಣಾಜೆಯಲ್ಲಿರುವ ಮಾಹಿತಿ ತಂತ್ರಜ್ಞಾನ ವಿಶೇಷ ಆರ್ಥಿಕ ವಲಯ ಯಾವಾಗ ಪ್ರಾರಂಭವಾಯಿತು ; ಇದಕ್ಕಾಗಿ ಎಷ್ಟು ಎಕರೆ ಭೂಸ್ವಾಧೀನ ಮಾಡಲಾಗಿದೆ; ಸದರಿ ಭೂಮಿಯನ್ನು ಯಾವ ಯಾವ ಸಂಸ್ಥೆಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಆ) ಭೂಮಿಯನ್ನು ಪಡೆದುಕೊಂಡಿರುವ ಎಷ್ಟು ಸಂಸ್ಥೆಗಳು ಕಾರ್ಯಾರಂಭ ಮಾಡಿವೆ; (ವಿವರ ನೀಡುವುದು)

(ಇ) ಭೂಮಿಯನ್ನು ಪಡೆದುಕೊಂಡಿರುವ ಸಂಸ್ಥೆಗಳು ಕಾರ್ಯ ಪ್ರಾರಂಭಿಸಿಲ್ಲದಿದ್ದಲ್ಲಿ ವಿತರಣೆಯಾದ ಭೂಮಿಯನ್ನು ಹಿಂಪಡೆಯಲಾಗಿದೆಯೇ; ಇಲ್ಲವಾದಲ್ಲಿ ಸದರಿ ಹಂಚಿಕೆ ಮಾಡಿದ ಭೂಮಿಯನ್ನು ಸದರಿ ಸಂಸ್ಥೆಗಳು ಯಾವ ಕೆಲಸಕ್ಕಾಗಿ ಉಪಯೋಗಿಸುತ್ತಿವೆ ? (ವಿವರ ನೀಡುವುದು)

## ರಾಜ್ಯದಲ್ಲಿ ವಿವಿಧ ಸಾಂಕ್ರಾಮಿಕ ಮಾರಕ ರೋಗಗಳು

**ಶ್ರೀ ಗಣೇಶ್ ಕಾರ್ಣಿಕ್ ( ಶಿಕ್ಷಕರ ಕ್ಷೇತ್ರ ) :–**

೫೮೦ (೭೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್–೧,ಎನ್–೧, ಡೆಂಗ್ಯೂ, ಎಬೋಲೋದಂತಹ ಸಾಂಕ್ರಾಮಿಕ ಮಾರಕ ರೋಗಗಳಿಗೆ ತುತ್ತಾಗಿರುವ ರೋಗಿಗಳ ಸಂಖ್ಯೆ ಎಷ್ಟು ;

(ಆ) ಈ ಮಾರಕ ರೋಗಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ವೈದ್ಯಕೀಯ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೮೧ (೭೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಕೊಂಚಾವರಂ ತಾಂಡಾದ ಕುಟುಂಬಗಳಿಗೆ ವೈದ್ಯಕೀಯ ಸೇವೆ ಮತ್ತು ಸೌಲಭ್ಯ ಕಲ್ಪಿಸಲು ಸೂಕ್ತ ಆರೋಗ್ಯ ಕೇಂದ್ರವಿದೆಯೇ ;

(ಆ) ಸದರಿ ತಾಂಡಾದಲ್ಲಿ ಕಳೆದ ಒಂದು ವರ್ಷದಿಂದ ಎಷ್ಟು ಶಿಶುಗಳು ಜನಿಸಿವೆ ; ಅವುಗಳಲ್ಲಿ ಎಷ್ಟು ಶಿಶುಗಳು ಆಸ್ಪತ್ರೆಯಲ್ಲಿ ಜನಿಸಿವೆ; ಎಷ್ಟು ಶಿಶುಗಳು ಮನೆಯಲ್ಲಿ ಜನಿಸಿವೆ ; ಅವುಗಳಲ್ಲಿ ಹೆಣ್ಣು ಮತ್ತು ಗಂಡು ಎಷ್ಟು ;

(ಇ) ಎಷ್ಟು ಶಿಶುಗಳು ಜನಿಸುವ ಸಮಯದಲ್ಲಿ ಅಥವಾ ಶಿಶುವಾಗಿರುವಾಗಲೆ ಮರಣ ಹೊಂದಿವೆ ; ವಿವರ ನೀಡುವುದು ; ಅವುಗಳಲ್ಲಿ ಹೆಣ್ಣು ಮತ್ತು ಗಂಡು ಎಷ್ಟು ?

## ಚಿನ್ನಾಭರಣಗಳ ಶುದ್ಧತೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೮೨ (೭೩೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿನ್ನದ ಆಭರಣಗಳ ಶುದ್ಧತೆಯ ಬಗ್ಗೆ ಗ್ರಾಹಕರಿಗೆ ತಿಳಿಯುವಂತೆ ಸರ್ಕಾರದಿಂದ ಪ್ರತಿ ಆಭರಣಕ್ಕೆ ಹಾಲ್ ಮಾರ್ಕ್ ಎನ್ನುವ ಗುಣಮಟ್ಟದ ಗುರುತು ಹಾಕುತ್ತಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಹಾಲ್ ಮಾರ್ಕ್ ಗುರುತು ಏನೇನು ಒಳಗೊಂಡಿರುತ್ತದೆ ;



(ಇ) ಇತ್ತೀಚೆಗೆ ನಕಲಿ ಹಾಲ್ ಮಾರ್ಕ್ ಗುರುತು ಹಾಕಿ ಆಭರಣಗಳನ್ನು ಶುದ್ಧವೆಂದು ನಂಬಿಸಿ ಗ್ರಾಹಕರನ್ನು ವಂಚಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ ಇದನ್ನು ತಡೆಗಟ್ಟಲು ಏನು ಕ್ರಮ ಕೈಗೊಳ್ಳಲಾಗಿದೆ ?

## ಹಾಸ್ಟೆಲ್ ವಿದ್ಯಾರ್ಥಿಗಳ ಪ್ರತಿಭಟನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೮೩ (೭೩೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಸ್ಟೆಲ್ ವಿದ್ಯಾರ್ಥಿಗಳು ರಾಜ್ಯಾದ್ಯಂತ ಇತ್ತೀಚೆಗೆ ಪ್ರತಿಭಟನೆ ನಡೆಸಿರುವುದು ನಿಜವೇ ; ಅವರುಗಳ ಬೇಡಿಕೆಗಳೇನು ;

(ಆ) ಸರ್ಕಾರಿ ಹಾಸ್ಟೆಲ್ ವಿದ್ಯಾರ್ಥಿಗಳ ಮಾಸಿಕ ಭತ್ಯೆಯನ್ನು ಹೆಚ್ಚಿಸಬೇಕೆನ್ನುವ ಬೇಡಿಕೆ ಇರುವುದು ನಿಜವೇ ; ಪ್ರಸ್ತುತ ಎಷ್ಟು ಭತ್ಯೆ ನೀಡಲಾಗುತ್ತಿದೆ ;

(ಇ) ಸದರಿ ಭತ್ಯೆಯನ್ನು ಹೆಚ್ಚಿಸಲು ಸರ್ಕಾರ ಮುಂದಾಗುವುದೆ ?

## ನಗದು ರಹಿತ ಚಿಕಿತ್ಸಾ ಸೌಲಭ್ಯ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೮೪ (೭೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರಿಗೆ ನಗದು ರಹಿತ ಚಿಕಿತ್ಸಾ ಸೌಲಭ್ಯವಾದ "ಜ್ಯೋತಿ ಸಂಜೀವಿನಿ" ಯೋಜನೆ ಜಾರಿಯಾಗಿದೆಯೇ ;

(ಆ) ಈ ಯೋಜನೆಯ ರೂಪುರೇಷೆಗಳೇನು ; ಈ ಯೋಜನೆ ಯಾವ ರೀತಿಯ ನೌಕರರಿಗೆ ಅನ್ವಯಿಸುತ್ತದೆ ;

(ಇ) ಸರ್ಕಾರಿ ಸ್ವಾಯುತ್ತ ಸಂಸ್ಥೆಗಳ ಖಾಯಂ ನೌಕರರಿಗೂ ಇದು ಅನ್ವಯಿಸುವುದೇ ; ಇಲ್ಲವಾದಲ್ಲಿ ಕಾರಣಗಳೇನು ;

(ಈ) ಹೆಚ್.ಆರ್.ಎಂ.ಎಸ್. ಅಡಿಯಲ್ಲಿ ನೋಂದಣಿಯಾಗದ ನೌಕರರಿಗೂ ಈ ಯೋಜನೆಯ ಪ್ರಯೋಜನ ಪಡೆಯುವಂತೆ ಅನುವು ಮಾಡಿಕೊಡಲು ಇರುವ ಅಡ್ಡಿಗಳೇನು ?

## ಮೊರಾರ್ಜಿ ಶಾಲಾ ಶಿಕ್ಷಕರ ನೇಮಕ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೮೫ (೭೩೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೊರಾರ್ಜಿ ಶಾಲೆಗಳ ಶಿಕ್ಷಕರ ನೇಮಕಾತಿಗೆ ಮುಂದಾಗಿರುವುದು ನಿಜವೇ ; (ವಿವರ ನೀಡುವುದು)

(ಆ) ಈ ಶಿಕ್ಷಕರ ಹುದ್ದೆಗೆ ಅರ್ಜಿ ಸಲ್ಲಿಸಲು ಬೇಕಾದ ವಿದ್ಯಾರ್ಹತೆಯೇನು ;

(ಇ) ಬಿ.ಎ. ಪದವಿಯಲ್ಲಿ ಶಿಕ್ಷಣವನ್ನು ಐಚ್ಛಿಕ ವಿಷಯವಾಗಿ ಆಯ್ಕೆ ಮಾಡಿಕೊಂಡ ಪದವೀಧರರಿಗೆ ಅರ್ಜಿ ಸಲ್ಲಿಸಲು ಅವಕಾಶವಿದೆಯೇ ;

(ಈ) ಇಲ್ಲವಾದಲ್ಲಿ ಕಾರಣಗಳೇನು ?

## ರಾಜ್ಯದಲ್ಲಿರುವ ಮೆಡಿಕಲ್ ಕಾಲೇಜು ಶಿಕ್ಷಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**



೫೮೬ (೭೪೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಮೆಡಿಕಲ್ ಕಾಲೇಜುಗಳ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ಇವೆ ಮತ್ತು ಯಾವುವು ;

(ಆ) ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವೈದ್ಯರ ಕೊರತೆ ನೀಗಿಸಲು ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ಕನಿಷ್ಠ ಇಪ್ಪತ್ತು ಸೀಟುಗಳನ್ನು ಉಚಿತ ವಿದ್ಯಾಭ್ಯಾಸ ಮಾಡಿಸಲು ಸರ್ಕಾರ ಯೋಚಿಸಿರುವುದೇ ;

(ಈ) ಹಾಗಿದ್ದಲ್ಲಿ, ವಿದ್ಯಾಭ್ಯಾಸ ಮುಗಿದ ನಂತರ ಈ ವೈದ್ಯರನ್ನು ನಮ್ಮ ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ತೊಡಗಿಸಿದರೆ ವೈದ್ಯರ ಕೊರತೆ ನೀಗಬಹುದೇ?

## ವಿದ್ಯಾಸಿರಿ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೮೭ (೭೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ಹಾಸ್ಟೆಲ್‌ಗಳಲ್ಲಿ ಪ್ರವೇಶ ಸಿಗದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ರೂ.೧೫೦೦/– ವಿದ್ಯಾರ್ಥಿ ವೇತನವನ್ನು ನೀಡಲು "ವಿದ್ಯಾಸಿರಿ" ಎಂಬ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಈ ಯೋಜನೆಗೆ ಬಜೆಟ್‌ನಲ್ಲಿ ಎಷ್ಟು ಹಣವನ್ನು ನಿಗದಿಪಡಿಸಿದೆ; ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಇ) ಈ ಯೋಜನೆಗೆ ರಾಜ್ಯಾದ್ಯಂತ ಬಂದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯ ಅಡಿಯಲ್ಲಿ ಇಲ್ಲಿಯವರೆಗೆ ವಿವಿಧ ಜಿಲ್ಲೆಗಳ ಎಷ್ಟು ಜನ ವಿದ್ಯಾರ್ಥಿಗಳಿಗೆ ಎಷ್ಟು ಹಣವನ್ನು ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಈ ಯೋಜನೆಯ ಲಾಭವನ್ನು ಎಷ್ಟು ಜನ ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿದ್ದಾರೆ ; ಉಳಿದಿರುವ ಅರ್ಜಿಗಳೆಷ್ಟು ;

(ಊ) ಬಂದಂತಹ ಎಲ್ಲಾ ಅರ್ಜಿಗಳಿಗೂ ಮುಂದಿನ ಆಯವ್ಯಯದಲ್ಲಿ ಹಣ ಒದಗಿಸಲಾಗುವುದೆ?

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೮೮ (೭೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಯಾವ್ಯಾವ ಆಸ್ಪತ್ರೆಗಳಲ್ಲಿ ಯಾವ್ಯಾವ ವೈದ್ಯರ ಹುದ್ದೆ ಖಾಲಿ ಇದೆ ; (ವಿವರ ನೀಡುವುದು)



(ಇ) ಖಾಲಿ ಇರುವ ವೈದ್ಯರನ್ನು ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು;

(ಈ) ಜಿಲ್ಲಾಧಿಕಾರಿಗಳ ಮೂಲಕ ಭರ್ತಿ ಮಾಡುತ್ತಿರುವುದು ನಿಜವೇ; ಅನುಸರಿಸಲಾಗುತ್ತಿರುವ ಮಾನದಂಡ ಏನು ? (ವಿವರ ನೀಡುವುದು)

## ನೇಕಾರರ ಮಕ್ಕಳಿಗೆ ಉದ್ಯೋಗ ಒದಗಿಸುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೮೯ (೭೪೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೇಕಾರಿಕೆ ಉದ್ಯಮ ಮಾಡುತ್ತಿರುವ ಬಡ ನೇಕಾರರ ಮಕ್ಕಳು ವಿದ್ಯಾಭ್ಯಾಸ ಮಾಡಿ ಉದ್ಯೋಗ ಸಿಗದೆ ನಿರಾಸೆಯಾಗಿ ಬೇರೆ ರಾಜ್ಯಕ್ಕೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನಿರುದ್ಯೋಗಿಯಾಗಿರುವ ನೇಕಾರರ ಮಕ್ಕಳಿಗೆ ಈ ಇಲಾಖೆಯಲ್ಲಿರುವ ಉದ್ಯಮಗಳಲ್ಲಿ ವಿದ್ಯಾರ್ಹತೆಗೆ ತಕ್ಕಂತೆ ಉದ್ಯೋಗ ನೀಡಲು ಸರ್ಕಾರ ಮುಂದಾಗುವುದೆ ;

(ಇ) ಹಾಗಿದ್ದಲ್ಲಿ, ಯಾರನ್ನು ಸಂಪರ್ಕ ಮಾಡಬೇಕು ? (ವಿವರ ನೀಡುವುದು)

## ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಬೋಧಕರ ಸಕ್ರಮಾತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೯೦ (೭೫೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಬೋಧಕರನ್ನು ಖಾಯಂಮಾತಿ ಮಾಡಿಕೊಳ್ಳುವಂತೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶ ನೀಡಿದೆಯೇ ;

(ಆ) ಹಾಗಾದರೆ ಎಷ್ಟು ಮಂದಿ ಬೋಧಕರಿಗೆ ಈ ತೀರ್ಪು ಅನ್ವಯವಾಗುತ್ತದೆ (ವಿಷಯವಾರು ಮಾಹಿತಿ ನೀಡುವುದು) ;

(ಇ) ಸದರಿ ಬೋಧಕರ ಸಕ್ರಮಾತಿಗೆ ನಿಗದಿಪಡಿಸಲಾದ ಮಾನದಂಡಗಳೇನು ;

(ಈ) ಸಕ್ರಮಾತಿ ಸಂಬಂಧ ಶೈಕ್ಷಣಿಕ ಸಾಲುಗಳನ್ನು ನಿಗದಿಪಡಿಸುವಲ್ಲಿ ನಿಯಮಗಳ ಉಲ್ಲಂಘನೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸಕ್ರಮಾತಿಗೊಳಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಸಕ್ರಮಗೊಳಿಸಲಾಗುವುದು ?

## ಟಿ.ಎ.ಪಿ.ಸಿ.ಎಂ.ಎಸ್. ಪಡಿತರ ಆಹಾರ ಧಾನ್ಯದ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**



೫೯೧ (೭೫೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘಗಳಲ್ಲಿ (ಟಿ.ಎ.ಪಿ.ಸಿ.ಎಂ.ಎಸ್.) ಪಡಿತರ ಆಹಾರ ಧಾನ್ಯಗಳ ಎತ್ತುವಳಿ ಹಾಗೂ ಹಂಚಿಕೆಯನ್ನು ಮಾಡಲಾಗುತ್ತಿದೆ ;

(ಆ) ಸದರಿ ಸಂಘಗಳಿಗೆ ಸಕ್ಕರೆ ಎತ್ತುವಳಿ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡಬೇಕಾಗಿರುವ ಬಾಕಿ ಮೊತ್ತ ಎಷ್ಟು ;

(ಇ) ಯಾವ ಅವಧಿಯಿಂದ ಬಾಕಿ ಮೊತ್ತ ನೀಡಬೇಕಾಗಿದೆ ;

(ಈ) ಬಾಕಿ ಮೊತ್ತ ಪಾವತಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತ ಪಾವತಿಸಲಾಗುವುದು ?

## ಮೈಸೂರು ಮೆಡಿಕಲ್ ಕಾಲೇಜಿನಲ್ಲಿ ಉತ್ತರ ಪತ್ರಿಕೆ ಅದಲು–ಬದಲು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೯೨ (೭೫೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಪರೀಕ್ಷಾ ಕೇಂದ್ರದಲ್ಲಿ ಕಳೆದ ಮೇ ಮತ್ತು ಜೂನ್‌ನಲ್ಲಿ ನಡೆದ ವೈದ್ಯಕೀಯ ಪಿ.ಜಿ. ಕೋರ್ಸ್ (ಸ್ನಾತಕೋತ್ತರ) ಪರೀಕ್ಷೆಯಲ್ಲಿ ಉತ್ತರ ಪತ್ರಿಕೆಗಳನ್ನು ಅದಲು ಬದಲು ಮಾಡಿ, ಹೆಚ್ಚುವರಿ ಶೀಟ್‌ಗಳನ್ನು ಸೇರಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸ್

ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಈ ಪ್ರಕರಣದಲ್ಲಿ ಎಷ್ಟು ಮಂದಿ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳು ಅದಲು ಬದಲಾಗಿವೆ ;

(ಇ) ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಇಲಾಖೆಯ ಸಿಬ್ಬಂದಿಗಳು ಯಾರು ; ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ;

(ಈ) ಇದೇ ರೀತಿ ರಾಜ್ಯದ ಬೇರೆ ಯಾವುದೇ ಕಾಲೇಜುಗಳಲ್ಲಿ ಇಂತಹ ಪ್ರಕರಣಗಳು ನಡೆದಿದೆಯೆ (ವಿವರ ನೀಡುವುದು) ?

## ವಸತಿ ಶಾಲೆಗಳಲ್ಲಿನ ದಾಖಲಾತಿ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೪೩ (೭೫೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿನ ಮೂರಾರ್ಜಿ ವಸತಿ ಶಾಲೆ, ರಾಣಿ ಚೆನ್ನಮ್ಮ ವಸತಿ ಶಾಲೆ, ಇನ್ನಿತರೆ ವಸತಿ ಶಾಲೆಗಳಲ್ಲಿ ದಾಖಲಾತಿ ಮಾಡುವುದಕ್ಕೆ ವಿವಿಧ ವರ್ಗಗಳಿಗೆ ನಿಗದಿಪಡಿಸಿರುವ ಮೀಸಲಾತಿಯೆಷ್ಟು (ವಿವರ ನೀಡುವುದು) ;

(ಆ) ಕಳೆದ ಮೂರು ವರ್ಷಗಳಿಂದ ನಿಗಧಿಪಡಿಸಿರುವ ಮೀಸಲಾತಿಯಂತೆ ದಾಖಲಾತಿ ಆಗಿದೆಯೇ (ವಿವರ ನೀಡುವುದು);

(ಇ) ಇಲ್ಲದಿದ್ದಲ್ಲಿ, ದಾಖಲಾತಿ ಮಾಡಿಕೊಳ್ಳಲು ಅನುಸರಿಸುತ್ತಿರುವ ಮಾರ್ಗದರ್ಶಿ ಸೂತ್ರಗಳೇನು (ವಿವರ ನೀಡುವುದು) ?



## ಶಿವಮೊಗ್ಗದಲ್ಲಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೪೪ (೭೫೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗದಲ್ಲಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಆರಂಭಗೊಂಡಿದ್ದು ಯಾವಾಗ ; ಇದುವರೆವಿಗೂ ಮಂಜೂರಾದ ಹಣ ಎಷ್ಟು (ವಿವರ ನೀಡುವುದು) ;

(ಆ) ಮಂಜೂರಾದ ಹಣದಲ್ಲಿ ಯಾವ ಯಾವ ಕಾಮಗಾರಿಗಳಿಗೆ ಹಣವನ್ನು ವ್ಯಯಿಸಲಾಗಿದೆ (ವಿವರ ನೀಡುವುದು) ;

(ಇ) ಸದರಿ ಮಹಾವಿದ್ಯಾಲಯಕ್ಕೆ ೨೦೧೨–೧೩ ಮತ್ತು ೨೦೧೩–೧೪ನೇ ಸಾಲಿಗೆ ಎಷ್ಟು ಮೊತ್ತಕ್ಕೆ ಪೀಠೋಪಕರಣಗಳನ್ನು ಖರೀದಿಸಲಾಗಿರುತ್ತದೆ ; ಖರೀದಿ ನಿಯಮಗಳನ್ನು ಪಾಲಿಸಲಾಗಿದೆಯೇ ; ಗುಣಮಟ್ಟದ ಪರೀಕ್ಷೆಯನ್ನು ನಡೆಸಲಾಗಿದೆಯೇ ; ಖರೀದಿಗೂ, ದಾಸ್ತಾನಿಗೂ ತಾಳೆಯಾಗುತ್ತಿದೆಯೇ (ವಿವರ ನೀಡುವುದು) ;

(ಈ) ಈ ವಿಚಾರದಲ್ಲಿ ಸಮಗ್ರ ಪರಿಶೀಲನೆಯನ್ನು ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ?

## ಮೆಕ್ಕೆಜೋಳ ಬೆಳೆದ ರೈತರಿಗೆ ಯೋಗ್ಯ ಬೆಲೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೯೫ (೭೬೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವಿನ ಸಂಘರ್ಷದಲ್ಲಿ ಮೆಕ್ಕೆಜೋಳ ಬೆಳೆದ ರೈತರಿಗೆ ಯೋಗ್ಯ ಬೆಲೆ ಸಿಗದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಸರ್ಕಾರ ಪಡಿತರ ವ್ಯವಸ್ಥೆ ಅಡಿಯಲ್ಲಿ ಮೆಕ್ಕೆಜೋಳ ಬಳಕೆ ಮಾಡುವುದಾದರೆ ಮಾತ್ರ ಪ್ರತಿ ಕ್ವಿಂಟಾಲ್‌ಗೆ ರೂ. ೧೩೧೦/–ರ ದರ ನೀಡುವುದಾಗಿ ಪಟ್ಟು ಹಿಡಿದ ಸಂಗತಿ ನಿಜವೇ ;

(ಇ) ಕರ್ನಾಟಕ ರಾಜ್ಯದಲ್ಲಿ ಮೊದಲಿನಿಂದಲೂ ಮೆಕ್ಕೆಜೋಳವನ್ನು ಪಡಿತರ ವ್ಯವಸ್ಥೆ ಅಡಿಯಲ್ಲಿ ಬಳಕೆ ಮಾಡುವ ವ್ಯವಸ್ಥೆ ಇಲ್ಲದೇ ಇರುವುದರಿಂದ ಪಡಿತರ ವ್ಯವಸ್ಥೆ ಅಡಿಯಲ್ಲಿ ಮೆಕ್ಕೆಜೋಳ ಬಳಕೆಯನ್ನು ಅನುಷ್ಠಾನಕ್ಕೆ ತರಲು ಸಾಧ್ಯವಿಲ್ಲವೆಂಬ ಸಂಗತಿಯನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರಲಾಗಿದೆಯೆ ;

(ಈ) ಮೆಕ್ಕೆಜೋಳಕ್ಕೆ ಯೋಗ್ಯ ಬೆಲೆ ನೀಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲು ರಾಜ್ಯ ಸರ್ಕಾರದಿಂದ ಒಂದು ನಿಯೋಗವನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಕರ್ನಾಟಕದಲ್ಲಿ ಮೆಕ್ಕೆಜೋಳದ ಬೆಲೆ ಕಡಿಮೆ ಇರುವುದರಿಂದ ಕರ್ನಾಟಕ ಮೆಕ್ಕೆಜೋಳವನ್ನು ಮಹಾರಾಷ್ಟ್ರದ ಸಾಂಗ್ಲಿ ಹಾಗೂ ಕೊಲ್ಲಾಪುರಕ್ಕೆ ಹೋಗಿ ಪ್ರತಿ ಕ್ವಿಂಟಾಲ್‌ಗೆ ರೂ.೧೩೫೦/–ರಂತೆ



ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಇಲ್ಲಿಯೂ ಸಹ ಸರ್ಕಾರದವರು ಮೆಕ್ಕೆಜೋಳಕ್ಕೆ ಕ್ವಿಂಟಲ್‌ಗೆ ರೂ.೧೩೫೦/–ರಂತೆ ಖರೀದಿ ಮಾಡಲು ಕ್ರಮ ಕೈಗೊಳ್ಳುವರೇ?

## ಡಾ॥ ಸ.ಜ. ನಾಗಲೋತಿಮಠ ವಿಜ್ಞಾನ ಕೇಂದ್ರಕ್ಕೆ ಹೆಚ್ಚಿನ ಸಹಾಯ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೯೬ (೭೬೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಚಾಲಿತ ಡಾ. ಸ.ಜ. ನಾಗಲೋತಿಮಠ ವಿಜ್ಞಾನ ಕೇಂದ್ರಕ್ಕೆ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ಯಾವ ಯಾವ ಸಹಾಯ ಮಾಡಲಾಗುತ್ತಿದೆ ;

(ಆ) ಈ ಸಂಸ್ಥೆ ಎಷ್ಟು ವರ್ಷಗಳಿಂದ ನಡೆಯುತ್ತಿದೆ; ಹಾಗೂ ಯಾವ ಕಾಯಿದೆ ಕೆಳಗೆ ನೋಂದಣಿ ಆಗಿರುತ್ತದೆ ;

(ಇ) ಈ ಸಂಸ್ಥೆಯಿಂದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ಯಾವ ರೀತಿಯಿಂದ ಸಹಾಯವಾಗುತ್ತಿದೆ ;

(ಈ) ಈ ಸಂಸ್ಥೆಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಕೂಡಲೇ ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು

ಒದಗಿಸಲಾಗುವುದೇ ?

## ಪಡಿತರ ಚೀಟಿಗಳನ್ನು ವಿತರಿಸುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತದಿಂದ ಚುನಾಯಿತರಾದವರು) :–**

೫೯೭ (೭೬೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಹೊಸದಾಗಿ ಪಡಿತರ ಕಾರ್ಡುಗಳಿಗಾಗಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಪೈಕಿ ವಿತರಿಸಲಾಗಿರುವ ಕಾರ್ಡ್‌ಗಳ ಸಂಖ್ಯೆ ಎಷ್ಟು ; ವಿತರಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಯಾವ ಕಾಲಮಿತಿಯೊಳಗೆ ವಿತರಿಸಲಾಗುವುದು ;

(ಇ) ಅರ್ಹರಲ್ಲದ ಕಾರ್ಡುದಾರರ ಸಂಖ್ಯೆ ಎಷ್ಟು ; ಅರ್ಹರಲ್ಲದ ಎಷ್ಟು ಕಾರ್ಡ್‌ಗಳನ್ನು ರದ್ದು ಪಡಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಸೊಗಲ (ಕಾರಿಮನಿ) ಯಲ್ಲಿ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತದಿಂದ ಚುನಾಯಿತರಾದವರು) :–**



೫೯೮ (೭೬೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸೊಗಲ (ಕಾರಿಮನಿ)ದಲ್ಲಿ ಹೈಸ್ಕೂಲ್ ವಿದ್ಯಾರ್ಥಿಗಳಿಗಾಗಿ ಬಿ.ಸಿ.ಎಮ್. ಮೆಟ್ರಿಕ್ ಪೂರ್ವ ಹಾಸ್ಟೆಲ್ ಇಲ್ಲದೆ ಇರುವುದರಿಂದ, ಸೊಗಲ, ಕಾರಿಮನಿ, ದುಂಡನಕೊಪ್ಪ, ಮಲ್ಲೂರು ಹಾಗೂ ಸೋಮಾಪುರ ಗ್ರಾಮದ ಬಡ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿ ಮೆಟ್ರಿಕ್ ಪೂರ್ವ ಬಾಲಕರ ಹಾಸ್ಟೆಲ್ ಪ್ರಾರಂಭಿಸಲು ಎಲ್ಲಾ ಮೂಲಭೂತ ಸೌಕರ್ಯಗಳು ಇದ್ದು, ಮುಂದಿನ ವರ್ಷದಿಂದ ಹಾಸ್ಟೆಲ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಕೊಡುವ ಆರೋಗ್ಯ ಸವಲತ್ತುಗಳನ್ನು ಎ.ಪಿ.ಎಲ್. ಕಾರ್ಡ್‌ದಾರರಿಗೂ ವಿಸ್ತರಿಸುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತದಿಂದ ಚುನಾಯಿತರಾದವರು) :–**

೫೯೯ (೭೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಲ್ ಕಾರ್ಡ್ ಹೊಂದಿರುವವರು ಸಹ ಬಡವರು ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಕೊಡುವ ಆರೋಗ್ಯ ಭಾಗ್ಯದ ಸೌಲಭ್ಯಗಳನ್ನು ಎ.ಪಿ.ಎಲ್ ಕಾರ್ಡ್‌ದಾರರಿಗೂ ಸಹ ವಿಸ್ತರಿಸಲಾಗುವುದೇ ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಯಾವ ಯಾವ ಸವಲತ್ತುಗಳನ್ನು ಕೊಡಲಾಗುತ್ತಿದೆ ; (ವಿವರ ನೀಡುವುದು) ಸರ್ಕಾರಿ ಆಸ್ಪತ್ರೆಗಳಲ್ಲಿ ಎ.ಪಿ.ಎಲ್ ಕಾರ್ಡ್‌ದಾರರಿಗೆ ಯಾವ ಸವಲತ್ತುಗಳನ್ನು ಕೊಡಲಾಗುತ್ತಿದೆ ? (ವಿವರ ನೀಡುವುದು)

## ಚಳ್ಳಕೆರೆ ತಾಲ್ಲೂಕು ನಾಯಕನ ಹಟ್ಟಿ ಹೋಬಳಿಗೆ ಬಸ್ ಸೌಲಭ್ಯ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೦೦ (೬೦೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕು ನಾಯಕನ ಹಟ್ಟಿ ಹೋಬಳಿಯ ಸುತ್ತಮುತ್ತಲಿನ ಹಳ್ಳಿಗಳಿಗೆ ಸಮರ್ಪಕವಾದ ಬಸ್ಸುಗಳ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆಯೇ ;

(ಆ) ನಾಯಕನ ಹಟ್ಟಿಯಿಂದ ಪ್ರತಿದಿನ ಚಳ್ಳಕೆರೆ, ಚಿತ್ರದುರ್ಗ, ಮೊಳಕಾಲ್ಮೂರು, ಹೊಸಪೇಟೆ ಮಾರ್ಗವಾಗಿ ಎಷ್ಟು ಬಸ್ಸುಗಳನ್ನು ಬಿಡಲಾಗಿದೆ ; (ವಿವರ ನೀಡುವುದು)

(ಇ) ಈ ಭಾಗದ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಬಸ್ಸುಗಳನ್ನು ಸಮಯಕ್ಕೆ ಸರಿಯಾಗಿ ಬಿಡಲಾಗುತ್ತಿದೆಯೇ ?



## ವಿಜಯಪುರ ಜಿಲ್ಲೆಯ ಜಿಲ್ಲಾ ಆಸ್ಪತ್ರೆಯನ್ನು ವೈದ್ಯಕೀಯ ಕಾಲೇಜು ಮಾಡುವ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೬೦೧ (೬೦೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರದಲ್ಲಿ ಈಗಿರುವ ಜಿಲ್ಲಾ ಆಸ್ಪತ್ರೆಯನ್ನು ಸರ್ಕಾರಿ ವೈದ್ಯಕೀಯ ಕಾಲೇಜು ಮಾಡಲು ಸರ್ಕಾರ ನಿರ್ಣಯಿಸಿದೆಯೇ ;

(ಆ) ನಿರ್ಣಯಿಸಿದ್ದರೆ, ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮವೇನು ?

## ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಅನುದಾನ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೬೦೨ (೬೦೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ, ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಒದಗಿಸಲು ಅವಕಾಶ ಮಾಡಿಕೊಡಬೇಕೆಂಬ ಬೇಡಿಕೆಗೆ ಸರ್ಕಾರದ ಕ್ರಮವೇನು ;

(ಆ) ಶಾಸಕರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ಶಿಕ್ಷಣ ಸಂಸ್ಥೆಗಳಿಗೆ ಟೆಲಿವಿಷನ್ ಹಾಗೂ ಸೆಟ್‌ಆಪ್ ಬಾಕ್ಸ್ ಒದಗಿಸಲು ಅವಕಾಶ ಕಲ್ಪಿಸಲು ಸರ್ಕಾರದ ಕ್ರಮವೇನು ?

## ಮೊರಾರ್ಜಿ ಮತ್ತು ಕಿತ್ತೂರ ರಾಣಿ ಚೆನ್ನಮ್ಮ ವಸತಿ ಶಾಲೆಗಳ

## ಸಿಬ್ಬಂದಿಗಳ ಸೇವಾ ಸೌಲಭ್ಯಗಳು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೬೦೩ (೬೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಿಬ್ಬಂದಿಗೆ ಸರ್ಕಾರ ಒದಗಿಸಿರುವ ಸೇವಾ ಹಾಗೂ ನಿವೃತ್ತಿ ಸೌಲಭ್ಯಗಳು ಯಾವುವು ;

(ಆ) ಸರ್ಕಾರಿ ಶಿಕ್ಷಕರಿಗೆ ನೀಡಿರುವ ಯಾವ ಯಾವ ಸೌಲಭ್ಯಗಳನ್ನು ಇವರಿಗೆ ನೀಡಲಾಗಿದೆ ಹಾಗೂ ನೀಡಲಾಗಿಲ್ಲ ? (ಅದರ ಸಂಪೂರ್ಣ ವಿವರ ನೀಡುವುದು)

## ಸ್ನಾತಕೋತ್ತರ ಪದವಿ ಪಡೆದ ವೈದ್ಯರ ವೇತನದ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೬೦೪ (೬೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ಸ್ನಾತಕೋತ್ತರ ಪದವಿ ಪಡೆದ ವೈದ್ಯರುಗಳಿಗೆ ನೀಡುತ್ತಿರುವ ಸಂಬಳವೆಷ್ಟು ;

(ಆ) ತತ್ಸಮಾನ ಸ್ನಾತಕೋತರ ಪದವಿ ಪಡೆದ ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ ಭೋದಕ ವೈದ್ಯರಿಗೆ AICT ವೇತನ ಶ್ರೇಣಿ ಪ್ರಕಾರ ನೀಡುತ್ತಿರುವ ಸಂಬಳವೆಷ್ಟು ;



(ಇ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಒಟ್ಟು ಇರಬೇಕಾದ ತಜ್ಞ ವೈದ್ಯರ ಸಂಖ್ಯೆ ಎಷ್ಟು ; ಈಗಿರುವ ತಜ್ಞ ವೈದ್ಯರ ಸಂಖ್ಯೆ ಎಷ್ಟು ? (ಜಿಲ್ಲಾವಾರು, ಆಸ್ಪತ್ರೆವಾರು, ಪ್ರಾಥಮಿಕ ಆರೋಗ್ಯ ಕೇಂದ್ರವಾರು ವಿವರ ನೀಡುವುದು)

## ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ನೋಂದಾಯಿತ ಆಸ್ಪತ್ರೆಗಳು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೬೦೫ (೬೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಜಪೇಯಿ ಆರೋಗ್ಯ ಶ್ರೀ ಯೋಜನೆಯಡಿ ರಾಜ್ಯದಲ್ಲಿ ಹಾಗೂ ರಾಜ್ಯದ ಹೊರಗಡೆ ನೋಂದಾಯಿತ ಆಸ್ಪತ್ರೆಗಳು ಎಷ್ಟು ; (ನೋಂದಾಯಿತ ಆಸ್ಪತ್ರೆಗಳ ಪಟ್ಟಿ ನೀಡಿ)

(ಆ) ರಾಜ್ಯದ ಹೊರಗಡೆ ನೋಂದಾಯಿತ ಆಸ್ಪತ್ರೆಗಳಲ್ಲಿ ರೋಗಿಗಳ ಕಡೆಯಿಂದಲೂ ಹಣ ವಸೂಲಿ ಮಾಡುತ್ತಿರುವ ಬಗ್ಗೆ ದೂರು ಬಂದಿದೆಯೇ ;

(ಇ) ಯಾವ ಯಾವ ಶಸ್ತ್ರ ಚಿಕಿತ್ಸೆಗೆ ಎಷ್ಟು ಮೊತ್ತದ ಹಣವನ್ನು ನಿಗದಿಪಡಿಸಲಾಗಿದೆ ;

(ಈ) ಇದನ್ನು ನಿಗದಿಪಡಿಸಲು ಅನುಸರಿಸುವ ಮಾನದಂಡ ಹಾಗೂ

ಮಾರ್ಗಗಳೇನು ;

(ಉ) ವಾಜಪೇಯಿ ಆರೋಗ್ಯ ಶ್ರೀ ಕುರಿತು ಹಲವು ಬೇಡಿಕೆಗಳನ್ನಿಟ್ಟುಕೊಂಡು ಆಸ್ಪತ್ರೆಗಳು ನಡೆಸಿದ ಮುಷ್ಕರ ಹಾಗೂ ಅದರ ನಂತರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

**ಕಲಬುರಗಿ ಜಿಲ್ಲೆಯಲ್ಲಿ ಹರಡಿರುವ ರೋಗಗಳಿಗೆ ಸಂಬಂಧಿಸಿದಂತೆ.**

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೬೦೬ (೫೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಸಾವಿರಕ್ಕೆ ನೂರು ಜನಕ್ಕೆ ಶ್ವಾಸಕೋಶ ಸಂಬಂಧಿ ಖಾಯಿಲೆ ಮತ್ತು ಅಸ್ತಮಾ ರೋಗಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿ ಇಂತಹ ಖಾಯಿಲೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತವಾಗಿ ವಿಶೇಷ ಯೋಜನೆಗಳನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದೆಯೇ ; ಇದ್ದಲ್ಲಿ ವಿವರ ಒದಗಿಸುವುದು ;

(ಇ) ಕಲಬುರಗಿ ಜಿಲ್ಲೆಯಲ್ಲಿ ವರ್ಷಕ್ಕೆ ಎಷ್ಟು ಬಾರಿ ಸರ್ಕಾರದ ವತಿಯಿಂದ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ ; ಮತ್ತು ಆರೋಗ್ಯ ತಪಾಸಣೆಗೆ ಅನುಸರಿಸುತ್ತಿರುವ ವಿಧಗಳಾವುವು ?



**ಸೀಮೆಎಣ್ಣೆ ಮುಕ್ತ ರಾಜ್ಯ ಪ್ರಸ್ತಾವನೆ.**

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೦೭ (೫೭೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕವನ್ನು ಸೀಮೆಎಣ್ಣೆ ಮುಕ್ತ ರಾಜ್ಯವನ್ನಾಗಿ ಮಾಡುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದಲ್ಲಿ ಸೀಮೆಎಣ್ಣೆ ಮಾರಾಟ ಮಾಡಿ ಜೀವನ ನಡೆಸುತ್ತಿರುವ ರಿಟೈಲರ್ ಹಾಗೂ ಚಿಲ್ಲರೆ ವ್ಯಾಪಾರಿಗಳ ಜೀವನಕ್ಕೆ ಮಾರ್ಗೋಪಾಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಇವರಿಗೆ ಬದಲಿ ನ್ಯಾಯಬೆಲೆ ಅಂಗಡಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ಒದಗಿಸುವುದು)

**ಚಿತ್ರದುರ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ.**

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೬೦೮ (೫೭೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲಾ ಸರ್ಕಾರಿ ಆಸ್ಪತ್ರೆಯನ್ನು ೭೫೦ ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಕಾರ್ಯಗತ ಆಗಿದೆಯೇ ; ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಮೇಲ್ದರ್ಜೆಗೇರಿಸುವ ಕಾರ್ಯ ಶೀಘ್ರವಾಗಿ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ಒದಗಿಸುವುದು)

## ಮೊರಾರ್ಜಿ ವಸತಿ ಶಾಲೆಗಳ ಬಗ್ಗೆ .

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೬೦೯ (೬೩೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳು, ಅಲ್ಪಸಂಖ್ಯಾತರ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳಿಗಿಂತ ಉತ್ತಮವಾಗಿರುವುದೇ ; ಇದ್ದಲ್ಲಿ, ಕಾರಣಗಳನ್ನು ತಿಳಿಸುವುದು ;

(ಆ) ಈ ಎರಡೂ ಇಲಾಖೆಯು ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳ ಬೋಧಕ, ಬೋಧಕೇತರ ಸಿಬ್ಬಂದಿಗೆ ಪಾವತಿಸುತ್ತಿರುವ ವೇತನಗಳು ಸಮನಾಗಿರುವುದೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;



(ಇ) ಅಲ್ಪಸಂಖ್ಯಾತರ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳ ಬೋಧಕ, ಬೋಧಕೇತರ ಸಿಬ್ಬಂದಿಯವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿದ್ದು, ಅದೇ ಸಮಾಜ ಕಲ್ಯಾಣ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಯಲ್ಲಿನ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ವ್ಯತ್ಯಾಸಕ್ಕೆ ಕಾರಣಗಳೇನು ;

(ಈ) ಅಲ್ಪಸಂಖ್ಯಾತರ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳ ಸಿಬ್ಬಂದಿಯವರಿಗೆ ಸರ್ಕಾರಿ ನೌಕರರಿಗಿರುವಂತೆ ಕೆ.ಜಿ.ಐ.ಡಿ. ನೂತನ ಪಿಂಚಣಿ ಸೌಲಭ್ಯ ಮುಂತಾದ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು ಸಮಾಜ ಕಲ್ಯಾಣ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಯಲ್ಲಿನ ಸಿಬ್ಬಂದಿಗಳಿಗೆ ಸದರಿ ಸೌಲಭ್ಯವು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವ್ಯತ್ಯಾಸಕ್ಕೆ ಕಾರಣಗಳೇನು ?

## ಮೊರಾರ್ಜಿದೇಸಾಯಿ ವಸತಿ ಶಾಲೆಗಳ ಬಗ್ಗೆ.

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೬೧೦ (೬೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳನ್ನು ಹಾಗೂ ಅಲ್ಪಸಂಖ್ಯಾತರ ಇಲಾಖೆ ನಿರ್ವಹಿಸುವ ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳನ್ನು ಬೇರೆ ಬೇರೆ ಇಲಾಖೆಗಳು ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೊರಾರ್ಜಿದೇಸಾಯಿ ವಸತಿ ಶಿಕ್ಷಣ ಸಂಸ್ಥೆಗಳ ಶಾಲೆಗಳನ್ನು ಒಂದೇ ಇಲಾಖೆಯು ನಿರ್ವಹಿಸುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಇ) ಈ ಎರಡೂ ಇಲಾಖೆಗಳಲ್ಲಿ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರಿ ನೌಕರರಿಗೆ ಒದಗಿಸಿರುವ ಸೌಲಭ್ಯಗಳನ್ನು ನೀಡುವಲ್ಲಿ ಯಾವ ಕ್ರಮ ಕೈಗೊಳ್ಳಲಾಗುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ.03489 / 1000 ಪ್ರತಿಗಳು/06–02–15